VOLUME: 16 | 04 JULY 2026 | ಶನಿವಾರ | RS: 2 | PAGE: 06 ISSUE: 143 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ರಾಜಕೀಯ ಜಿದ್ದು, ಕುರ್ಚಿ ಕಾದಾಟದ ನಡುವೆ ಸೆನ್ಸಾರ್ ಆಗದೇ ಉಳಿದಿದ್ದ ದಳಪತಿ ವಿಜಯ್ ಅಭಿನಯದ ಕೊನೆಯ ಚಿತ್ರ 'ಜನನಾಯಗನ್' ಕೊನೆಗೂ ಸೆನ್ಸಾರ್ ಆಗಿದೆ. ಚಿತ್ರಕ್ಕೆ ಸೆನ್ಸಾರ್ ಮಂಡಳಿ ಎ ಸರ್ಟಿಫಿಕೇಟ್ ನೀಡಿದೆ. ಈ ಮೂಲಕ 'ಜನನಾಯಗನ್' ರಿಲೀಸ್‌ಗೆ ಸಿಬಿಎಫ್‌ಸಿ ಹಸಿರು ನಿಶಾನೆ ತೋರಿಸಿದೆ.



BHARATHA SARATHI
KANNADA DAILY NEWS PAPER
# ಭಾರತ ಸಾರಥಿ
CALL 9740160669
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## 'ಪಾಕ್‌ಗೆ ನೀರು ಬಿಡಲು ಸಾಧ್ಯವೇ ಇಲ್ಲ'

ನವದೆಹಲಿ: ಸಿಂಧೂ ಜಲ ಒಪ್ಪಂದಕ್ಕೆ ಸಂಬಂಧಿಸಿದಂತೆ ಭಾರತ ಇಂದು ಪಾಕಿಸ್ತಾನಕ್ಕೆ ಪ್ರಬಲ ಸಂದೇಶ ರವಾನಿಸಿದೆ. ಪಾಕಿಸ್ತಾನವು ಗಡಿಯಾಚೆಗಿನ ಭಯೋತ್ಪಾದನೆಗೆ ನಿರಂತರ ಬೆಂಬಲ ನೀಡುತ್ತಿರುವುದನ್ನು ನಿಲ್ಲಿಸಿದಿದ್ದರೆ ಸಿಂಧೂ ಜಲ ಒಪ್ಪಂದ ಮೇಲಿನ ಅಮಾನತು ಮುಂದುವರೆಯುತ್ತದೆ ಎಂದು ಭಾರತೀಯ ವಿದೇಶಾಂಗ ಸಚಿವಾಲಯ ಪುನರುಚ್ಚರಿಸಿದೆ.



ಸಿಂಧೂ ಜಲ ಒಪ್ಪಂದದ ಕುರಿತು ಭಾರತದ ನಿಲುವು ಸ್ಥಿರವಾಗಿದೆ. ಪಾಕಿಸ್ತಾನವು ಗಡಿಯಾಚೆಗಿನ ಭಯೋತ್ಪಾದನೆಗೆ ನಿರಂತರ ಬೆಂಬಲ ನೀಡುತ್ತಿರುವುದಕ್ಕೆ ಪ್ರತಿಕ್ರಿಯೆಯಾಗಿ ಸಿಂಧೂ ಜಲ ಒಪ್ಪಂದವನ್ನು ಪ್ರಸ್ತುತ ತಡೆಹಿಡಿಯಲಾಗಿದೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ. ಇದೇ ವೇಳೆ ತೀಸ್ತಾ ನದಿ ಯೋಜನೆಯ ಬಗ್ಗೆಯೂ ವಿದೇಶಾಂಗ ಸಚಿವಾಲಯ ಪ್ರತಿಕ್ರಿಯಿಸಿದ್ದು ಪ್ರಸ್ತಾವಿತ ತೀಸ್ತಾ ನದಿ ಯೋಜನೆಯ ಕುರಿತು ಭಾರತ ಈಗಾಗಲೇ ಬಾಂಗ್ಲಾದೇಶಕ್ಕೆ ತನ್ನ ನಿಲುವನ್ನು ಸ್ಪಷ್ಟಪಡಿಸಿದೆ ಎಂದು ರಣಧೀರ್ ಜೈಸ್ವಾಲ್ ಹೇಳಿದರು.

> ಏಪ್ರಿಲ್ 22ರಂದು ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ ಭಾರತ ಸಿಂಧೂ ನದಿ ನೀರು ಒಪ್ಪಂದವನ್ನು ಸ್ಥಗಿತಗೊಳಿಸಿತು. ಭಾರತದ ಈ ಬಲವಾದ ನಡೆ ಪಾಕಿಸ್ತಾನವನ್ನು ನಡುಗಿಸಿದೆ. ಈ ವಾರದ ಆರಂಭದಲ್ಲಿ, ಪಾಕಿಸ್ತಾನ ಪೀಪಲ್ಸ್ ಪಾರ್ಟಿ ಅಧ್ಯಕ್ಷ ಬಿಲಾವಲ್ ಭುಟ್ಟೋ-ಜರ್ದಾರಿ ಭಾರತಕ್ಕೆ ಬೆದರಿಕೆ ಹಾಕಿದರು.

ಏಪ್ರಿಲ್ 22ರಂದು ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ ಭಾರತ ಸಿಂಧೂ ನದಿ ನೀರು ಒಪ್ಪಂದವನ್ನು ಸ್ಥಗಿತಗೊಳಿಸಿತು. ಭಾರತದ ಈ ಬಲವಾದ ನಡೆ ಪಾಕಿಸ್ತಾನವನ್ನು ನಡುಗಿಸಿದೆ. ಈ ವಾರದ ಆರಂಭದಲ್ಲಿ, ಪಾಕಿಸ್ತಾನ ಪೀಪಲ್ಸ್ ಪಾರ್ಟಿ ಅಧ್ಯಕ್ಷ ಬಿಲಾವಲ್ ಭುಟ್ಟೋ–ಜರ್ದಾರಿ ಭಾರತಕ್ಕೆ ಬೆದರಿಕೆ ಹಾಕಿದರು. ನೀರನ್ನು ಕಾರ್ಯತಂತ್ರದ ಅಸ್ತ್ರವಾಗಿ ಬಳಸುತ್ತಿದೆ ಎಂದು ಆರೋಪಿಸಿದ್ದರು.

ತೀಸ್ತಾ ನದಿ ಸಮಗ್ರ ನಿರ್ವಹಣೆ ಮತ್ತು ಪುನಃಸ್ಥಾಪನೆ ಯೋಜನೆಯ ಕುರಿತಾದ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ರಣಧೀರ್ ಜೈಸ್ವಾಲ್, ಬಾಂಗ್ಲಾದೇಶದಲ್ಲಿನ ಯೋಜನೆಗಳಿಗೆ ಭಾರತದ ಅಭಿವೃದ್ಧಿ ನೆರವು ಪರಸ್ಪರ ಒಪ್ಪಿದ ಮಾರ್ಗಸೂಚಿಯನ್ನು ಆಧರಿಸಿದೆ. ಇದನ್ನು ನಿಯಮಿತವಾಗಿ ಪರಿಶೀಲಿಸಲಾಗುತ್ತದೆ ಎಂದು ಹೇಳಿದರು. ತೀಸ್ತಾ ನದಿ ಯೋಜನೆಯ ಕುರಿತು ನಮ್ಮ ಅಭಿಪ್ರಾಯಗಳನ್ನು ಈಗಾಗಲೇ ಬಾಂಗ್ಲಾದೇಶಕ್ಕೆ ತಿಳಿಸಲಾಗಿದೆ. ತೀಸ್ತಾ ಸಮಸ್ಯೆಗೆ ನಮ್ಮ ಒಟ್ಟಾರೆ ವಿಧಾನದಲ್ಲಿ ನಾವು ಎಲ್ಲಾ ಸಂಬಂಧಿತ ಬೆಳವಣಿಗೆಗಳನ್ನು ಗಣನೆಗೆ ತೆಗೆದುಕೊಳ್ಳುತ್ತೇವೆ ಎಂದು ಜೈಸ್ವಾಲ್ ಹೇಳಿದರು.

ತೀಸ್ತಾ ಮತ್ತು ಭಾರತದ ಮೂಲಕ ಹರಿಯುವ ಇತರ ಗಡಿಯಾಚೆಗಿನ ನದಿಗಳ ನಿರ್ವಹಣೆಗೆ ಬಾಂಗ್ಲಾದೇಶ ಮತ್ತು ಚೀನಾ ಸಹಕರಿಸಲು ಒಪ್ಪಿಕೊಂಡ ಕೆಲವೇ ದಿನಗಳಲ್ಲಿ ವಿದೇಶಾಂಗ ಸಚಿವಾಲಯದ ಈ ಹೇಳಿಕೆಗಳು ಬಂದಿವೆ.



ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಚುನಾವಣಾ ಆಯೋಗದ ನಿಯಮಗಳನ್ನು ಉಲ್ಲಂಘಿಸಿ ಅಕ್ರಮಗಳು ನಡೆಯುತ್ತಿವೆ ಎಂದು ಆರೋಪಿಸಿ ಬಿಜೆಪಿ-ಜೆಡಿಎಸ್ ಮೈತ್ರಿ ಪಕ್ಷದ ವತಿಯಿಂದ ರಾಮನಗರ ಜಿಲ್ಲಾಧಿಕಾರಿ ಕಚೇರಿ ಎದುರು ಶುಕ್ರವಾರ ಬೃಹತ್ ಪ್ರತಿಭಟನೆ ನಡೆಯಿತು. ಯುವ ಜನತಾದಳ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ರಾಜ್ಯ ಸರ್ಕಾರ, ಜಿಲ್ಲಾಡಳಿತ ಹಾಗೂ ಚುನಾವಣಾ ಪ್ರಕ್ರಿಯೆ ಕುರಿತು ತೀವ್ರ ಆಕ್ಷೇಪ ವ್ಯಕ್ತಪಡಿಸಲಾಯಿತು.

## 'ಜಿಬಿಎ ವಾರ್ಡ್‌ಗಳಲ್ಲಿ ಸಮಾನಾಂತರ ಎಸ್‌ಐಆರ್ ತಕ್ಷಣ ನಿಲ್ಲಿಸಿ'

ಬೆಂಗಳೂರು: ಗ್ರೇಟರ್ ಬೆಂಗಳೂರು ಆಡಳಿತ (ಜಿಬಿಎ) ವ್ಯಾಪ್ತಿಯ 27 ವಾರ್ಡ್‌ಗಳಲ್ಲಿ ಕರ್ನಾಟಕ ರಾಜ್ಯ ಚುನಾವಣಾ ಆಯೋಗ ನಡೆಸುತ್ತಿರುವ ಸಮಾನಾಂತರ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನು ತಕ್ಷಣ ಸ್ಥಗಿತಗೊಳಿಸಬೇಕು ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆಗ್ರಹಿಸಿದರು.





ಮಲ್ಲೇಶ್ವರದ ರಾಜ್ಯ ಬಿಜೆಪಿ ಕಚೇರಿ ಜಗನ್ನಾಥ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ಕೇಂದ್ರ ಚುನಾವಣಾ ಆಯೋಗ ರಾಜ್ಯಾದ್ಯಂತ ಎಸ್‌ಐಆರ್ ಪ್ರಕ್ರಿಯೆ ನಡೆಸುತ್ತಿರುವ ಸಂದರ್ಭದಲ್ಲಿ, ಜಿಬಿಎ ವ್ಯಾಪ್ತಿಯಲ್ಲಿ ರಾಜ್ಯ ಚುನಾವಣಾ ಆಯೋಗ ಮತ್ತೊಂದು ಪರಿಷ್ಕರಣೆ ನಡೆಸುತ್ತಿರುವುದು ಮತದಾರರಲ್ಲಿ ಗೊಂದಲ ಸೃಷ್ಟಿಸಿದೆ ಎಂದು ಆರೋಪಿಸಿದರು.

ಸುಮಾರು ಎರಡು ದಶಕಗಳ ಬಳಿಕ ನಡೆಯುತ್ತಿರುವ ಎಸ್‌ಐಆರ್ ಪ್ರಕ್ರಿಯೆಯ ಉದ್ದೇಶ ಅಕ್ರಮ ಮತದಾರರನ್ನು ಗುರುತಿಸುವುದು, ಮೃತಪಟ್ಟವರ ಹೆಸರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕುವುದು ಹಾಗೂ ಮತದಾರರ ಪಟ್ಟಿಯನ್ನು ನಿಖರಗೊಳಿಸುವುದಾಗಿದೆ ಎಂದು ಅವರು ಹೇಳಿದರು. ನಗರ ಪ್ರದೇಶಗಳಲ್ಲಿ ಅನೇಕ ಮತದಾರರ ಹೆಸರುಗಳು ಒಂದಕ್ಕಿಂತ ಹೆಚ್ಚು ಸ್ಥಳಗಳಲ್ಲಿ ದಾಖಲಾಗಿರುವುದು ಹಾಗೂ ಹಲವು ಮಂದಿ ಬೇರೆಡೆ ವಾಸಿಸುತ್ತಿದ್ದರೂ ಹಳೆಯ ಮತದಾರರ ಪಟ್ಟಿಯಲ್ಲಿ ಹೆಸರು ಉಳಿದಿರುವುದರಿಂದ ಮತದಾನದ ಪ್ರಮಾಣದ ಮೇಲೂ ಪರಿಣಾಮ ಬೀರುತ್ತಿದೆ. ಈ ಸಮಸ್ಯೆಗಳನ್ನು ನಿವಾರಿಸಲು ಎಸ್‌ಐಆರ್ ಅಗತ್ಯವಾಗಿದೆ ಎಂದು ವಿವರಿಸಿದರು. ಮಸೀದಿಗಳು, ಶಾದಿ ಮಹಲ್‌ಗಳು ಹಾಗೂ ಕಲ್ಯಾಣ ಮಂಟಪಗಳಲ್ಲಿ ಮತದಾರರ ಅರ್ಜಿಗಳನ್ನು ಭರ್ತಿ ಮಾಡಿಸಲಾಗುತ್ತಿದೆ ಎಂದು ಆರೋಪಿಸಿದ ಅವರು, ನಿಯಮಾನುಸಾರ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒಗಳು) ಮನೆಮನೆಗೆ ತೆರಳಿ ಅರ್ಜಿಗಳನ್ನು ವಿತರಿಸಿ ಮಾಹಿತಿ ಸಂಗ್ರಹಿಸಬೇಕು. ಆದರೆ ಈ ನಿಯಮಗಳನ್ನು ಪಾಲಿಸಲಾಗುತ್ತಿಲ್ಲ ಎಂದು ಹೇಳಿದರು.

ಇದರ ಮೂಲಕ ಅಕ್ರಮವಾಗಿ ಮತದಾರರನ್ನು ಸೇರ್ಪಡೆಗೊಳಿಸುವ ಪ್ರಯತ್ನ ನಡೆಯುತ್ತಿದೆ ಎಂದು ಹೇಳಿದರು.

ಮುಂದಿನ ಚುನಾವಣೆಗಳಲ್ಲಿ ರಾಜಕೀಯ ಲಾಭ ಪಡೆಯುವ ಉದ್ದೇಶದಿಂದ ಒಂದು ಸಮುದಾಯದ ಮತದಾರರನ್ನು ವ್ಯವಸ್ಥಿತವಾಗಿ ಮತದಾರರ ಪಟ್ಟಿಗೆ ಸೇರಿಸುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದ ಅವರು, ಈ ಬಗ್ಗೆ ಚುನಾವಣಾ ಆಯೋಗ ತಕ್ಷಣ ಮಧ್ಯಪ್ರವೇಶಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಬಿಎಲ್‌ಒಗಳಿಗೆ ಸಮರ್ಪಕ ತರಬೇತಿ ನೀಡದೆ, ಅವರ ಮೇಲೆ ಒತ್ತಡ ಹೇರಿ ನಿಯಮಬಾಹಿರವಾಗಿ ಕಾರ್ಯನಿರ್ವಹಿಸುವಂತೆ ಮಾಡಲಾಗುತ್ತಿದೆ ಎಂದು ಆರೋಪಿಸಿದ ಶೋಭಾ ಕರಂದ್ಲಾಜೆ, ರಾಜ್ಯ ಸರ್ಕಾರ ಕಾನೂನುಬದ್ಧವಾಗಿ ಕಾರ್ಯನಿರ್ವಹಿಸಬೇಕು ಎಂದು ಆಗ್ರಹಿಸಿದರು.

## 2-3 ದಿನಗಳಲ್ಲಿ ಭಾರೀ ಮಳೆ ನಿರೀಕ್ಷೆ

ಬೆಂಗಳೂರು: ಕರಾವಳಿ ಜಿಲ್ಲೆಗಳು ಮತ್ತು ಮಲೆನಾಡು ಭಾಗದಲ್ಲಿ ಇನ್ನೂ ಕೆಲ ದಿನಗಳ ಕಾಲ ವರುಣಾರ್ಭಟ ಮುಂದುವರಿಯಲಿದ್ದು ಭಾರಿ ಮಳೆ ನಿರೀಕ್ಷಿಸಲಾಗಿದೆ. ಕರಾವಳಿ ಮತ್ತು ದಕ್ಷಿಣ ಒಳನಾಡು ಭಾಗದಲ್ಲಿ ಜುಲೈ 5ರ ವರೆಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದ್ದರೆ, ಉತ್ತರ ಒಳನಾಡು ಭಾಗದ ಹಲವೆಡೆ ಜುಲೈ 7ರ ವರೆಗೆ ವರ್ಷಧಾರೆ ನಿರೀಕ್ಷಿಸಲಾಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಮಳೆಯ ಜೊತೆಗೆ ತೀವ್ರ ಗಾಳಿಯ ಸಾಧ್ಯತೆಯ ಬಗ್ಗೆಯೂ ಎಚ್ಚರಿಕೆ ನೀಡಲಾಗಿದೆ

ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಒಂದು ಅಥವಾ ಎರಡು ಸ್ಥಳಗಳಲ್ಲಿ ಗಂಟೆಗೆ 30–40 ಕಿಲೋ ಮೀಟರ್ ವೇಗದ ಗಾಳಿಯ ಜೊತೆಗೆ ಭಾರಿ ಮಳೆಯ ಮುನ್ಸೂಚನೆ ಇದೆ. ದಕ್ಷಿಣ ಒಳನಾಡಿನ ಶಿವಮೊಗ್ಗ, ಚಿಕ್ಕಮಗಳೂರು ಹಾಸನ ಸೇರಿ ಬಳ್ಳಾರಿಯ ಕೆಲವೆಡೆ ಸಾಧಾರಾಣ ಮಳೆ ಸಾಧ್ಯತೆ ಇದೆ.

ಬೆಂಗಳೂರು ಗ್ರಾಮಾಂತರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ತುಮಕೂರು ಮತ್ತು ವಿಜಯನಗರಗಳಲ್ಲಿಯೂ ವರುಣನ ಆಗಮನದ ಬಗ್ಗೆ ಇಲಾಖೆ ಅಂದಾಜಿಸಿದೆ. ಉತ್ತರ ಒಳನಾಡಿನ ಹಲವೆಡೆಯೂ ಗಾಳಿ ಮಳೆಯ ಎಚ್ಚರಿಕೆ ನೀಡಲಾಗಿದೆ. ತುಂತುರು ಮಳೆ ಅಥವಾ ಸಾಧಾರಣ ಮಳೆಯಾಗುವ ಸಾಧ್ಯತೆ ಹೆಚ್ಚಿದೆ.

ದಿನವಿಡೀ ಬಲವಾದ ಗಾಳಿ ಬೀಸಲಿದ್ದು, ಕೆಲವೆಡೆ ಗಾಳಿಯ ವೇಗವು ಗಂಟೆಗೆ 56 ಕಿ.ಮೀ.ಗಿಂತಲೂ ಹೆಚ್ಚಾಗುವ ಸಾಧ್ಯತೆ ಇದೆ. ನಗರದ ಗರಿಷ್ಠ ತಾಪಮಾನ 29 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ತಾಪಮಾನ 20 ಡಿಗ್ರಿ ಸೆಲ್ಸಿಯಸ್ ಇರಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

## ಯಶವಂತಪುರದಲ್ಲೂ ಎಸ್‌ಐಆರ್ ಅಕ್ರಮ

ಬೆಂಗಳೂರು: ರಾಜ್ಯದಲ್ಲಿ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ವೇಳೆ ವ್ಯಾಪಕ ಅಕ್ರಮಗಳು ನಡೆಯುತ್ತಿದ್ದು, ವಿಶೇಷವಾಗಿ ಯಶವಂತಪುರ ವಿಧಾನಸಭೆ ಕ್ಷೇತ್ರದಲ್ಲಿ ನಿಯಮ ಉಲ್ಲಂಘಿಸಿ ಮತದಾರರ ಪಟ್ಟಿ ಪರಿಷ್ಕರಣೆ ನಡೆಸಲಾಗುತ್ತಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಆರೋಪಿಸಿದರು.



ಜೆಡಿಎಸ್ ರಾಜ್ಯ ಕಚೇರಿ ಜೆ.ಪಿ.ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಮನಗರ ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಕೇಂದ್ರ ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಉಲ್ಲಂಘಿಸಿ ಎಸ್‌ಐಆರ್ ಪ್ರಕ್ರಿಯೆ ನಡೆಸಲಾಗುತ್ತಿದೆ ಎಂದು ದೂರಿದರು. ಈ ಸಂಬಂಧ ವಿಡಿಯೊ ದಾಖಲೆಗಳನ್ನು ಮಾಧ್ಯಮಗಳ ಮುಂದೆ ಬಿಡುಗಡೆ ಮಾಡಿದರು.

ಯಶವಂತಪುರ ವಿಧಾನಸಭೆ ಕ್ಷೇತ್ರದಲ್ಲಿ ಸ್ಥಳೀಯ ಶಾಸಕರ ಸೂಚನೆಯಂತೆ ಅಧಿಕಾರಿಗಳು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಸೇರಿಕೊಂಡು ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯನ್ನು ತಿರುಚುತ್ತಿದ್ದಾರೆ ಎಂದು ಆರೋಪಿಸಿದ ಅವರು, ಕ್ಷೇತ್ರದ ಶಾಸಕರ ಭಾವಚಿತ್ರಗಳು ಹಾಗೂ ಮತದಾರರ ಪಟ್ಟಿಯನ್ನು ಬಳಸಿಕೊಂಡು ಪರಿಷ್ಕರಣೆ ನಡೆಸುತ್ತಿರುವ ದೃಶ್ಯಗಳು ತಮ್ಮ ಬಳಿ ಇವೆ ಎಂದು ಹೇಳಿದರು.

> ಯಶವಂತಪುರ ವಿಧಾನಸಭೆ ಕ್ಷೇತ್ರದಲ್ಲಿ ಸ್ಥಳೀಯ ಶಾಸಕರ ಸೂಚನೆಯಂತೆ ಅಧಿಕಾರಿಗಳು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಸೇರಿಕೊಂಡು ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯನ್ನು ತಿರುಚುತ್ತಿದ್ದಾರೆ ಎಂದು ಆರೋಪಿಸಿದ ಅವರು, ಕ್ಷೇತ್ರದ ಶಾಸಕರ ಭಾವಚಿತ್ರಗಳು ಹಾಗೂ ಮತದಾರರ ಪಟ್ಟಿಯನ್ನು ಬಳಸಿಕೊಂಡು ಪರಿಷ್ಕರಣೆ ನಡೆಸುತ್ತಿರುವ ದೃಶ್ಯಗಳು ತಮ್ಮ ಬಳಿ ಇವೆ.

ಪರಿಷ್ಕರಣೆ ಸಿಬ್ಬಂದಿ ಮನೆಮನೆಗೆ ತೆರಳಿ ಮಾಹಿತಿ ಸಂಗ್ರಹಿಸುವ ಬದಲು, ಸರ್ಕಾರದ ಒತ್ತಡದಲ್ಲಿ ಏಕಪಕ್ಷೀಯವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಇದು ಕೇಂದ್ರ ಚುನಾವಣಾ ಆಯೋಗದ ಮಾರ್ಗಸೂಚಿಗಳಿಗೆ ವಿರುದ್ಧವಾಗಿದೆ ಎಂದು ಕುಮಾರಸ್ವಾಮಿ ಆರೋಪಿಸಿದರು.

ಯಶವಂತಪುರದಲ್ಲಿ ನಿಯಮಾನುಸಾರ ಕಾರ್ಯನಿರ್ವಹಿಸುತ್ತಿದ್ದ ಅಧಿಕಾರಿ ಯೊಬ್ಬರು ತಮ್ಮ ಪಕ್ಷದ ಕಾರ್ಯಕರ್ತರ ಎದುರು ಸಿಕ್ಕಿಬಿದ್ದಿದ್ದು, ಬಳಿಕ ಕ್ಷಮೆಯಾಚಿಸಿರುವುದಾಗಿ ಹಾಗೂ ಮತ್ತೊಬ್ಬ ಅಧಿಕಾರಿ ವಿಡಿಯೊ ಚಿತ್ರೀಕರಣ ಮಾಡದಂತೆ ಮನವಿ ಮಾಡಿರುವುದಾಗಿ ಅವರು ಹೇಳಿದರು.

ರಾಜ್ಯ ಸರ್ಕಾರ ಆಡಳಿತ ಯಂತ್ರವನ್ನು ದುರ್ಬಳಕೆ ಮಾಡಿಕೊಂಡು ಮತದಾರರ ಪಟ್ಟಿಯನ್ನು ತನ್ನ ಅನುಕೂಲಕ್ಕೆ ತಕ್ಕಂತೆ ಪರಿಷ್ಕರಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದ ಕುಮಾರಸ್ವಾಮಿ, ಈವರೆಗೆ ನಡೆದಿರುವ ಎಸ್‌ಐಆರ್ ಪ್ರಕ್ರಿಯೆಯನ್ನು ಸಂಪೂರ್ಣ ರದ್ದುಪಡಿಸಿ ಹೊಸದಾಗಿ ಪರಿಷ್ಕರಣೆ ನಡೆಸಬೇಕು ಎಂದು ಆಗ್ರಹಿಸಿದರು.

ರಾಮನಗರ ಹಾಗೂ ಬೆಂಗಳೂರು ನಗರ ಜಿಲ್ಲಾಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಕೇಂದ್ರ ಚುನಾವಣಾ ಆಯೋಗವನ್ನು ಒತ್ತಾಯಿಸುವುದಾಗಿ ತಿಳಿಸಿದ ಅವರು, ತಾವು ಸ್ವತಃ ಮುಖ್ಯ ಚುನಾವಣಾ ಆಯುಕ್ತರನ್ನು ಭೇಟಿ ಮಾಡಿ ರಾಜ್ಯದಲ್ಲಿ ನಡೆದಿರುವ ಎಲ್ಲ ಆರೋಪಿತ ಅಕ್ರಮಗಳ ಕುರಿತು ದೂರು ಸಲ್ಲಿಸುವುದಾಗಿ ಹೇಳಿದರು.

ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯಿಂದ ಸ್ಥಳೀಯ ಅಧಿಕಾರಿಗಳನ್ನು ಹೊರಗಿಟ್ಟು, ಇತರೆ ರಾಜ್ಯಗಳ ಅಥವಾ ಹೊರಗಿನ ದಕ್ಷ ಅಧಿಕಾರಿಗಳಿಗೆ ಜವಾಬ್ದಾರಿ ನೀಡಬೇಕು. ಇಲ್ಲವಾದರೆ ಈ ಪ್ರಕ್ರಿಯೆ ಮತ್ತಷ್ಟು ದುರ್ಬಳಕೆಯಾಗುವ ಸಾಧ್ಯತೆ ಇದೆ ಎಂದು ಅವರು ಅಭಿಪ್ರಾಯಪಟ್ಟರು.

ಇದೇ ವೇಳೆ ಮುಖ್ಯಮಂತ್ರಿ ವಿರುದ್ಧವೂ ವಾಗ್ದಾಳಿ ನಡೆಸಿದ ಕುಮಾರಸ್ವಾಮಿ, ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯಲ್ಲಿನ ಅಕ್ರಮಗಳಿಗೆ ರಾಜ್ಯ ಸರ್ಕಾರವೇ ಹೊಣೆ ಎಂದು ಆರೋಪಿಸಿದರು.

## ಮಳೆ ಕೊರತೆ: ಎಚ್ಚರಿಕೆಯ ಗಂಟೆ ನೀಡಿದ ಸಿಎಂ

ಬೆಂಗಳೂರು: ರಾಜ್ಯದಲ್ಲಿ ಮಳೆ ಕೊರತೆ ಹಾಗೂ ಎಲ್ ನಿನೊ ಪರಿಣಾಮದಿಂದ ಜಲವಿದ್ಯುತ್ ಉತ್ಪಾದನೆ ಕುಸಿಯುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ವಿದ್ಯುತ್ ಕ್ಷೇತ್ರದಲ್ಲಿ ಯಾವುದೇ ಬಿಕ್ಕಟ್ಟು ಎದುರಾಗದಂತೆ ಈಗಿನಿಂದಲೇ ಸಮಗ್ರ ತುರ್ತು ಕಾರ್ಯಯೋಜನೆ ರೂಪಿಸಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.





ಇಂಧನ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬರ ಪರಿಸ್ಥಿತಿ ಮತ್ತಷ್ಟು ತೀವ್ರಗೊಂಡರೆ ವಿದ್ಯುತ್ ಉತ್ಪಾದನೆ ಮತ್ತು ಪೂರೈಕೆಯ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇರುವುದರಿಂದ ಎಲ್ಲ ಮುನ್ನೆಚ್ಚರಿಕಾ ಕ್ರಮಗಳನ್ನು ತಕ್ಷಣ ಕೈಗೊಳ್ಳುವಂತೆ ನಿರ್ದೇಶಿಸಿದರು.

ರಾಜ್ಯದ ಜನತೆಗೆ ನಿರಂತರ ವಿದ್ಯುತ್ ಪೂರೈಕೆ ಸರ್ಕಾರದ ಮೊದಲ ಆದ್ಯತೆಯಾಗಿದ್ದು, ಜಲಾಶಯಗಳಲ್ಲಿ ನೀರಿನ ಮಟ್ಟ ಕುಸಿದರೂ ವಿದ್ಯುತ್ ಉತ್ಪಾದನೆಗೆ ಅಡ್ಡಿಯಾಗದಂತೆ ಪರ್ಯಾಯ ಮೂಲಗಳನ್ನು ಬಲಪಡಿಸಬೇಕು ಎಂದು ಮುಖ್ಯಮಂತ್ರಿ ಹೇಳಿದರು. ಸರ್ಕಾರಕ್ಕೆ ಮೀಸಲಾದ ಕಲ್ಲಿದ್ದಲು ಗಣಿಗಳನ್ನು ತಕ್ಷಣ ಕಾರ್ಯಾರಂಭಗೊಳಿಸಿ, ಸಾಕಷ್ಟು ಕಲ್ಲಿದ್ದಲು ಸಂಗ್ರಹವನ್ನು ಕಾಯ್ದುಕೊಳ್ಳಬೇಕು. ವಿದ್ಯುತ್ ಉತ್ಪಾದನಾ ಘಟಕಗಳಿಗೆ ಕಲ್ಲಿದ್ದಲು ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಾಗದಂತೆ ಸಾಗಣೆ ಹಾಗೂ ಸಂಗ್ರಹ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವಂತೆ ಸೂಚಿಸಿದರು.

ಸಭೆಯಲ್ಲಿ ಅಧಿಕಾರಿಗಳು ಹಿಂದಿನ ಮೂರು ವರ್ಷಗಳಿಂದ ರಾಜ್ಯದಲ್ಲಿ ವಿದ್ಯುತ್ ಕಡಿತವಾಗದಂತೆ ಯಶಸ್ವಿಯಾಗಿ ನಿರ್ವಹಿಸಿರುವುದಾಗಿ ಮಾಹಿತಿ ನೀಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, ನವೀಕರಿಸಬಹುದಾದ ಇಂಧನದ ಸಮರ್ಥ ಬಳಕೆಗಾಗಿ ಬ್ಯಾಟರಿ ಇಂಧನ ಸಂಗ್ರಹ ವ್ಯವಸ್ಥೆ ಹಾಗೂ ನೀರನ್ನು ಮೇಲ್ದಂಡೆಗೆ ಪಂಪ್ ಮಾಡಿ ಸಂಗ್ರಹಿಸುವ ವಿದ್ಯುತ್ ಯೋಜನೆಗಳನ್ನು ತ್ವರಿತವಾಗಿ ಜಾರಿಗೊಳಿಸಬೇಕು ಎಂದರು. ರಾಜ್ಯದಲ್ಲಿ ಉತ್ಪಾದನೆಯಾಗುವ ನವೀಕರಿಸಬಹುದಾದ ವಿದ್ಯುತ್ ಸಂಪೂರ್ಣವಾಗಿ ಬಳಕೆಯಾಗುವಂತೆ ಪ್ರಸರಣ ಜಾಲವನ್ನು ಬಲಪಡಿಸಿ, ಅನಗತ್ಯ ವಿದ್ಯುತ್ ನಿಯಂತ್ರಣ ಸಮಸ್ಯೆಯನ್ನು ನಿವಾರಿಸಬೇಕೆಂದು ಸೂಚಿಸಿದರು.

ರಾಜ್ಯವನ್ನು ಮಾಹಿತಿ ತಂತ್ರಜ್ಞಾನ ಮತ್ತು ಕೃತಕ ಬುದ್ಧಿಮತ್ತೆಯ ಪ್ರಮುಖ ಕೇಂದ್ರವನ್ನಾಗಿ ರೂಪಿಸುವ ಗುರಿಯನ್ನು ಉಲ್ಲೇಖಿಸಿದ ಮುಖ್ಯಮಂತ್ರಿ, ದತ್ತಾಂಶ ಕೇಂದ್ರಗಳು, ಕೃತಕ ಬುದ್ಧಿಮತ್ತೆ ಆಧಾರಿತ ಮೂಲಸೌಕರ್ಯ ಹಾಗೂ ಡಿಜಿಟಲ್ ಆರ್ಥಿಕತೆಯಿಂದ ಮುಂದಿನ ದಿನಗಳಲ್ಲಿ ವಿದ್ಯುತ್ ಬೇಡಿಕೆ ಗಣನೀಯವಾಗಿ ಹೆಚ್ಚಲಿದ್ದು, ಅದಕ್ಕೆ ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳಬೇಕೆಂದರು.

2035ರ ವೇಳೆಗೆ ರಾಜ್ಯದ ಗರಿಷ್ಠ ವಿದ್ಯುತ್ ಬೇಡಿಕೆ 38 ಗಿಗಾವ್ಯಾಟ್ ತಲುಪುವ ನಿರೀಕ್ಷೆಯಿರುವುದರಿಂದ, ಅದಕ್ಕೆ ತಕ್ಕಂತೆ ಹೊಸ ವಿದ್ಯುತ್ ಉತ್ಪಾದನಾ ಸಾಮರ್ಥ್ಯ, ಪ್ರಸರಣ ವ್ಯವಸ್ಥೆ ಹಾಗೂ ಹಣಕಾಸು ಯೋಜನೆಯನ್ನು ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ರೈತರಿಗೆ ಅನುಕೂಲವಾಗುವಂತೆ ರಾಜ್ಯ ಸರ್ಕಾರ ವರ್ಷಕ್ಕೆ ರೂ.22 ಸಾವಿರ ಕೋಟಿ ಕೃಷಿ ವಿದ್ಯುತ್ ಸಹಾಯಧನ ನೀಡುತ್ತಿದೆ ಎಂದು ತಿಳಿಸಿದ ಮುಖ್ಯಮಂತ್ರಿ, ಕೃಷಿ ವಿದ್ಯುತ್ ಪೂರೈಕೆಗೆ ಫೀಡರ್ ಸೌರೀಕರಣ, ಇಂಧನ ದಕ್ಷ ಪಂಪ್‌ಸೆಟ್‌ಗಳ ಬಳಕೆ ಹಾಗೂ ವಿದ್ಯುತ್ ಬೇಡಿಕೆ ನಿರ್ವಹಣಾ ಕಾರ್ಯಕ್ರಮಗಳನ್ನು ವೇಗಗೊಳಿಸಬೇಕು ಎಂದು ಸೂಚಿಸಿದರು. ಜೊತೆಗೆ ವಿದ್ಯುತ್ ವಿತರಣಾ ವ್ಯವಸ್ಥೆಯ ಆಧುನೀಕರಣಕ್ಕಾಗಿ ಪರಿಷ್ಕೃತ ವಿದ್ಯುತ್ ವಿತರಣಾ ಯೋಜನೆಯನ್ನು ತ್ವರಿತವಾಗಿ ಜಾರಿಗೊಳಿಸಿ, ಸ್ಮಾರ್ಟ್ ಮೀಟರ್‌ಗಳನ್ನು ಪಾರದರ್ಶಕವಾಗಿ ಮತ್ತು ನಿಗದಿತ ಅವಧಿಯಲ್ಲಿ ಅಳವಡಿಸಬೇಕು ಎಂದರು.

ಸಭೆಯಲ್ಲಿ ಇಂಧನ ಸಚಿವ ಕೆ.ಜೆ.ಜಾರ್ಜ್ ಮಾತನಾಡಿ, ಗೃಹಜ್ಯೋತಿ ಯೋಜನೆಯಿಂದ ಇಲಾಖೆಗೆ ಯಾವುದೇ ಹೆಚ್ಚುವರಿ ಹೊರೆ ಉಂಟಾಗಿಲ್ಲ ಎಂದು ಸ್ಪಷ್ಟಪಡಿಸಿದರು. ಆದರೆ ಸರ್ಕಾರಿ ಇಲಾಖೆಗಳು ವಿದ್ಯುತ್ ಸರಬರಾಜು ಕಂಪನಿಗಳಿಗೆ ಪಾವತಿಸಬೇಕಿರುವ ರೂ.12,631 ಕೋಟಿ ಬಾಕಿಯನ್ನು ಶೀಘ್ರವಾಗಿ ಬಿಡುಗಡೆ ಮಾಡುವುದು ಅಥವಾ ಹಣಕಾಸು ಭದ್ರತಾ ವ್ಯವಸ್ಥೆಯ ಮೂಲಕ ಪರಿಹರಿಸುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದರು.

ಸಭೆಯಲ್ಲಿ ವಿದ್ಯುತ್ ಸರಬರಾಜು ಕಂಪನಿಗಳ ಆರ್ಥಿಕ ಸ್ಥಿರತೆ ಹೆಚ್ಚಿಸುವುದು, ಕಲ್ಲಿದ್ದಲು ಭದ್ರತೆ, ವಿದ್ಯುತ್ ಪ್ರಸರಣ ಜಾಲ ಬಲಪಡಿಸುವುದು, ಭೂಸ್ವಾಧೀನ ಮತ್ತು ಹಕ್ಕುಮಾರ್ಗ ಸಮಸ್ಯೆಗಳನ್ನು ಶೀಘ್ರ ಪರಿಹರಿಸುವುದು, ರಾಜ್ಯಾದ್ಯಂತ ವಿದ್ಯುತ್ ಚಾಲಿತ ವಾಹನಗಳ ಚಾರ್ಜಿಂಗ್ ಕೇಂದ್ರಗಳನ್ನು ವಿಸ್ತರಿಸುವುದು ಸೇರಿದಂತೆ ಹಲವು ಮಹತ್ವದ ವಿಷಯಗಳ ಕುರಿತು ಚರ್ಚೆ ನಡೆಯಿತು. ಮಳೆ ಕೊರತೆಯ ಆತಂಕದ ನಡುವೆಯೇ ರಾಜ್ಯದಲ್ಲಿ ವಿದ್ಯುತ್ ಬಿಕ್ಕಟ್ಟು ಉಂಟಾಗದಂತೆ ಮುನ್ನೆಚ್ಚರಿಕೆ ವಹಿಸಲು ಸರ್ಕಾರ ಈಗಿನಿಂದಲೇ ಕಾರ್ಯತಂತ್ರ ರೂಪಿಸುತ್ತಿರುವುದು ಈ ಸಭೆಯ ಪ್ರಮುಖ ಸಂದೇಶವಾಗಿದೆ.

ಭಾರತ ಸಾರಥಿ
03/07/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಸರಜಾಪುರದಲ್ಲಿ ನೂತನ ಸ್ಟುಡಿಯೊ ಆರಂಭಿಸಿದ ಪೆಪ್ಪರ್‌ಫ್ರೈ

ಬೆಂಗಳೂರು

ದೇಶದ ಪ್ರಮುಖ ಪೀಠೋಪಕರಣ ಮತ್ತು ಗೃಹಾಲಂಕಾರ ಮಾರುಕಟ್ಟೆ ಸಂಸ್ಥೆಯಾದ ಪೆಪ್ಪರ್‌ಫ್ರೈ ಬೆಂಗಳೂರಿನ ಸರಜಾಪುರದಲ್ಲಿ ತನ್ನ ಹೊಸ ಕಂಪನಿ–ಸ್ವಾಮ್ಯದ, ಕಂಪನಿ–ನಿರ್ವಹಿತ (ಕೋಕೊ) ಸ್ಟುಡಿಯೊವನ್ನು ಆರಂಭಿಸಿದೆ.




ಈ ನೂತನ ಸ್ಟುಡಿಯೊ ಉದ್ಘಾಟನೆಯೊಂದಿಗೆ ಬೆಂಗಳೂರಿನಲ್ಲಿ ಪೆಪ್ಪರ್‌ಫ್ರೈನ ಒಟ್ಟು ಸ್ಟುಡಿಯೊಗಳ ಸಂಖ್ಯೆ ಒಂಬತ್ತಕ್ಕೆ ಏರಿಕೆಯಾಗಿದೆ. ಇದು ಗ್ರಾಹಕರಿಗೆ ಇನ್ನಷ್ಟು ಉತ್ತಮ, ವೈಯಕ್ತಿಕ ಹಾಗೂ ಅನುಭವಾತ್ಮಕ ಗೃಹೋಪಯೋಗಿ ವಸ್ತುಗಳ ಖರೀದಿ ಸೇವೆ ಒದಗಿಸುವ ಸಂಸ್ಥೆಯ ವಿಸ್ತರಣಾ ಯೋಜನೆಯ ಪ್ರಮುಖ ಹೆಜ್ಜೆಯಾಗಿದೆ.

ಸುಮಾರು 3,700 ಚದರ ಅಡಿ ವಿಸ್ತೀರ್ಣದ ಈ ಸ್ಟುಡಿಯೊದಲ್ಲಿ ವಿವಿಧ ಪ್ರಮುಖ ಬ್ರ್ಯಾಂಡ್‌ಗಳ ಪೀಠೋಪಕರಣಗಳು, ಹಾಸಿಗೆಗಳು, ಗೃಹಾಲಂಕಾರ ವಸ್ತುಗಳು, ಮಾಡ್ಯುಲರ್ ಗೃಹ ಪರಿಹಾರಗಳು ಹಾಗೂ ಜೀವನಶೈಲಿ ಉತ್ಪನ್ನಗಳು ಪ್ರದರ್ಶನಕ್ಕಿವೆ.

ಮನೆಗಳ ವಿವಿಧ ಕೊಠಡಿಗಳ ಮಾದರಿಗಳನ್ನು ಆಕರ್ಷಕವಾಗಿ ವಿನ್ಯಾಸಗೊಳಿಸಲಾಗಿದ್ದು, ಗ್ರಾಹಕರು ತಮ್ಮ ಮನೆಗೆ ಸೂಕ್ತವಾದ ವಿನ್ಯಾಸಗಳನ್ನು ನೇರವಾಗಿ ಅನುಭವಿಸುವ ಅವಕಾಶ ಕಲ್ಪಿಸಲಾಗಿದೆ.

ಜೊತೆಗೆ, ಪೆಪ್ಪರ್‌ಫ್ರೈನ ಪರಿಣಿತ ವಿನ್ಯಾಸ ಸಲಹೆಗಾರರು ಗ್ರಾಹಕರ ಅಗತ್ಯ ಮತ್ತು ಅಭಿರುಚಿಗೆ ತಕ್ಕಂತೆ ಮನೆ ಅಲಂಕಾರ ಹಾಗೂ ಒಳಾಂಗಣ ವಿನ್ಯಾಸದ ಕುರಿತು ಮಾರ್ಗದರ್ಶನ ನೀಡಲಿದ್ದಾರೆ.

## ಬಾದಾಮಿ ತಿಂದರೆ ದೇಹದ ಉಷ್ಣತೆ ಹೆಚ್ಚುತ್ತದೆಯೇ? ತಜ್ಞರ ಸ್ಪಷ್ಟನೆ

ಬೆಂಗಳೂರು

ಬೇಸಿಗೆಯಲ್ಲಿ ಬಾದಾಮಿ ಸೇವಿಸಿದರೆ ದೇಹದ ಉಷ್ಣತೆ ಹೆಚ್ಚುತ್ತದೆ ಎಂಬುದು ಜನರಲ್ಲಿ ವ್ಯಾಪಕವಾಗಿರುವ ನಂಬಿಕೆಯಾಗಿದ್ದರೂ, ಇದಕ್ಕೆ ಯಾವುದೇ ವೈಜ್ಞಾನಿಕ ಆಧಾರವಿಲ್ಲ ಎಂದು ತಜ್ಞರು ಸ್ಪಷ್ಟಪಡಿಸಿದ್ದಾರೆ. ಆರೋಗ್ಯಕರ ಕೊಬ್ಬು, ಪ್ರೋಟೀನ್ ಹಾಗೂ ನಾರಿನಾಂಶಗಳಿಂದ ಸಮೃದ್ಧವಾಗಿರುವ ಬಾದಾಮಿಯನ್ನು ವರ್ಷಪೂರ್ತಿ ಸಮತೋಲಿತ ಆಹಾರದ ಭಾಗವಾಗಿ ಸೇವಿಸಬಹುದಾಗಿದೆ.



ನವದೆಹಲಿಯ ಮ್ಯಾಕ್ಸ್ ಹೆಲ್ತ್‌ಕೇರ್‌ನ ಡಯೆಟೆಟಿಕ್ಸ್ ವಿಭಾಗದ ಪ್ರಾದೇಶಿಕ ಮುಖ್ಯಸ್ಥೆ ರಿತಿಕಾ ಸಮದ್ದಾರ್ ಅವರ ಪ್ರಕಾರ, ಪೌಷ್ಟಿಕಾಂಶಭರಿತ ಸೂಪರ್‌ಫುಡ್‌ಗಳನ್ನು ದೈನಂದಿನ ಆಹಾರದಲ್ಲಿ ಸೇರಿಸಿಕೊಳ್ಳುವುದು ಶಕ್ತಿ, ಜೀರ್ಣಕ್ರಿಯೆ ಮತ್ತು ದೀರ್ಘಕಾಲೀನ ಆರೋಗ್ಯಕ್ಕೆ ಪ್ರಯೋಜನಕಾರಿಯಾಗಿದೆ. ಕ್ಯಾಲಿಫೋರ್ನಿಯಾ ಬಾದಾಮಿಯಲ್ಲಿ ವಿಟಮಿನ್ ಇ, ಪ್ರೋಟೀನ್, ನಾರಿನಾಂಶ, ಮೆಗ್ನೀಷಿಯಂ, ರೈಬೋಫ್ಲೇವಿನ್, ಫಾಸ್ಫರಸ್ ಹಾಗೂ ಸತು ಸೇರಿದಂತೆ 24ಕ್ಕೂ ಹೆಚ್ಚು ಪೌಷ್ಟಿಕಾಂಶಗಳಿವೆ.

ಪ್ರೋಟೀನ್, ಆರೋಗ್ಯಕರ ಕೊಬ್ಬು ಮತ್ತು ನಾರಿನಾಂಶಗಳ ಸಮತೋಲನದಿಂದ ಬಾದಾಮಿ ದೀರ್ಘಕಾಲ ಹೊಟ್ಟೆ ತುಂಬಿದ ಅನುಭವ ನೀಡುವುದರ ಜೊತೆಗೆ ನಿರಂತರ ಶಕ್ತಿಯನ್ನು ಒದಗಿಸುತ್ತದೆ. ಯುರೋಪಿಯನ್ ಜರ್ನಲ್ ಆಫ್ ಕ್ಲಿನಿಕಲ್ ನ್ಯೂಟ್ರಿಷನ್‌ನಲ್ಲಿ ಪ್ರಕಟವಾದ ಅಧ್ಯಯನದ ಪ್ರಕಾರ, ಪ್ರತಿದಿನ 43 ಗ್ರಾಂ ಬಾದಾಮಿ ಸೇವಿಸುವುದರಿಂದ ಹಸಿವಿನ ಭಾವನೆ ಕಡಿಮೆಯಾಗುವುದರ ಜೊತೆಗೆ ವಿಟಮಿನ್ ಸಿಗಲಿದೆ.

## ‘ಬೆರುಂಡಾ ಕಾಫಿ’ ಬ್ರ್ಯಾಂಡ್ ಅನಾವರಣ

ಬೆಂಗಳೂರು

ಕರ್ನಾಟಕದ ಸಮೃದ್ಧ ಕಾಫಿ ಪರಂಪರೆಯನ್ನು ಜಾಗತಿಕ ಮಟ್ಟದಲ್ಲಿ ಪರಿಚಯಿಸುವ ಉದ್ದೇಶದಿಂದ ಹೌಸ್ ಆಫ್ ಬೆರುಂಡಾ ತನ್ನ ಪ್ರೀಮಿಯಂ ಕರ್ನಾಟಕ ಎಸ್ಟೇಟ್ ಕಾಫಿ ಬ್ರ್ಯಾಂಡ್ ‘ಬೆರುಂಡಾ ಕಾಫಿ’ಯನ್ನು ಬೆಂಗಳೂರಿನಲ್ಲಿ ರಾಜಮನೆತನದ ಶೈಲಿಯ ಭವ್ಯ ಸಮಾರಂಭದಲ್ಲಿ ಅನಾವರಣಗೊಳಿಸಿತು. ಈ ಸಂದರ್ಭದಲ್ಲಿ ಬ್ರ್ಯಾಂಡ್‌ನ



ಮೊದಲ ಮೂರು ವಿಶೇಷ ಕಾಫಿ ಸಂಗ್ರಹಗಳಾದ ಡ್ರೋಣ, ಅರ್ಜುನ ಮತ್ತು ಗಜೇಂದ್ರವನ್ನು ವಿವಿಧ ರೀತಿಯಲ್ಲಿ ತಯಾರಿಸಿದ ಕಾಫಿಯೊಂದಿಗೆ ಅತಿಥಿಗಳು ಸವಿದು, ಅವುಗಳ ಹಿಂದಿನ ಐತಿಹಾಸಿಕ ಕಥನಗಳನ್ನು ಅರಿತುಕೊಂಡರು.

ಡ್ರೋಣ ಕಾಫಿಯನ್ನು ಮೈಸೂರಿನ ಚಿನ್ನದ ಅಂಬಾರಿಯನ್ನು 18 ವರ್ಷಗಳ ಕಾಲ ಹೊತ್ತಿದ್ದ ಪ್ರಸಿದ್ಧ ಆನೆಯ ಗೌರವಾರ್ಥವಾಗಿ, ಅರ್ಜುನ ಕಾಫಿಯನ್ನು ತನ್ನ ಮಾವುತನನ್ನು ಕಾಡಾನೆ ದಾಳಿಯಿಂದ ರಕ್ಷಿಸುವ ವೇಳೆ ಪ್ರಾಣತ್ಯಾಗ ಮಾಡಿದ ಆನೆಯ ಸ್ಮರಣಾರ್ಥವಾಗಿ ಹಾಗೂ ಗಜೇಂದ್ರ ಕಾಫಿಯನ್ನು ರಾಜ್ಯ ಸೇವೆಯಲ್ಲಿರುವ ಕುಮ್ಕಿ ಆನೆಯ ಹೆಸರಿನಲ್ಲಿ ಪರಿಚಯಿಸಲಾಗಿದೆ.

## ಐಪಿಒಗೆ ಸೆಬಿಗೆ ಡಿಆರ್‌ಎಚ್‌ಪಿ ಸಲ್ಲಿಸಿದ ಸ್ವರಾ ಬೇಬಿ

ಬೆಂಗಳೂರು

ಮಗುವಿನ ಡೈಪರ್‌ಗಳು, ವಯಸ್ಕರ ಡೈಪರ್‌ಗಳು ಹಾಗೂ ಸ್ಯಾನಿಟರಿ ನ್ಯಾಪ್ಕಿನ್‌ಗಳು ಸೇರಿದಂತೆ ವೈಯಕ್ತಿಕ ನೈರ್ಮಲ್ಯ ಉತ್ಪನ್ನಗಳ ದೇಶದ ಅತಿದೊಡ್ಡ ಗುತ್ತಿಗೆ ತಯಾರಿಕಾ ಸಂಸ್ಥೆಯಾದ ಸ್ವರಾ ಬೇಬಿ ತನ್ನ ರೂ.1,000 ಕೋಟಿ ಮೌಲ್ಯದ ಆರಂಭಿಕ ಸಾರ್ವಜನಿಕ ಷೇರು ಮಾರಾಟ (ಐಪಿಒ)ಗಾಗಿ ಭಾರತೀಯ ಷೇರುಪೇಟೆ ನಿಯಂತ್ರಕ ಸಂಸ್ಥೆ ಸೆಬಿಗೆ ಕರಡು ದಾಖಲೆ (ಡಿಆರ್‌ಎಚ್‌ಪಿ) ಸಲ್ಲಿಸಿದೆ.

ಕಂಪನಿಯ ಪ್ರಸ್ತಾವಿತ ಐಪಿಒದಲ್ಲಿ ರೂ.500 ಕೋಟಿ ಮೌಲ್ಯದ ಹೊಸ ಈಕ್ವಿಟಿ ಷೇರುಗಳ ವಿತರಣೆ ಹಾಗೂ ರೂ.500 ಕೋಟಿ ಮೌಲ್ಯದ ಆಫರ್ ಫಾರ್ ಸೇಲ್ (ಒಎಫ್‌ಎಸ್) ಒಳಗೊಂಡಿದೆ.

ಒಎಫ್‌ಎಸ್ ಅಡಿಯಲ್ಲಿ ಪ್ರವರ್ತಕರು ಮತ್ತು ಹಾಲಿ ಹೂಡಿಕೆದಾರರು ತಮ್ಮ ಪಾಲಿನ ಷೇರುಗಳನ್ನು ಮಾರಾಟ ಮಾಡಲಿದ್ದಾರೆ. ಇದರಲ್ಲಿ ಬ್ರೈನ್ ಬೀಸ್ ಸೊಲ್ಯೂಷನ್ಸ್ ಲಿಮಿಟೆಡ್ ರೂ.300 ಕೋಟಿ ಮೌಲ್ಯದ ಷೇರುಗಳನ್ನು ಹಾಗೂ ಅನಾದ್ಯ ಬಾನ್ ಮರ್ಚ್ಯಾರಿ ಎಲ್‌ಎಲ್‌ಪಿ ರೂ.200 ಕೋಟಿ ಮೌಲ್ಯದ ಷೇರುಗಳನ್ನು ಮಾರಾಟ ಮಾಡಲು ಮುಂದಾಗಿದೆ.

2025ರ ಹಣಕಾಸು ವರ್ಷದ ಮೌಲ್ಯದ ಆಧಾರದ ಮೇಲೆ ವೈಯಕ್ತಿಕ ನೈರ್ಮಲ್ಯ ಉತ್ಪನ್ನಗಳ ಗುತ್ತಿಗೆ ತಯಾರಿಕಾ ವಲಯದಲ್ಲಿ ಭಾರತದಲ್ಲಿ ಮುಂಚೂಣಿಯಲ್ಲಿರುವ ಸಂಸ್ಥೆಯಾಗಿ ಸ್ವರಾ ಬೇಬಿ ಹೊರಹೊಮ್ಮಿದ್ದು, ಈ ಐಪಿಒ ಮೂಲಕ ವಿಸ್ತರಣೆ ಮತ್ತು ವ್ಯವಹಾರ ಬೆಳವಣಿಗೆಗೆ ಅಗತ್ಯ ಬಂಡವಾಳ ಸಂಗ್ರಹಿಸುವ ಉದ್ದೇಶ ಹೊಂದಿದೆ.

## ಬೆಂಗಳೂರಿನಲ್ಲಿ 1ಫಿನಿಟಿ ಅಂಗಸಂಸ್ಥೆ ಆರಂಭ

ಬೆಂಗಳೂರು

ಫುಜಿತ್ಸು ಕಂಪನಿಯ ಅಂಗಸಂಸ್ಥೆಯಾಗಿರುವ ಜಾಗತಿಕ ಸಂಪರ್ಕ ಜಾಲ ಪರಿಹಾರ ಸಂಸ್ಥೆ 1ಫಿನಿಟಿ, ಬೆಂಗಳೂರಿನಲ್ಲಿ ತನ್ನ ಹೊಸ ಭಾರತೀಯ ಅಂಗಸಂಸ್ಥೆ 1ಫಿನಿಟಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಅನ್ನು ಆರಂಭಿಸಿದೆ.

ಈ ಹೊಸ ಅಂಗಸಂಸ್ಥೆಯ ಸ್ಥಾಪನೆಯು ಭಾರತದಲ್ಲಿ ಸಂಸ್ಥೆಯ ಕಾರ್ಯಾಚರಣೆಯನ್ನು ವಿಸ್ತರಿಸುವುದರ ಜೊತೆಗೆ, ಜಾಗತಿಕ ಬೆಳವಣಿಗೆ ಮತ್ತು ಭಾರತೀಯ ಮಾರುಕಟ್ಟೆಯ ಮೇಲಿನ ಬದ್ಧತೆಯನ್ನು ಮತ್ತಷ್ಟು ಬಲಪಡಿಸುವ ಮಹತ್ವದ ಹೆಜ್ಜೆಯಾಗಿದೆ.

ಸಾಫ್ಟ್‌ವೇರ್ ಅಭಿವೃದ್ಧಿ, ಗ್ರಾಹಕ ಬೆಂಬಲ, ಉತ್ಪನ್ನ ಪ್ರಚಾರ ಮತ್ತು ಮಾರಾಟ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಈಗಾಗಲೇ ಭಾರತದಲ್ಲಿ ತನ್ನ ಉಪಸ್ಥಿತಿ ಹೊಂದಿರುವ 1ಫಿನಿಟಿ, ಆಪ್ಟಿಕಲ್, ವೈರ್‌ಲೆಸ್, ಸಾಫ್ಟ್‌ವೇರ್ ಹಾಗೂ ಸಮಗ್ರ ನೆಟ್‌ವರ್ಕ್ ಸೇವೆಗಳ ಮೂಲಕ ಸಂಪರ್ಕ ಸೇವಾ ಪೂರೈಕೆದಾರರು (ಸಿಎಸ್‌ಪಿ), ಕ್ಲೌಡ್ ಹಾಗೂ ಕೋಲೊಕೇಷನ್ ಮಾರುಕಟ್ಟೆಗಳ ಅಗತ್ಯಗಳಿಗೆ ಇನ್ನಷ್ಟು ಪರಿಣಾಮಕಾರಿ ಪರಿಹಾರಗಳನ್ನು ಒದಗಿಸಲು ಮುಂದಾಗಿದೆ.

ಈ ಕುರಿತು ಪ್ರತಿಕ್ರಿಯಿಸಿದ 1ಫಿನಿಟಿ ಸಿಇಒ ಮಸಾಕಿ ಮೊರಿಬಯಾಶಿ, “ಬೆಂಗಳೂರು ವಿಶ್ವದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಡಿಜಿಟಲ್ ಮೂಲಸೌಕರ್ಯ ಕೇಂದ್ರಗಳಲ್ಲಿ ಒಂದಾಗಿದೆ. ತಂತ್ರಜ್ಞಾನ ನಾವೀನ್ಯತೆ, ಸಹಭಾಗಿತ್ವ ಮತ್ತು ವ್ಯವಹಾರ ವಿಸ್ತರಣೆಗೆ ಇದು ಅತ್ಯುತ್ತಮ ವಾತಾವರಣವನ್ನು ಒದಗಿಸುತ್ತದೆ. ಇಲ್ಲಿ ಅಂಗಸಂಸ್ಥೆ ಆರಂಭಿಸಿರುವುದು ಭಾರತದಲ್ಲಿ ನಮ್ಮ ದೀರ್ಘಕಾಲೀನ ಹೂಡಿಕೆ ಹಾಗೂ ಕೃತಕ ಬುದ್ಧಿಮತ್ತೆ (ಎಐ), ಕ್ಲೌಡ್ ಮತ್ತು ಮುಂದಿನ ಪೀಳಿಗೆಯ ಸಂಪರ್ಕ ಜಾಲ ಮೂಲಸೌಕರ್ಯಗಳ ಬೆಳೆಯುತ್ತಿರುವ ಬೇಡಿಕೆಯನ್ನು ಪೂರೈಸುವ ನಮ್ಮ ಬದ್ಧತೆಯ ಪ್ರತೀಕವಾಗಿದೆ” ಎಂದು ತಿಳಿಸಿದ್ದಾರೆ.

## ಸ್ಲೀಪಿಹೆಡ್ ಟ್ರೆಷರ್ ಹಂಟ್‌ಗೆ ಭರ್ಜರಿ ಯಶಸ್ಸು

ಬೆಂಗಳೂರು

ಆಧುನಿಕ ಪೀಠೋಪಕರಣಗಳು ಮತ್ತು ನಿದ್ರಾ ಉತ್ಪನ್ನಗಳ ಪ್ರಮುಖ ಬ್ರ್ಯಾಂಡ್ ಸ್ಲೀಪಿಹೆಡ್ ಆಯೋಜಿಸಿದ್ದ ನಗರಮಟ್ಟದ ಟ್ರೆಷರ್ ಹಂಟ್ ಸ್ಪರ್ಧೆ ಯಶಸ್ವಿಯಾಗಿ ಮುಕ್ತಾಯಗೊಂಡಿದೆ. ಡಿಜಿಟಲ್ ಹುಡುಕಾಟ, ದೈಹಿಕ ಸವಾಲುಗಳು ಹಾಗೂ ಸಾರ್ವಜನಿಕರ ಸಕ್ರಿಯ ಭಾಗವಹಿಸುವಿಕೆಯಿಂದ ನಡೆದ ಈ ವಿನೂತನ ಸ್ಪರ್ಧೆಯಲ್ಲಿ 100ಕ್ಕೂ ಹೆಚ್ಚು ಬೆಂಗಳೂರಿಗರು ಪಾಲ್ಗೊಂಡಿದ್ದರು.

ರೋಚಕ ಗ್ರ್ಯಾಂಡ್ ಫಿನಾಲೆಯಲ್ಲಿ ತೀವ್ರ ಪೈಪೋಟಿ



ನಡೆಸಿದ ರೋಚೆಲ್ ಮರಿಯಾ ಕ್ವಾಡ್ರೋಸ್ ಮತ್ತು ಮಿಚೆಲ್ ರೋಸ್ ಕ್ವಾಡ್ರೋಸ್ ಜೋಡಿ ವಿಜೇತರಾಗಿ ಹೊರಹೊಮ್ಮಿ, ರೂ.2 ಲಕ್ಷ ಮೌಲ್ಯದ ಲಿವಿಂಗ್ ರೂಮ್ ಸೆಟಪ್ ಅನ್ನು ಬಂಪರ್ ಬಹುಮಾನವಾಗಿ ಪಡೆದುಕೊಂಡರು. ಸ್ಲೀಪಿಹೆಡ್ ಈ ಕಾರ್ಯಕ್ರಮದ ಮೂಲಕ ಸಾಂಪ್ರದಾಯಿಕ ಜಾಹೀರಾತಿನ ಪರಿಕಲ್ಪನೆಗೆ ಹೊಸ ರೂಪ ನೀಡಿದ್ದು, ಗೇಮಿಫಿಕೇಷನ್, ಕಂಟೆಂಟ್ ಕ್ರಿಯೇಟರ್‌ಗಳ ಕಥನಗಳು ಹಾಗೂ ನೈಜ ಅನುಭವಗಳನ್ನು ಸಂಯೋಜಿಸಿ ಇಡೀ ಬೆಂಗಳೂರನ್ನೇ ಸಂವಹನಾತ್ಮಕ ಆಟದ ಮೈದಾನವನ್ನಾಗಿ ಪರಿವರ್ತಿಸಿತು.

ಈ ವಿಶೇಷ ಅಭಿಯಾನವು ಸಮುದಾಯ ಆಧಾರಿತ ಬ್ರ್ಯಾಂಡ್ ತೊಡಗಿಸಿಕೊಳ್ಳುವಿಕೆಗೆ ಹೊಸ ಆಯಾಮ ನೀಡಿದ್ದು, ಸಾರ್ವಜನಿಕರೊಂದಿಗೆ ನೇರ ಸಂಪರ್ಕ ಸಾಧಿಸುವಲ್ಲಿ ಯಶಸ್ವಿಯಾಗಿದೆ.

## ತೆರಿಗೆ ವೃತ್ತಿಪರರಿಗೆ ಸುರಕ್ಷಿತ ಕ್ಲೌಡ್ ಸೇವೆ

ಬೆಂಗಳೂರು

ಭಾರತದ ಸಾರ್ವಭೌಮ ಎಐ ಆಧಾರಿತ ಕ್ಲೌಡ್ ಮೂಲಸೌಕರ್ಯ ಸೇವಾ ಸಂಸ್ಥೆಯಾದ ಭಾರತ್ ಕ್ಲೌಡ್ ಆಗ್ರಾದ ಟ್ಯಾಕ್ಸೇಷನ್ ಬಾರ್ ಅಸೋಸಿಯೇಷನ್ ಜೊತೆಗೆ ಮಹತ್ವದ ಒಡಂಬಡಿಕೆಗೆ ಸಹಿ ಹಾಕಿದೆ. ಈ ಸಹಭಾಗಿತ್ವದ ಮೂಲಕ ಜಿಲ್ಲೆಯಾದ್ಯಂತ ತೆರಿಗೆ ವಕೀಲರು, ಜಿಎಸ್‌ಟಿ ತಜ್ಞರು ಹಾಗೂ ಹಣಕಾಸು ವೃತ್ತಿಪರರಿಗೆ ಸುರಕ್ಷಿತ, ಎಐ–ಸನ್ನದ್ಧ ಕ್ಲೌಡ್ ಸೇವೆಗಳನ್ನು ಒದಗಿಸಲಾಗುತ್ತದೆ.

ಜೂನ್ 23, 2026ರಂದು ಸಹಿ ಮಾಡಲಾದ ಈ ಒಡಂಬಡಿಕೆಯಡಿ, ಆಗ್ರಾ ಟ್ಯಾಕ್ಸೇಷನ್ ಬಾರ್ ಅಸೋಸಿಯೇಷನ್‌ನ ಸುಮಾರು 400ರಿಂದ 450 ಸದಸ್ಯರು ಭಾರತ್ ಕ್ಲೌಡ್‌ನ ವಿಶೇಷ ಸೇವೆಗಳ ಪ್ರಯೋಜನ ಪಡೆಯಲಿದ್ದಾರೆ. ಈ ಸದಸ್ಯರಲ್ಲಿ ತೆರಿಗೆ ವಕೀಲರು, ಜಿಎಸ್‌ಟಿ ಸಲಹೆಗಾರರು ಹಾಗೂ ಆಲ್ ಇಂಡಿಯಾ ಫೆಡರೇಶನ್ ಆಫ್ ಟ್ಯಾಕ್ಸ್ ಪ್ರಾಕ್ಟೀಷನರ್ಸ್



(ಎಐಎಫ್‌ಟಿಪಿ) ಮಾನ್ಯತೆ ಪಡೆದ ವೃತ್ತಿಪರರೂ ಸೇರಿದ್ದಾರೆ.

ಈ ಸಹಭಾಗಿತ್ವದಡಿ ತೆರಿಗೆ ಮತ್ತು ಹಣಕಾಸು ವೃತ್ತಿಪರರ ಅಗತ್ಯಗಳಿಗೆ ಅನುಗುಣವಾಗಿ ವಿಶೇಷ ವಾರ್ಷಿಕ ಚಂದಾದಾರಿಕೆ ಯೋಜನೆಗಳನ್ನು ರೂಪಿಸಲಾಗಿದೆ.

ಇದರಡಿ ಸುರಕ್ಷಿತ ಕ್ಲೌಡ್ ಸಂಗ್ರಹಣೆ, ಸ್ವಯಂಚಾಲಿತ ಬ್ಯಾಕಪ್ ವ್ಯವಸ್ಥೆ, ಕಚೇರಿ ನಿರ್ವಹಣಾ ತಂತ್ರಾಂಶಗಳಿಗೆ ದೂರಸ್ಥ ಪ್ರವೇಶ, ಗ್ರಾಹಕರ ಮಾಹಿತಿಯ ಸುರಕ್ಷಿತ ನಿರ್ವಹಣೆ ಹಾಗೂ ಕ್ಲೌಡ್ ಆಧಾರಿತ ಪ್ರಾಕ್ಟೀಸ್ ಮ್ಯಾನೇಜ್ಮೆಂಟ್ ಸೇವೆಗಳು ಲಭ್ಯವಾಗಲಿವೆ.

ಈ ವ್ಯವಸ್ಥೆಯಿಂದ ವೈಯಕ್ತಿಕ ವೃತ್ತಿಪರರು ಹಾಗೂ ಬಹುಸಂಖ್ಯೆಯ ಸದಸ್ಯರನ್ನು ಹೊಂದಿರುವ ಸಂಸ್ಥೆಗಳು ತಮ್ಮ ತಂತ್ರಜ್ಞಾನ ಮೂಲಸೌಕರ್ಯವನ್ನು ಆಧುನೀಕರಿಸಿಕೊಳ್ಳಲು, ಗ್ರಾಹಕರ ದತ್ತಾಂಶವನ್ನು ಸುರಕ್ಷಿತವಾಗಿ ಸಂರಕ್ಷಿಸಲು ಹಾಗೂ ಸಾಂಪ್ರದಾಯಿಕ ಸರ್ವರ್ ವ್ಯವಸ್ಥೆಯಿಂದ ಸುರಕ್ಷಿತ ಕ್ಲೌಡ್ ವಾತಾವರಣಕ್ಕೆ ಸುಲಭವಾಗಿ ವರ್ಗಾಯಿಸಲು ಸಾಧ್ಯವಾಗಲಿದೆ.

ಭಾರತ್ ಕ್ಲೌಡ್ ಅಭಿವೃದ್ಧಿಪಡಿಸಿರುವ ಈ ವೇದಿಕೆ, ತೆರಿಗೆ ಮತ್ತು ನಿಯಮಾನುಸರಣೆ ಸಂಬಂಧಿತ ದೈನಂದಿನ ಕಾರ್ಯಗಳನ್ನು ಸುಲಭಗೊಳಿಸುವ ಉದ್ದೇಶ ಹೊಂದಿದ್ದು, ಸಂಸ್ಥೆಗಳ ಐಟಿ ಮೂಲಸೌಕರ್ಯ ನಿರ್ವಹಣೆಯ ಹೊರೆ ಕಡಿಮೆ ಮಾಡುವ ಜೊತೆಗೆ ಸುರಕ್ಷಿತ, ವಿಶ್ವಾಸಾರ್ಹ ಮತ್ತು ಪರಿಣಾಮಕಾರಿ ಡಿಜಿಟಲ್ ಸೇವೆಗಳನ್ನು ಒದಗಿಸಲಿದೆ.



ಕೋಲಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಜುಲೈ 1 ರಂದು ಕೋಲಾರ ನಗರದ ಪತಕರ್ತರ ಭವನದಲ್ಲಿ ನಡೆದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾಲೂರು ತಾಲ್ಲೂಕು ಪತ್ರಕರ್ತರ ಕೋಲಾರವಾಣಿ ವರದಿಗಾರ ಟಿ.ಕೆ.ನಾಗರಾಜ್ ಪುತ್ರ ಎಂ.ಟೆಕ್ ಪದವಿ ಮುಗಿಸಿದ ಗಗನ್ ನಾಯಕ್ ಎಂ.ಎನ್. ಅವರನ್ನು ಪ್ರಶಸ್ತಿ ನೀಡಿ ಗೌರವಿಸಿ ಅಭಿನಂದಿಸಲಾಯಿತು.

## 3ರಂದು “ಯುವ ಸೌರಭ” ಕಾರ್ಯಕ್ರಮ

ತುಮಕೂರು

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹೆಬ್ಬೂರು ಸರ್ಕಾರಿ ಪದವಿ ಪೂರ್ವ ಕಾಲೇಜು ಸಂಯುಕ್ತ ಆಶ್ರಯದಲ್ಲಿ ಜುಲೈ 3ರಂದು ಬೆಳಿಗ್ಗೆ 10.30 ಗಂಟೆಗೆ ಹೆಬ್ಬೂರು ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ “ಯುವ ಸೌರಭ” ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಶಾಸಕ ಬಿ. ಸುರೇಶ್‌ಗೌಡ ಉದ್ಘಾಟಿಸಿ ಅಧ್ಯಕ್ಷತೆವಹಿಸಲಿದ್ದಾರೆ. ಜಿಲ್ಲಾ ಶಾಲಾ ಶಿಕ್ಷಣ(ಪದವಿ ಪೂರ್ವ) ಇಲಾಖೆಯ ಉಪನಿರ್ದೇಶಕ ರಾಧಾ ಎಂ.ಎಸ್. ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎಸ್. ಸಿದ್ದಲಿಂಗಪ್ಪ ಉಪಸ್ಥಿತರಿರಲಿದ್ದಾರೆ. ಇನ್‌ಫಾರ್ಮಟಿಕ್ಸ್ ಇಂಡಿಯಾ ಲಿಮಿಟೆಡ್‌ನ ಛೇರ್ಮನ್ ಮತ್ತು ವ್ಯವಸ್ಥಾಪಕ ನಿರ್ದೇಶಕ ಎನ್.ವಿ. ಸತ್ಯನಾರಾಯಣ, ಗಾಯತ್ರಿ ಜ್ಯುವೆಲರ್ಸ್ ಅಧಿಕಾರಿ ಮಂಜಣ್ಣ ಎಸ್. ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಪ್ರದೀಪ್ ಹೆಚ್.ಆರ್. ಭಾಗವಹಿಸಲಿದ್ದಾರೆ.

## ‘ಬೆಂಗಳೂರು ಉತ್ಸವ’ಕ್ಕೆ ಚಾಲನೆ

ಬೆಂಗಳೂರು

ಕಲಾವಿದರು, ಕರಕುಶಲ ತಜ್ಞರು ಮತ್ತು ಕಲಾಸಕ್ತರಿಗೆ ಉತ್ತಮ ವೇದಿಕೆ ಕಲ್ಪಿಸುವ ಉದ್ದೇಶದಿಂದ ಕರ್ನಾಟಕ ಚಿತ್ರಕಲಾ ಪರಿಷತ್ ಆವರಣದಲ್ಲಿ ನವೀಕರಿಸಲಾದ ಓಪನ್ ಏರ್ ಥಿಯೇಟರ್ ಹಾಗೂ ಶಾಶ್ವತ ಪ್ರದರ್ಶನ ಮಳಿಗೆಗಳನ್ನು ಇಂದು ಉದ್ಘಾಟಿಸಲಾಯಿತು. ಇದೇ ವೇಳೆ 10 ದಿನಗಳ ‘ಬೆಂಗಳೂರು ಉತ್ಸವ’ ಕರಕುಶಲ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಮೇಳಕ್ಕೂ ಚಾಲನೆ ನೀಡಲಾಯಿತು.

ಕರ್ನಾಟಕ ಚಿತ್ರಕಲಾ ಪರಿಷತ್ ಅಧ್ಯಕ್ಷ ಡಾ. ಬಿ.ಎಲ್. ಶಂಕರ್, ಯಶವಂತಪುರ ಶಾಸಕ ಎಸ್.ಟಿ.



ಸೋಮಶೇಖರ್, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಿ.ಕೆ. ಅಲ್ತಾಫ್ ಖಾನ್, ಪರಿಷತ್ ಪ್ರಧಾನ ಕಾರ್ಯದರ್ಶಿ ಶಶಿಧರ್ ಎಸ್.ಎನ್. ಸೇರಿದಂತೆ ನಟರಾದ ನಿರಂಜನ್ ಶೆಟ್ಟಿ, ಪ್ರಥಮ್, ಆರ್‌ಜೆ ಪಟಾಕಿ ಶೃತಿ ಹಾಗೂ ನಟಿ ಭೂಮಿ ಶೆಟ್ಟಿ ಕಾರ್ಯಕ್ರಮದಲ್ಲಿ ಭಾಗವಹಿಸಿ ನೂತನ ಸೌಲಭ್ಯಗಳನ್ನು ಉದ್ಘಾಟಿಸಿದರು.

ನಗರದ ಪ್ರಮುಖ ಕಲಾ ಕೇಂದ್ರವಾಗಿರುವ ಕರ್ನಾಟಕ ಚಿತ್ರಕಲಾ ಪರಿಷತ್ ಹಲವು ವರ್ಷಗಳಿಂದ ದೇಶದ ವಿವಿಧ ರಾಜ್ಯಗಳ ಕಲಾವಿದರು, ಶಿಲ್ಪಿಗಳು ಮತ್ತು ಕರಕುಶಲ ತಜ್ಞರಿಗೆ ತಮ್ಮ ಕಲಾಕೃತಿಗಳನ್ನು ಪ್ರದರ್ಶಿಸಿ ಮಾರಾಟ ಮಾಡಲು ಪ್ರಮುಖ ವೇದಿಕೆಯಾಗಿದೆ.

## ಬಂಧನ್ ಲಾರ್ಜ್ ಕ್ಯಾಪ್ ಫಂಡ್‌ಗೆ 20 ವರ್ಷ

ಬೆಂಗಳೂರು

ಬಂಧನ್ ಲಾರ್ಜ್ ಕ್ಯಾಪ್ ಫಂಡ್ ತನ್ನ 20 ವರ್ಷಗಳ ಯಶಸ್ವಿ ಪಯಣವನ್ನು ಪೂರ್ಣಗೊಳಿಸಿದ್ದು, ಸ್ಥಿರತೆ, ಶಿಸ್ತು ಮತ್ತು ದೀರ್ಘಕಾಲಿಕ ಸಂಪತ್ತಿನ ಸೃಷ್ಟಿಗೆ ವಿಶ್ವಾಸಾರ್ಹ ಹೂಡಿಕೆ ಆಯ್ಕೆಯಾಗಿ ಗುರುತಿಸಿಕೊಂಡಿದೆ. ಕಳೆದ ಎರಡು ದಶಕಗಳಲ್ಲಿ ಮಾರುಕಟ್ಟೆಯ ಏರಿಳಿತಗಳು, ಆರ್ಥಿಕ ಕುಸಿತಗಳು ಹಾಗೂ ರಚನಾತ್ಮಕ ಬದಲಾವಣೆಗಳ ನಡುವೆಯೂ ಮೂಲಭೂತವಾಗಿ ಸದೃಢವಾದ ಲಾರ್ಜ್ ಕ್ಯಾಪ್ ಕಂಪನಿಗಳಲ್ಲಿ ಹೂಡಿಕೆ ಮಾಡುವ ತನ್ನ ಹೂಡಿಕೆ ತತ್ವಕ್ಕೆ ಬದ್ಧವಾಗಿ ಕಾರ್ಯನಿರ್ವಹಿಸಿ, ಹೂಡಿಕೆದಾರರಿಗೆ ಸ್ಥಿರ ಮೌಲ್ಯವರ್ಧನೆ ಒದಗಿಸುವತ್ತ ಗಮನ ಹರಿಸಿದೆ.

ಲಾರ್ಜ್ ಕ್ಯಾಪ್ ಕಂಪನಿಗಳು ಉತ್ತಮ ಕಾರ್ಪೊರೇಟ್ ಆಡಳಿತ, ಸ್ಥಿರ ನಗದು ಹರಿವು, ಬೆಲೆ ನಿಗದಿಪಡಿಸುವ ಸಾಮರ್ಥ್ಯ ಹಾಗೂ ಆರ್ಥಿಕ ಚಕ್ರಗಳ ವಿವಿಧ ಹಂತಗಳಲ್ಲೂ ಸ್ಥಿರ ಪ್ರದರ್ಶನ ನೀಡುವ ಗುಣಲಕ್ಷಣಗಳಿಂದ ಹೂಡಿಕೆ ಪೋರ್ಟ್‌ಫೋಲಿಯೊಗಳ ಭದ್ರ ಅಡಿಪಾಯವೆಂದು ಪರಿಗಣಿಸಲಾಗುತ್ತದೆ. ಬಂಡವಾಳದ ಮೌಲ್ಯವರ್ಧನೆಯ ಜೊತೆಗೆ ಹೂಡಿಕೆಯಲ್ಲಿ ಸ್ಥಿರತೆಯನ್ನು ಬಯಸುವವರಿಗೆ ಇವು ಪ್ರಮುಖ ಆಯ್ಕೆಯಾಗಿವೆ. ಇದಕ್ಕೆ ವಿರುದ್ಧವಾಗಿ, ಮಿಡ್ ಕ್ಯಾಪ್ ಮತ್ತು ಸ್ಮಾಲ್ ಕ್ಯಾಪ್ ವಿಭಾಗಗಳು ಇನ್ನೂ ತಮ್ಮ ಐತಿಹಾಸಿಕ ಸರಾಸರಿಗಿಂತ ಹೆಚ್ಚಿನ ಮೌಲ್ಯಮಾಪನದಲ್ಲಿದ್ದು, ಲಾರ್ಜ್ ಕ್ಯಾಪ್ ಹೂಡಿಕೆಗಳು ದೀರ್ಘಕಾಲಿಕ ಹೂಡಿಕೆದಾರರಿಗೆ ಆಕರ್ಷಕ ಅವಕಾಶವಾಗಿ ಪರಿಣಮಿಸಿವೆ.

## ಜೆಐಐಎಸ್ ವೈಟ್‌ಫೀಲ್ಡ್ ವಿದ್ಯಾರ್ಥಿ ಶುಭ್ ಚೌಧರಿ

ಬೆಂಗಳೂರು

ಜೆಐಐಎಸ್ ವೈಟ್‌ಫೀಲ್ಡ್‌ನ 12ನೇ ತರಗತಿ (ಎ–ಲೆವೆಲ್ಸ್) ವಿದ್ಯಾರ್ಥಿ ಶುಭ್ ಚೌಧರಿ ಅವರು 2026ರ ಯೂತ್ ಒಲಿಂಪಿಕ್ ಕ್ರೀಡಾಕೂಟ (ಡಕಾರ್)ನಲ್ಲಿ ಶೋ ಜಂಪಿಂಗ್ ವಿಭಾಗದಲ್ಲಿ ಭಾರತವನ್ನು ಪ್ರತಿನಿಧಿಸಲು ಈಕ್ವೆಸ್ಟ್ರಿಯನ್ ಫೆಡರೇಶನ್ ಆಫ್ ಇಂಡಿಯಾ (ಇಎಫ್‌ಐ) ಪರಿಗಣಿಸಿರುವ ಟಾಪ್–5 ಯುವ ಸವಾರರ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ.



16 ವರ್ಷದ ಶುಭ್ ಚೌಧರಿ ಮೂಲತಃ ಚೆನ್ನೈನವರಾಗಿದ್ದು, 18 ವರ್ಷದೊಳಗಿನವರ ವಿಭಾಗದಲ್ಲಿ ಶೋ ಜಂಪಿಂಗ್, ಡ್ರೆಸ್ಸೇಜ್ ಮತ್ತು ಈವೆಂಟ್ ಎಂಬ ಮೂರು ಪ್ರಮುಖ ಕುದುರೆ ಸವಾರಿ ವಿಭಾಗಗಳಲ್ಲಿ ಸ್ಪರ್ಧಿಸುತ್ತಿದ್ದಾರೆ. ಈ ಸಾಧನೆಯು ಅವರನ್ನು ಭಾರತದ ಭರವಸೆಯ ಯುವ ಕುದುರೆ ಸವಾರಿ ಕ್ರೀಡಾಪಟುಗಳಲ್ಲಿ ಒಬ್ಬರನ್ನಾಗಿ ಗುರುತಿಸಿದೆ.

ಅಕ್ಟೋಬರ್ 2025ರಲ್ಲಿ ಬೆಂಗಳೂರಿನ ಎಂಬಸಿ ಇಂಟರ್‌ನ್ಯಾಷನಲ್ ರೈಡಿಂಗ್ ಶಾಲೆಯಲ್ಲಿ ನಡೆದ ಎಫ್‌ಇಐ ಸ್ಪರ್ಧೆಯಲ್ಲಿ ತಮ್ಮ ಕುದುರೆ ‘ಫಾಗ್ಗಿ ಬಾಟಮ್’ ಜೊತೆಗೆ 130 ಸೆಂ.ಮೀ. ಶೋ ಜಂಪಿಂಗ್ ವಿಭಾಗದಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ, ಯೂತ್ ಒಲಿಂಪಿಕ್ಸ್‌ಗೆ ಅಗತ್ಯವಿರುವ ಎಫ್‌ಇಐ ಅರ್ಹತಾ ಮಾನದಂಡವನ್ನು ಯಶಸ್ವಿಯಾಗಿ ಪೂರೈಸಿದ್ದಾರೆ.

ಈ ಸಾಧನೆಯೊಂದಿಗೆ ಡಕಾರ್ ಯೂತ್ ಒಲಿಂಪಿಕ್ಸ್‌ನಲ್ಲಿ ಭಾರತದ ಪರ ಸ್ಪರ್ಧಿಸುವ ಅವಕಾಶದತ್ತ ಶುಭ್ ಚೌಧರಿ ಮತ್ತೊಂದು ಮಹತ್ವದ ಹೆಜ್ಜೆ ಇಟ್ಟಿದ್ದಾರೆ.

## ಲಂಕಾ ಪ್ರೀಮಿಯರ್ ಲೀಗ್‌ಗೆ ಅದ್ದೂರಿ ಚಾಲನೆ

ಕೊಲಂಬೊ

ವಿಶ್ವ ಕ್ರಿಕೆಟ್ ಅಭಿಮಾನಿಗಳು ಕಾತರದಿಂದ ಕಾಯುತ್ತಿದ್ದ ಲಂಕಾ ಪ್ರೀಮಿಯರ್ ಲೀಗ್ (ಎಲ್‌ಪಿಎಲ್) 2026ರ ಆರನೇ ಆವೃತ್ತಿಗೆ ಶ್ರೀಲಂಕಾದ ಕೊಲಂಬೊದಲ್ಲಿರುವ ಎಸ್‌ಎಸ್‌ಸಿ ಮೈದಾನದಲ್ಲಿ ಅದ್ದೂರಿ ಚಾಲನೆ ದೊರೆತಿದೆ. ಟೂರ್ನಿಯ ಉದ್ಘಾಟನಾ ಸಮಾರಂಭದ ಪ್ರಮುಖ ಆಕರ್ಷಣೆಯಾಗಿ 500 ಡ್ರೋನ್‌ಗಳ ಭವ್ಯ ವೈಮಾನಿಕ ಪ್ರದರ್ಶನ ಆಯೋಜಿಸಲಾಗಿದ್ದು, ಇದು ಶ್ರೀಲಂಕಾ ಕ್ರಿಕೆಟ್ ಇತಿಹಾಸದಲ್ಲೇ ಅತಿದೊಡ್ಡ ಡ್ರೋನ್ ಶೋ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

ಟೂರ್ನಿಯ ಹಕ್ಕುಗಳನ್ನು ಹೊಂದಿರುವ ಐಪಿಜಿ ಗ್ರೂಪ್, ಒಲಿಂಪಿಕ್ಸ್ ಹಾಗೂ ಫಿಫಾ ವಿಶ್ವಕಪ್ ಮಾದರಿಯ ಜಾಗತಿಕ ಮಟ್ಟದ ಉದ್ಘಾಟನಾ ಸಮಾರಂಭವನ್ನು ಆಯೋಜಿಸುವ ಮೂಲಕ ಕ್ರಿಕೆಟ್ ಅಭಿಮಾನಿಗಳಿಗೆ ವಿಶಿಷ್ಟ ಅನುಭವ ನೀಡಿದೆ. ಈ ಬಾರಿಯ ಎಲ್‌ಪಿಎಲ್ ಉದ್ಘಾಟನೆ ಕ್ರೀಡೆ ಮತ್ತು ತಂತ್ರಜ್ಞಾನದ ಸಂಗಮವಾಗಿ ಮೂಡಿಬಂದಿದ್ದು, ಕ್ರಿಕೆಟ್ ಅಭಿಮಾನಿಗಳು, ಕುಟುಂಬಸ್ಥರು, ಫ್ರಾಂಚೈಸಿ ಬೆಂಬಲಿಗರು ಹಾಗೂ ಡಿಜಿಟಲ್ ವೀಕ್ಷಕರಿಗೆ ಮರೆಯಲಾಗದ ಕ್ಷಣಗಳನ್ನು ಉಣಬಡಿಸಿದೆ.

ಇದೇ ವೇಳೆ, ಜುಲೈ 1ರಿಂದಲೇ ಪಂದ್ಯಗಳ ಟಿಕೆಟ್‌ಗಳ ಮಾರಾಟ ಆರಂಭವಾಗಿದ್ದು, ಕ್ರಿಕೆಟ್ ಪ್ರೇಮಿಗಳು ಟೂರ್ನಿಯ ಪಂದ್ಯಗಳನ್ನು ವೀಕ್ಷಿಸಲು ಮುಂಗಡ ಬುಕ್ಕಿಂಗ್ ಮಾಡಿಕೊಳ್ಳಬಹುದಾಗಿದೆ.

## ಸಾಮಾಜಿಕ ಸೇವೆಗೆ 5.73 ಕೋಟಿ ರೂ. ದೇಣಿಗೆ ಸಂಗ್ರಹ

ಬೆಂಗಳೂರು: ವಿಶ್ವ ಅಥ್ಲೆಟಿಕ್ಸ್ ಗೋಲ್ಡ್ ಲೇಬಲ್ ರೇಸ್ ಆಗಿರುವ ಟಿಸಿಎಸ್ ವರ್ಲ್ಡ್ 10ಕೆ ಬೆಂಗಳೂರು–2026 ಸಾಮಾಜಿಕ ಸೇವೆಯ ಹೊಸ ಮೈಲಿಗಲ್ಲು ನಿರ್ಮಿಸಿದ್ದು, ಎನ್‌ಜಿಒಗಳು, ಕಾರ್ಪೊರೇಟ್ ಸಂಸ್ಥೆಗಳು, ಲೋಕೋಪಕಾರಿಗಳು ಹಾಗೂ ವೈಯಕ್ತಿಕ ನಿಧಿಸಂಗ್ರಹಕಾರರ ಸಹಕಾರದಿಂದ ರೂ.5.73 ಕೋಟಿ ನಿಧಿ ಸಂಗ್ರಹಿಸಲಾಗಿದೆ.

ಈ ಸಾಧನೆಯನ್ನು ಗೌರವಿಸಲು ಭಾರತದಲ್ಲಿ ದೂರದ ಓಟದ ಪ್ರವರ್ತಕರಾದ ಪ್ರೊಕ್ಯಾಮ್ ಇಂಟರ್‌ನ್ಯಾಷನಲ್ ವತಿಯಿಂದ ಮೊದಲ ಬಾರಿಗೆ ‘ಕೃತಜ್ಞತೆಯ ಸಂಜೆ’ ಕಾರ್ಯಕ್ರಮ ಆಯೋಜಿಸಲಾಯಿತು. ಕಾರ್ಯಕ್ರಮದಲ್ಲಿ ಸಮಾಜಮುಖಿ ಕಾರ್ಯಗಳಿಗೆ ಶ್ರಮಿಸಿದ ವಿವಿಧ ಸಂಸ್ಥೆಗಳು, ಯುವ ಬದಲಾವಣೆ ತರುವವರು ಹಾಗೂ ಬೆಂಬಲಿಗರನ್ನು ಸನ್ಮಾನಿಸಲಾಯಿತು. ಕರ್ನಾಟಕ ಸರ್ಕಾರ, ಭಾರತೀಯ ಸೇನೆ, ಪ್ರಧಾನ ಕಚೇರಿ ಕರ್ನಾಟಕ ಮತ್ತು ಕೇರಳ ಉಪ ಪ್ರದೇಶ, ಬೃಹತ್ ಬೆಂಗಳೂರು ಪ್ರಾಧಿಕಾರ, ಬೆಂಗಳೂರು ಪೊಲೀಸ್, ಎನ್‌ಸಿಸಿ ಹಾಗೂ ವಿವಿಧ ನಾಗರಿಕ ಸಂಘಟನೆಗಳ ಸಹಭಾಗಿತ್ವ ಈ ಕ್ರೀಡಾಕೂಟದ ಯಶಸ್ಸಿಗೆ ಪ್ರಮುಖ ಕಾರಣವಾಗಿದೆ.

ಕೇವಲ ಓಟದ ಸ್ಪರ್ಧೆಯಾಗಿ ಮಾತ್ರವಲ್ಲದೆ, ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರಲು ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಉತ್ತೇಜಿಸಲು ಟಿಸಿಎಸ್ ವರ್ಲ್ಡ್ 10ಕೆ ಬೆಂಗಳೂರು ಪರಿಣಾಮಕಾರಿ ವೇದಿಕೆಯಾಗಿ ಬೆಳೆದಿದೆ ಎಂದು ಆಯೋಜಕರು ತಿಳಿಸಿದರು.



# ಸಿದ್ದೇಗೌಡರಿಗೆ ಆತ್ಮೀಯ ಬೀಳ್ಕೊಡುಗೆ



ಬೇತಮಂಗಲ

ಕ್ಯಾಸಂಬಳ್ಳಿ ಬೆಸ್ಕಾಂ ಕಚೇರಿಯಲ್ಲಿ ಹಲವು ವರ್ಷಗಳಿಂದ ಬಿಲ್ ರೀಡರ್ ಆಗಿ ಸೇವೆ ಸಲ್ಲಿಸಿ ವಯೋನಿವೃತ್ತಿ ಹೊಂದಿದ ಸಿದ್ದೇಗೌಡ ಅವರಿಗೆ ಸಹೋದ್ಯೋಗಿಗಳು ಹಾಗೂ ಸಿಬ್ಬಂದಿ ಆತ್ಮೀಯ ಬೀಳ್ಕೊಡುಗೆ ಸಮಾರಂಭ ಆಯೋಜಿಸಿ ಗೌರವಿಸಿದರು.

ಸಮಾರಂಭದಲ್ಲಿ ಮಾತನಾಡಿದ ಸಹೋದ್ಯೋಗಿಗಳು, ಸಿದ್ದೇಗೌಡ ಅವರು ತಮ್ಮ ಸೇವಾ ಅವಧಿಯಲ್ಲಿ ಪ್ರಾಮಾಣಿಕತೆ, ಸಮಯಪಾಲನೆ ಹಾಗೂ ಜನಸ್ನೇಹಿ ಕಾರ್ಯವೈಖರಿಯಿಂದ ಇಲಾಖೆಗೆ ಉತ್ತಮ ಹೆಸರು ತಂದಿದ್ದಾರೆ. ಗ್ರಾಹಕರೊಂದಿಗೆ ಉತ್ತಮ ಬಾಂಧವ್ಯ ಬೆಳೆಸಿಕೊಂಡು ಬೆಸ್ಕಾಂನ ಸೇವೆಯನ್ನು ಜನರಿಗೆ ಪರಿಣಾಮಕಾರಿಯಾಗಿ ತಲುಪಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ ಎಂದು ಪ್ರಶಂಸಿಸಿದರು.

ಈ ಸಂದರ್ಭದಲ್ಲಿ ಸಿದ್ದೇಗೌಡ ಅವರನ್ನು ಶಾಲು ಹೊದಿಸಿ, ಹೂಮಾಲೆ ಹಾಕಿ, ಸ್ಮರಣಿಕೆ ನೀಡಿ ಸನ್ಮಾನಿಸಲಾಯಿತು. ನಿವೃತ್ತಿ ಜೀವನವು ಆರೋಗ್ಯ, ನೆಮ್ಮದಿ ಹಾಗೂ ಸಂತೋಷದಿಂದ ಕೂಡಿರಲಿ ಎಂದು ಸಹೋದ್ಯೋಗಿಗಳು ಶುಭ ಹಾರೈಸಿದರು.

ಗೌರವ ಸ್ವೀಕರಿಸಿ ಮಾತನಾಡಿದ ಸಿದ್ದೇಗೌಡ ಅವರು, ತಮ್ಮ ಸೇವಾ ಅವಧಿಯಲ್ಲಿ ಸಹಕಾರ ನೀಡಿದ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಾರ್ವಜನಿಕರಿಗೆ ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಬೆಸ್ಕಾಂ ಅಧಿಕಾರಿಗಳು, ಸಿಬ್ಬಂದಿ ವರ್ಗ, ಕುಟುಂಬದ ಸದಸ್ಯರು ಹಾಗೂ ಗಣ್ಯರು ಉಪಸ್ಥಿತರಿದ್ದರು.

# ಶಾಲಾ ಕಾಲೇಜುಗಳಲ್ಲಿ ವಿವಿಧ ಸ್ಪರ್ಧೆಗಳು

ಕೋಲಾರ

ನಾಡಪ್ರಭು ಕೆಂಪೇಗೌಡ ಜಯಂತಿಯನ್ನು ರಾಜ್ಯಾದ್ಯಂತ ಅರ್ಥಪೂರ್ಣವಾಗಿ ಆಚರಿಸುವ ಸಂಬಂಧ ಕೋಲಾರ ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿ ತಾಲ್ಲೂಕು ಮಟ್ಟದ ಎಲ್ಲಾ ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ನಾಡಪ್ರಭು ಕೆಂಪೇಗೌಡ ರವರ ಕುರಿತು ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಲು ಸೂಚಿಸಲಾಗಿದೆ.

ನಾಡಪ್ರಭು ಕೆಂಪೇಗೌಡರ ಕುರಿತು ಶಾಲಾ ಕಾಲೇಜುಗಳಲ್ಲಿ ಸ್ಪರ್ಧೆಗಳನ್ನು ಏರ್ಪಡಿಸುವುದರ ಮೂಲಕ ನಾಡಪ್ರಭು ಕೆಂಪೇಗೌಡರ ಸಾಧನೆ ಕುರಿತು ಅರಿವು ಮೂಡಿಸುವುದು. ಶಾಲೆಗಳು, ಪದವಿ ಕಾಲೇಜು ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ನಾಡಪ್ರಭು ಕೆಂಪೇಗೌಡರ ಕುರಿತು ರಸ ಪ್ರಶ್ನೆ, ಪ್ರಬಂಧ ಸ್ಪರ್ಧೆ, ಆಶು ಭಾಷಣ, ಕವನ ವಾಚನ, ಗಾಯನ, ಚಿತ್ರಕಲೆ ಸ್ಪರ್ಧೆ ಇವುಗಳಲ್ಲಿ ಯಾವುದಾದರು ಎರಡು ಸ್ಪರ್ಧೆಗಳನ್ನು ಏರ್ಪಡಿಸುವುದು.

ಜಿಲ್ಲೆಯಲ್ಲಿ ಬರುವ ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ಕಾರ್ಯಕ್ರಮಗಳನ್ನು ಏರ್ಪಡಿಸಲು ಆದ್ಯತೆ ನೀಡುವುದು. ಸ್ಪರ್ಧೆಯಲ್ಲಿ ಎಲ್ಲಾ ಸಮುದಾಯದ ವಿದ್ಯಾರ್ಥಿಗಳು ಭಾಗವಹಿಸಲು ಮುಕ್ತವಾಗಿರುತ್ತದೆ ಹಾಗೂ ಸ್ಪರ್ಧೆಯಲ್ಲಿ ಕನಿಷ್ಠ 25 ವಿದ್ಯಾರ್ಥಿಗಳು ಭಾಗವಹಿಸತಕ್ಕದ್ದು. ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ನಾಡಪ್ರಭು ಕೆಂಪೇಗೌಡರ ಪುಸ್ತಕಗಳನ್ನು ಪ್ರಥಮ, ದ್ವಿತೀಯ, ತೃತೀಯ ಹಾಗೂ ಎರಡು ಸಮಾದಾನಕರ ಬಹುಮಾನವಾಗಿ ನೀಡಲಾಗುವುದು ಎಂದು ಕೋಲಾರ ಅಪರ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

# ನಾಗರೀಕ ಬಂದೂಕು ತರಬೇತಿ ಶಿಬಿರ

ಕೋಲಾರ

ಕೋಲಾರ ಪೊಲೀಸ್ ಅಧೀಕ್ಷಕರು ರವರ ಅನುಮತಿಯೊಂದಿಗೆ ಕೋಲಾರ ಜಿಲ್ಲಾ ಸಶಸ್ತ್ರ ಮೀಸಲು ಪಡೆ ವತಿಯಿಂದ ನಾಗರೀಕ ಬಂದೂಕು ತರಬೇತಿ ಶಿಬಿರವನ್ನು 1ನೇ ಹಂತವಾಗಿ ದಿನಾಂಕ: 13-07-2026 ರಿಂದ 19-07-2026ರ ವರೆಗೆ ಕೋಲಾರ ನಗರ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲೆಯ ಆಸಕ್ತ ನಾಗರೀಕರು ಈ ತರಬೇತಿಗೆ ಅರ್ಜಿಯನ್ನು ಜುಲೈ 02 ರಿಂದ ಜುಲೈ 11 ರವರೆಗೆ ಕೋಲಾರ ಜಿಲ್ಲಾ ಸಶಸ್ತ್ರ ಮೀಸಲು ಪಡೆ, ಇಲ್ಲಿ ಕಚೇರಿಯ ಅವಧಿಯಲ್ಲಿ ಪಡೆದು, ಭರ್ತಿ ಮಾಡಿದ ಅರ್ಜಿಗಳನ್ನು ಜುಲೈ 12 ರೊಳಗೆ ಸಲ್ಲಿಸಬೇಕು. ಮಹಿಳೆಯರಿಗೆ ವಿಶೇಷ ಆದ್ಯತೆ ಇರುತ್ತದೆ. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ: 08152 222023 ಅನ್ನು ಸಂಪರ್ಕಿಸಬಹುದು ಎಂದು ಕೋಲಾರ ಡಿ.ಎ.ಆರ್ ಪೊಲೀಸ್ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೃಷಿ ಪಂಡಿತ ಪ್ರಶಸ್ತಿಗೆ ಅರ್ಜಿಆಹ್ವಾನ

ತುಮಕೂರು

ಕೃಷಿ ಕ್ಷೇತ್ರದಲ್ಲಿ ವಿಶೇಷ ಸಾಧನೆ ಮಾಡಿದ ರೈತರು ಹಾಗೂ ರೈತ ಮಹಿಳೆಯರನ್ನು ಗುರುತಿಸಿ 2026-27ನೇ ಸಾಲಿನ ಕೃಷಿ ಪಂಡಿತ ಪ್ರಶಸ್ತಿ ನೀಡಲು ಕೃಷಿ ಇಲಾಖೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ಆಸಕ್ತ ರೈತರು ಕೆ-ಕಿಸಾನ್ ಪೋರ್ಟಲ್‌ನಲ್ಲಿ ಲಾಗಿನ್ ಮಾಡಿ, ಸಮೀಪದ ರೈತ ಸಂಪರ್ಕ ಕೇಂದ್ರ, ನಾಗರಿಕ ಸೇವಾ ಕೇಂದ್ರ ಅಥವಾ ಸ್ವತಃ ಸಿಐಡಿ ಸಂಖ್ಯೆಯನ್ನು ಬಳಸಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.

ಪುರುಷರು ಮತ್ತು ಮಹಿಳೆಯರಿಗೆ ಪ್ರತ್ಯೇಕ ವಿಭಾಗದಲ್ಲಿ ನೋಂದಣಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನವಾಗಿದೆ.

ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ಅದರ ಭೌತಿಕ ಪ್ರತಿಯೊಂದಿಗೆ ಸಿಐಡಿ ಸಂಖ್ಯೆ, ಪಹಣಿ, ಜಾತಿ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಪ್ರತಿ, ಬ್ಯಾಂಕ್ ಪಾಸ್‌ಬುಕ್ ಪ್ರತಿ ಹಾಗೂ ಈ ಹಿಂದೆ ಪಡೆದಿರುವ ಪ್ರಶಸ್ತಿಗಳು ಮತ್ತು ವಿಶೇಷ ಸಾಧನೆಗೆ ಸಂಬಂಧಿಸಿದ ದಾಖಲೆಗಳನ್ನು ಲಗತ್ತಿಸಿ ಸಂಬಂಧಿತ ರೈತ ಸಂಪರ್ಕ ಕೇಂದ್ರಕ್ಕೆ ಸಲ್ಲಿಸಬೇಕು. ಜಿಲ್ಲೆಯಲ್ಲಿ ಕೃಷಿ ಕ್ಷೇತ್ರದಲ್ಲಿ ವಿಶೇಷ ಸಾಧನೆ ಮಾಡಿದ ರೈತರು ಹಾಗೂ ರೈತ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿ ಸಲ್ಲಿಸಿ ಪ್ರಶಸ್ತಿಗೆ ಸ್ಪರ್ಧಿಸಬೇಕು.

# ಸಂಸ್ಕಾರಯುತ ಶಿಕ್ಷಣವೇ ವಿದ್ಯಾರ್ಥಿಗಳ ನಿಜವಾದ ಆಭರಣ

ಚಿಕ್ಕಬಳ್ಳಾಪುರ

ಸಂಸ್ಕಾರಯುತ ಶಿಕ್ಷಣವು ವಿದ್ಯಾರ್ಥಿಗಳ ವ್ಯಕ್ತಿತ್ವವನ್ನು ರೂಪಿಸುವ ನಿಜವಾದ ಆಭರಣವಾಗಿದ್ದು, ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳಿಗೆ ಬಾಲ್ಯದಿಂದಲೇ ಗುರು-ಹಿರಿಯರ ಮೇಲಿನ ಗೌರವ ಮತ್ತು ಉತ್ತಮ ಮೌಲ್ಯಗಳನ್ನು ಬೆಳೆಸುವಂತೆ ಮಾರ್ಗದರ್ಶನ ನೀಡಬೇಕು ಎಂದು ಸುಪ್ರೀಂ ಕೋರ್ಟ್ ನಿವೃತ್ತ ನ್ಯಾಯಮೂರ್ತಿ ವಿ.ಗೋಪಾಲಗೌಡ ಹೇಳಿದರು.

ನಗರದ ಹರ್ಷೋದಯ ಕಲ್ಯಾಣ ಮಂಟಪದಲ್ಲಿ ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ "ಸ್ಪಂದನ ವಿದ್ಯಾರ್ಥಿ ವೇತನ" ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸದ ಅವಧಿಯಲ್ಲಿ ಸಮಯ ವ್ಯರ್ಥ ಮಾಡದೆ ದೊರೆತ ಅವಕಾಶಗಳನ್ನು ಸದ್ಬಳಕೆ ಮಾಡಿಕೊಂಡು ಉನ್ನತ ಶಿಕ್ಷಣದತ್ತ ಹೆಜ್ಜೆ ಇಡಬೇಕು. ಸಮಾಜ ನಮಗೆ ಏನು ಕೊಟ್ಟಿದೆ ಎಂಬುದಕ್ಕಿಂತ ಸಮಾಜಕ್ಕೆ ನಮ್ಮ ಕೊಡುಗೆ ಏನು ಎಂಬುದನ್ನು ಅರಿತು ಸಾಧಕರಾಗಿ ಹೊರಹೊಮ್ಮಬೇಕು ಎಂದು ಅವರು ಕರೆ ನೀಡಿದರು. ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಸಂದೀಪ್ ಬಿ. ರೆಡ್ಡಿ ಅವರಂತಹ ಸಮಾಜಮುಖಿ ವ್ಯಕ್ತಿಗಳ ಸಹಕಾರದಿಂದ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಮತ್ತಷ್ಟು ಬಲ ದೊರೆಯಲಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಸಂದೀಪ್ ಬಿ. ರೆಡ್ಡಿ, ಪ್ರತಿಯೊಬ್ಬ ವಿದ್ಯಾರ್ಥಿಯೂ ಭಾರತದ ಭವಿಷ್ಯದ ನಾಯಕನಾಗುವ ಗುರಿಯೊಂದಿಗೆ ಶಿಕ್ಷಣ ಪಡೆಯಬೇಕು. ಯಾವುದೇ ವಿದ್ಯಾರ್ಥಿ ಶಿಕ್ಷಣದಿಂದ ವಂಚಿತನಾಗಬಾರದು ಎಂಬ ಉದ್ದೇಶದಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಅಗತ್ಯ ಆರ್ಥಿಕ ನೆರವು ನೀಡಲು ಟ್ರಸ್ಟ್ ಬದ್ಧವಾಗಿದೆ ಎಂದು ತಿಳಿಸಿದರು.

"ನನ್ನ ದೇಶ, ನನ್ನ ಹೆಮ್ಮೆ" ಎಂಬ ಭಾವನೆಯೊಂದಿಗೆ ಮಕ್ಕಳು ದೊಡ್ಡ ಕನಸುಗಳನ್ನು ಕಾಣಬೇಕು. ಶಿಕ್ಷಣದ ಮೂಲಕ ತಮ್ಮ ಬದುಕನ್ನು ರೂಪಿಸಿಕೊಳ್ಳುವುದರ ಜೊತೆಗೆ ಪೋಷಕರಿಗೆ ಆಸರೆಯಾಗಬೇಕು. ದೇಶದ ಅಭಿವೃದ್ಧಿಗೆ ಕೊಡುಗೆ ನೀಡುವ ಜವಾಬ್ದಾರಿಯುತ ನಾಗರಿಕರಾಗಿ ಬೆಳೆಬೇಕು ಎಂದು ಅವರು ಸಲಹೆ ನೀಡಿದರು.

ಸಾಮಾಜಿಕ ಬದ್ಧತೆಯ ಭಾಗವಾಗಿ ಜಿಲ್ಲೆಯ ಶಾಶ್ವತ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕಾಗಿ ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಒಂದು ಲಕ್ಷ ಸಹಿ ಸಂಗ್ರಹ ಅಭಿಯಾನ ಆರಂಭಿಸಲಾಗಿದೆ. ಸಂಗ್ರಹಿಸಲಾದ ಸಹಿಗಳನ್ನು ರಾಷ್ಟ್ರಪತಿಗಳಿಗೆ ಸಲ್ಲಿಸಿ ಜನಪರ ಹೋರಾಟ ಮುಂದುವರಿಸಲಾಗುವುದು ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಶೇಕಡಾ 60 ಕ್ಕಿಂತ ಹೆಚ್ಚು ಅಂಕ ಗಳಿಸಿದ ಸುಮಾರು 1,000ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ತಲಾ 5,000 ವಿದ್ಯಾರ್ಥಿವೇತನದ ಚೆಕ್, ಸ್ಮರಣಿಕೆ ಹಾಗೂ ಅಭಿನಂದನಾ ಪತ್ರಗಳನ್ನು ವಿತರಿಸಲಾಯಿತು. ಅಲ್ಲದೆ ನಿವೃತ್ತ ಸೈನಿಕರನ್ನು ಗೌರವಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಶ್ವತ ನೀರಾವರಿ ಹೋರಾಟ ಸಮಿತಿಯ ಜಿಲ್ಲಾಧ್ಯಕ್ಷ ಆರ್. ಆಂಜನೇಯರೆಡ್ಡಿ, ಮಹಿಳಾ ಹೋರಾಟಗಾರ್ತಿ ಸುಷ್ಮಾ ಶ್ರೀನಿವಾಸ್, ದಲಿತ ಸಂಘರ್ಷ ಸಮಿತಿಯ ಪದಾಧಿಕಾರಿಗಳು ಹಾಗೂ ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್‌ನ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಗುರು-ಹಿರಿಯರು ಹಾಗೂ ಪೋಷಕರಿಗೆ ಗೌರವ ನೀಡಿದಾಗ

# ಸಾಧನೆಗೆ ಭದ್ರ ಅಡಿಪಾಯ

ತಿಪಟೂರು

ಗುರು-ಹಿರಿಯರು ಮತ್ತು ಪೋಷಕರಿಗೆ ಗೌರವ ನೀಡುವ ಮಕ್ಕಳು ಜೀವನದಲ್ಲಿ ಉನ್ನತ ಸಾಧನೆ ಮಾಡುತ್ತಾರೆ. ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಪೋಷಕರು ಅನೇಕ ತ್ಯಾಗಗಳನ್ನು ಮಾಡಿ ಉತ್ತಮ ಶಿಕ್ಷಣವನ್ನು ಕಲ್ಪಿಸುತ್ತಾರೆ. ಮಕ್ಕಳು ಶೈಕ್ಷಣಿಕವಾಗಿ ಸಾಧನೆ ಮಾಡಿದಾಗ ಪೋಷಕರಿಗೆ ಅದಕ್ಕಿಂತ ದೊಡ್ಡ ಸಂತೋಷ ಮತ್ತೊಂದಿಲ್ಲ ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಉಪಾಧ್ಯಕ್ಷ ಹಾಗೂ ಕೌಶಲ್ಯ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಮುರಳೀಧರ ಹಾಲಪ್ಪ ಹೇಳಿದರು.



ನಗರದ ಹೌಸಿಂಗ್ ಬೋರ್ಡ್ ಬಡಾವಣೆಯಲ್ಲಿರುವ ಒಕ್ಕಲಿಗರ ಸಮುದಾಯ ಭವನದಲ್ಲಿ ತಾಲೂಕು ಒಕ್ಕಲಿಗರ ಸಂಘ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಹಾಗೂ ನಾಡಪ್ರಭು ಕೆಂಪೇಗೌಡರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಉನ್ನತ ಶಿಕ್ಷಣವನ್ನು ಪೂರ್ಣಗೊಳಿಸಿ ಉತ್ತಮ ಉದ್ಯೋಗ ಗಳಿಸಿದಾಗ ಪೋಷಕರ ಪರಿಶ್ರಮಕ್ಕೆ ನಿಜವಾದ ಪ್ರತಿಫಲ ದೊರೆಯುತ್ತದೆ. ಮಧ್ಯದಲ್ಲೇ ವಿದ್ಯಾಭ್ಯಾಸವನ್ನು ಕೈಬಿಡದೆ, ಸ್ಪಷ್ಟ ಗುರಿ, ಪರಿಶ್ರಮ ಹಾಗೂ ಶ್ರದ್ಧೆಯಿಂದ ಅಧ್ಯಯನ ನಡೆಸಿದರೆ ದೀರ್ಘಕಾಲೀನ ಯಶಸ್ಸು ಸಾಧಿಸಬಹುದು ಎಂದು ಸಲಹೆ ನೀಡಿದರು.

ರಾಜ್ಯದಿಂದ ಐಎಎಸ್ ಹಾಗೂ ಐಪಿಎಸ್ ಅಧಿಕಾರಿಗಳ ಸಂಖ್ಯೆ ಇತ್ತೀಚಿನ ವರ್ಷಗಳಲ್ಲಿ ಕಡಿಮೆಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆ. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉತ್ತೇಜನ ನೀಡುವ ಉದ್ದೇಶದಿಂದ ಆದಿಚುಂಚನಗಿರಿ ಮಹಾಸಂಸ್ಥಾನ ಮಠವು ಬೆಂಗಳೂರು ಹಾಗೂ ದೆಹಲಿಯಲ್ಲಿ ಐಎಎಸ್ ಮತ್ತು ಐಪಿಎಸ್ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಕೇಂದ್ರಗಳನ್ನು ಆರಂಭಿಸಿದೆ ಎಂದು ತಿಳಿಸಿದರು.

ಆದಿಚುಂಚನಗಿರಿ ಸಂಸ್ಥಾನ ಮಠದ ಪ್ರಧಾನ ಕಾರ್ಯದರ್ಶಿ ಶ್ರೀ ಪ್ರಸನ್ನನಾಥ ಸ್ವಾಮೀಜಿ ಮಾತನಾಡಿ, ಇತಿಹಾಸದ ಹಲವು ಮಹತ್ವದ ಸಂಗತಿಗಳು ಸರಿಯಾಗಿ ದಾಖಲಾಗಿಲ್ಲ. ಅವುಗಳನ್ನು ಸಂಗ್ರಹಿಸಿ ಮುಂದಿನ ಪೀಳಿಗೆಗೆ ಪರಿಚಯಿಸುವ ಕಾರ್ಯಕ್ಕೆ ಸರ್ಕಾರ ಹಾಗೂ ಸಮಾಜದ ಸಂಘಟನೆಗಳು ಮುಂದಾಗಬೇಕು ಎಂದರು.

ತಿಪಟೂರು ತಾಲೂಕಿನಲ್ಲಿ ಆದಿಚುಂಚನಗಿರಿ ಸಂಸ್ಥಾನ ಮಠ ಹಾಗೂ ಒಕ್ಕಲಿಗರ ಸಂಘದ ಸಹಯೋಗದಲ್ಲಿ ಶಾಲೆ ಮತ್ತು ಕಾಲೇಜು ಆರಂಭಿಸುವ ಉದ್ದೇಶವಿದ್ದು, ಈ ಕಾರ್ಯಕ್ಕೆ ಸಂಘದ ಸಂಪೂರ್ಣ ಸಹಕಾರ ಅಗತ್ಯವಿದೆ ಎಂದು ಹೇಳಿದರು.

ತಾಲೂಕು ಒಕ್ಕಲಿಗರ ಸಂಘವು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ವಿದ್ಯಾನಿಧಿ ಯೋಜನೆಯಡಿ ಸುಮಾರು 94 ಲಕ್ಷ ರೂಪಾಯಿ ಸಂಗ್ರಹಿಸಿದ್ದು, ಒಕ್ಕಲಿಗರ ಮಹಾಸಂಸ್ಥಾನದಿಂದ 6 ಲಕ್ಷ ರೂಪಾಯಿ ನೀಡಲಾಗುತ್ತದೆ. ಒಟ್ಟು ಒಂದು ಕೋಟಿ ರೂಪಾಯಿಯನ್ನು ಠೇವಣಿಯಾಗಿ ಇಟ್ಟು ಅದರ ಬಡ್ಡಿ ಹಣದಿಂದ ಪ್ರತಿವರ್ಷ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ನಿರಂತರವಾಗಿ ನಡೆಸುವ ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು.

ಹೃದಯ ತಜ್ಞ ಡಾ. ಜಿ.ಬಿ. ವಿವೇಚನ್ ಮಾತನಾಡಿ, ಈ ಬಾರಿ ಕೇವಲ ಒಕ್ಕಲಿಗ ಸಮುದಾಯದ ವಿದ್ಯಾರ್ಥಿಗಳಷ್ಟೇ ಅಲ್ಲದೆ, ತಾಲೂಕಿನಲ್ಲಿ ಅತ್ಯುತ್ತಮ ಅಂಕಗಳೊಂದಿಗೆ ಉತ್ತೀರ್ಣರಾದ ಇತರೆ ಸಮುದಾಯಗಳ ಪ್ರತಿಭಾವಂತ ವಿದ್ಯಾರ್ಥಿಗಳನ್ನೂ ಗುರುತಿಸಿ ಸನ್ಮಾನಿಸಲಾಗುತ್ತಿದೆ. ನಾಡಪ್ರಭು ಕೆಂಪೇಗೌಡರ ಆದರ್ಶಗಳನ್ನು ಯುವ ಸಮುದಾಯ ಸೇರಿದಂತೆ ಪ್ರತಿಯೊಬ್ಬರೂ ಅಳವಡಿಸಿಕೊಂಡು ರಾಜ್ಯದ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ತಾರಾಮಣಿ, ಇತಿಹಾಸ ತಜ್ಞ ಡಾ. ತಲಕಾಡು ಚಿಕ್ಕರಂಗೇಗೌಡ, ತಾಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಎನ್. ಚಿದಾನಂದ್, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕರಾದ ಎಚ್. ಹನುಮಂತರಾಯಪ್ಪ ಹಾಗೂ ಬಿ.ಎನ್. ಲೋಕೇಶ್, ಮೈಸೂರಿನ ನೇಗಿಲ ಯೋಗಿ ಸಮಾಜ ಸೇವಾ ಟ್ರಸ್ಟ್ ಅಧ್ಯಕ್ಷ ಡಿ. ರವಿಕುಮಾರ್, ಸಮಾಜದ ಮುಖಂಡರು, ಸಂಘದ ಪದಾಧಿಕಾರಿಗಳು, ಪ್ರತಿಭಾ ಪುರಸ್ಕಾರ ಸಮಿತಿ ಸದಸ್ಯರು ಹಾಗೂ

## ವೀರಾಪುರ ರೈಲ್ವೆ ಅಂಡರ್‌ಪಾಸ್ ಸಮಸ್ಯೆಗೆ ಶಾಶ್ವತ ಪರಿಹಾರಕ್ಕೆ ಸೂಚನೆ

ಶಿಡ್ಲಘಟ್ಟ

ರಾಷ್ಟ್ರೀಯ ಹೆದ್ದಾರಿ-234ರ ಚಿಂತಾಮಣಿ-ಶಿಡ್ಲಘಟ್ಟ ಮಾರ್ಗದಲ್ಲಿರುವ ವೀರಾಪುರ ರೈಲ್ವೆ ಅಂಡರ್‌ಪಾಸ್‌ನಲ್ಲಿ ಪದೇ ಪದೇ ಉಂಟಾಗುತ್ತಿರುವ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವಂತೆ ಶಾಸಕ ಬಿ.ಎನ್.ರವಿಕುಮಾರ್ ಅವರು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ರೈಲ್ವೆ ಇಲಾಖೆ ಹಾಗೂ ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಿದರು.



ವೀರಾಪುರ ಸಮೀಪದ ರೈಲ್ವೆ ಅಂಡರ್‌ಪಾಸ್‌ನಲ್ಲಿ ಮಳೆನೀರು ಹರಿದು ಹೋಗಲು ಅಳವಡಿಸಿರುವ ಕಬ್ಬಿಣದ ಸರಳುಗಳ ವೆಲ್ಡಿಂಗ್ ಪದೇ ಪದೇ ಕಿತ್ತು ಬರುತ್ತಿದ್ದು, ಸರಳುಗಳು ಮೇಲ್ಮುಖವಾಗಿ ಎದ್ದುನಿಂತು ವಾಹನ ಸಂಚಾರಕ್ಕೆ ಅಡಚಣೆ ಉಂಟುಮಾಡುತ್ತಿವೆ. ಕಳೆದ ಐದಾರು ತಿಂಗಳಲ್ಲಿ ಈ ಸಮಸ್ಯೆಯಿಂದ ಹತ್ತಕ್ಕೂ ಹೆಚ್ಚು ಅಪಘಾತಗಳು ಸಂಭವಿಸಿರುವುದಾಗಿ ಸ್ಥಳೀಯರು ತಿಳಿಸಿದ್ದಾರೆ.

ಸಮಸ್ಯೆ ಉಂಟಾದಾಗಲೆಲ್ಲಾ ತಾತ್ಕಾಲಿಕವಾಗಿ ವೆಲ್ಡಿಂಗ್ ಮಾಡಲಾಗುತ್ತಿದ್ದರೂ, ಒಂದೇ ದಿನದಲ್ಲಿ ಮತ್ತೆ ವೆಲ್ಡಿಂಗ್ ಕಿತ್ತು ಬಂದು ಸಮಸ್ಯೆ ಮರುಕಳಿಸುತ್ತಿದೆ. ಈ ಕುರಿತು ವೀರಾಪುರ ಹಾಗೂ ತಲದುಮ್ಮನಹಳ್ಳಿ ಗ್ರಾಮಸ್ಥರು ಹಲವು ಬಾರಿ ಪೊಲೀಸ್ ಇಲಾಖೆ, ರೈಲ್ವೆ ಇಲಾಖೆ ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ಮನವಿ ಸಲ್ಲಿಸಿ, ಶಾಸಕರ ಗಮನಕ್ಕೂ ತಂದಿದ್ದರು.

ಇದಕ್ಕೆ ಸ್ಪಂದಿಸಿದ ಶಾಸಕ ಬಿ.ಎನ್. ರವಿಕುಮಾರ್ ಅಧಿಕಾರಿಗಳೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಸಮಸ್ಯೆ ಮರುಕಳಿಸದಂತೆ ಶಾಶ್ವತ ದುರಸ್ತಿ ಕೈಗೊಳ್ಳುವ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಮಳೆನೀರು ಸರಾಗವಾಗಿ ಹರಿದು ಹೋಗುವ ವ್ಯವಸ್ಥೆ ಕಲ್ಪಿಸುವುದರ ಜೊತೆಗೆ, ಕಬ್ಬಿಣದ ಸರಳುಗಳು ಮತ್ತೆ ಕಿತ್ತು ಬರದಂತೆ ತಾಂತ್ರಿಕವಾಗಿ ಸಮರ್ಪಕ ಕಾಮಗಾರಿ ಕೈಗೊಳ್ಳಬೇಕು. ರೈಲ್ವೆ ಇಲಾಖೆ ಮತ್ತು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಸಮನ್ವಯ ಸಾಧಿಸಿ ಶೀಘ್ರದಲ್ಲಿ ಶಾಶ್ವತ ಪರಿಹಾರ ಒದಗಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ರವಿಕುಮಾರ್, ವೀರಾಪುರ ರೈಲ್ವೆ ಅಂಡರ್‌ಪಾಸ್ ಸಮಸ್ಯೆಯಿಂದ ಸಾರ್ವಜನಿಕರಿಗೆ ದೀರ್ಘಕಾಲದಿಂದ ತೀವ್ರ ತೊಂದರೆ ಉಂಟಾಗಿದ್ದು, ಹಲವು ಅಪಘಾತಗಳು ಸಂಭವಿಸಿರುವುದು ಗಂಭೀರ ವಿಷಯವಾಗಿದೆ. ಸಾರ್ವಜನಿಕರ ಸುರಕ್ಷತೆ ಹಾಗೂ ಸುಗಮ ಸಂಚಾರಕ್ಕೆ ಆದ್ಯತೆ ನೀಡಿ ತಕ್ಷಣವೇ ಕಾಮಗಾರಿ ಆರಂಭಿಸುವಂತೆ ಸೂಚಿಸಲಾಗಿದೆ.

ಈ ವೇಳೆ ವಿಧಾನ ಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಮತ ಹಾಕಿರುವ ಬಗ್ಗೆ ಶಾಸಕ ಪ್ರದೀಪ್ ಈಶ್ವರ್ ಮಾಡಿರುವ ಆರೋಪ ಕುರಿತು ಮಾಧ್ಯಮದವರು ಪ್ರಶ್ನಿಸಿದರೂ, ಶಾಸಕ ಬಿ.ಎನ್. ರವಿಕುಮಾರ್ ಯಾವುದೇ ಪ್ರತಿಕ್ರಿಯೆ ನೀಡಲಿಲ್ಲ.

ಸ್ಥಳ ಪರಿಶೀಲನೆ ವೇಳೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು, ರೈಲ್ವೆ ಇಲಾಖೆಯ ಅಧಿಕಾರಿಗಳು, ಇಂಜಿನಿಯರ್‌ಗಳು, ನಗರ ಪೊಲೀಸ್ ಠಾಣೆ ಪಿಎಸ್‌ಐ ವೇಣುಗೋಪಾಲ್, ರೈತ ಸಂಘದ ಜಿಲ್ಲಾ ಉಪಾಧ್ಯಕ್ಷ ವೀರಾಪುರ ಮುನಿನಂಜಪ್ಪ, ವಿ.ಆರ್. ಗಣೇಶ್, ತಲದುಮ್ಮನಹಳ್ಳಿ ಹಾಗೂ ವೀರಾಪುರ ಗ್ರಾಮದ ಮುಖಂಡರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

ಸ್ಥಳ ಪರಿಶೀಲನೆ ವೇಳೆ ರೈತ ಮುಖಂಡ ಮುನಿನಂಜಪ್ಪ ಅವರು, ಕಳೆದ ಐದಾರು ತಿಂಗಳಲ್ಲಿ ನಾಲ್ಕೈದು ಬಾರಿ ವೆಲ್ಡಿಂಗ್ ಮಾಡಲಾಗಿದ್ದರೂ ಅದೇ ದಿನ ಮತ್ತೆ ಕಿತ್ತು ಬರುತ್ತಿದೆ. ಹಲವು ಬಾರಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರೂ ಶಾಶ್ವತ ಪರಿಹಾರ ದೊರೆತಿಲ್ಲ. ರಸ್ತೆ ತಡೆ ಹಮ್ಮಿಕೊಳ್ಳುವ ಯೋಚನೆಯನ್ನೂ ಮಾಡಿದ್ದೆವು. ಆದರೆ ಅಧಿಕಾರಿಗಳ ಭರವಸೆಯಿಂದ ಹಿಂದೆ ಸರಿದಿದ್ದೇವೆ. ಈಗ ಶಾಸಕರು ಸ್ಥಳಕ್ಕೆ ಭೇಟಿ ನೀಡಿರುವ ಹಿನ್ನೆಲೆಯಲ್ಲಿ ತಾತ್ಕಾಲಿಕ ದುರಸ್ತಿಯ ಬದಲು ಶಾಶ್ವತ ಕಾಮಗಾರಿ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

# ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ

ಕೋಲಾರ

ಭಾರತ ಚುನಾವಣೆ ಆಯೋಗವು ಹೊಸದಾಗಿ ಹಮ್ಮಿಕೊಂಡಿರುವ ಮತದಾರರ ವಿಶೇಷ ಪರಿಷ್ಕರಣೆ ಹಾಗೂ ಗಣತಿ ಕಾರ್ಯದಲ್ಲಿ ಕೋಲಾರ ವಿಧಾನಸಭಾ ಕ್ಷೇತ್ರದ ಶಾಸಕ ಕೊತ್ತೂರು ಮಂಜುನಾಥ್ ಅವರು ತಮ್ಮ ಸ್ವಂತ ಗ್ರಾಮ ಮುಳಬಾಗಿಲಿನ ಕೊತ್ತೂರು ಗ್ರಾಮದಲ್ಲಿ ತಮ್ಮ ವಿವರಗಳನ್ನು ನೋಂದಾಯಿಸಿಕೊಂಡರು.

ಕ್ಷೇತ್ರದ ಬೂತ್ ಮಟ್ಟದ ಅಧಿಕಾರಿ ಅವರಿಗೆ ತಮ್ಮ ಅಗತ್ಯ ಮಾಹಿತಿ ಹಾಗೂ ವಿವರಗಳನ್ನು ಒದಗಿಸಿದ ಶಾಸಕರು, ನಿಗದಿತ ನಮೂನೆಯಲ್ಲಿ ಸಹಿ ಮಾಡುವ ಮೂಲಕ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಚುನಾವಣೆ ಆಯೋಗದ ಈ ಪ್ರಕ್ರಿಯೆಯು ಅತ್ಯಂತ ಮಹತ್ವದ್ದಾಗಿದೆ. ಮುಳಬಾಗಿಲು ಮತ್ತು ಕೋಲಾರ ಕ್ಷೇತ್ರದ ಪ್ರತಿಯೊಬ್ಬ ನಾಗರಿಕರು ಹಾಗೂ ಮತದಾರರು ಈ ವಿಶೇಷ ಪರಿಷ್ಕರಣಾ ಕಾರ್ಯದಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು. ತಮ್ಮ ಬೂತ್ ಮಟ್ಟದ ಅಧಿಕಾರಿಗಳಿಗೆ ಅಗತ್ಯವಿರುವ ನಿಖರ ಮಾಹಿತಿಗಳನ್ನು ನೀಡಿ ಸಹಕರಿಸಬೇಕು, ಎಂದು ಮನವಿ ಮಾಡಿದರು.

ಭಾರತ ಚುನಾವಣೆ ಆಯೋಗದ ಈ ಹೊಸ ಗಣತಿ ಕಾರ್ಯವನ್ನು ಶ್ಲಾಘಿಸಿದ ಅವರು, "ಈ ಪ್ರಕ್ರಿಯೆಯು ದೇಶದ ಒಟ್ಟಾರೆ ಹಿತದೃಷ್ಟಿಯಿಂದ ಹಾಗೂ ಭಾರತದ ಪೌರತ್ವವನ್ನು ರಕ್ಷಿಸಿಕೊಳ್ಳುವ ನಿಟ್ಟಿನಲ್ಲಿ ಅತ್ಯಂತ ಪ್ರಮುಖ ಹೆಜ್ಜೆಯಾಗಿದೆ. ದೇಶದೊಳಗೆ ಅಕ್ರಮವಾಗಿ ನುಸುಳಿರುವ ಇತರ ದೇಶಗಳ ನುಸುಳುಕೋರರನ್ನು ಗುರುತಿಸಿ ಹೊರಗಟ್ಟಲು ಮತ್ತು ಅರ್ಹ ನಾಗರಿಕರಿಗೆ ಸೂಕ್ತ ಪೌರತ್ವದ ಹಕ್ಕುಗಳನ್ನು ಕಾಪಾಡಲು ಈ ಕಾರ್ಯವು ಉತ್ತಮ ಮತ್ತು ಶ್ಲಾಘನೀಯವಾಗಿದೆ, ಎಂದು ಅಭಿಪ್ರಾಯಪಟ್ಟರು.

# ಅದ್ದೂರಿಯಾಗಿ ಕೆಂಪೇಗೌಡರ ಜಯಂತಿ ಆಚರಣೆ

ಶಿಡ್ಲಘಟ್ಟ

ನಾಡಪ್ರಭು ಶ್ರೀ ಕೆಂಪೇಗೌಡರು ಎಲ್ಲ ಜಾತಿ-ಧರ್ಮಗಳನ್ನು ಒಗ್ಗೂಡಿಸಿಕೊಂಡು ಸಮಾಜದ ಸರ್ವಾಂಗೀಣ ಅಭಿವೃದ್ಧಿಗೆ ಶತಮಾನಗಳ ಹಿಂದೆಯೇ ದೂರದೃಷ್ಟಿಯ ಯೋಜನೆಗಳನ್ನು ರೂಪಿಸಿದ ಮಹಾನ್ ನಾಯಕ ಎಂದು ಮುಖಂಡ ರಾಜೀವ್ ಗೌಡ ಹೇಳಿದರು.

ತಾಲೂಕಿನ ಎಚ್.ಕ್ರಾಸ್‌ನಲ್ಲಿ ಆಯೋಜಿಸಿದ್ದ ನಾಡಪ್ರಭು ಶ್ರೀ ಕೆಂಪೇಗೌಡರ ಜಯಂತಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಕೆಂಪೇಗೌಡರ ಮೂರ್ತಿಗೆ ಪೂಜೆ ಸಲ್ಲಿಸಿ ಪುಷ್ಪನಮನ ಸಲ್ಲಿಸಿದ ಬಳಿಕ ಅವರು ಮಾತನಾಡಿದರು.

ಕೆಂಪೇಗೌಡರು ಪ್ರತಿಯೊಂದು ಸಮುದಾಯದ ಕುಲಕಸುಬುಗಳನ್ನು ಗುರುತಿಸಿ, ಅವರಿಗೆ ಪ್ರತ್ಯೇಕ ಪೇಟೆಗಳನ್ನು ನಿರ್ಮಿಸುವ ಮೂಲಕ ಜೀವನೋಪಾಯಕ್ಕೆ ಅವಕಾಶ ಕಲ್ಪಿಸಿ ಸಮಾಜದ ಅಭಿವೃದ್ಧಿಗೆ ಭದ್ರ ಅಡಿಪಾಯ ಹಾಕಿದ್ದರು. ಎಲ್ಲ ಜಾತಿ-ಧರ್ಮಗಳನ್ನು ಸಮಾನವಾಗಿ ಕಾಣುವ ಆಡಳಿತಗಾರರಾಗಿ ಅವರು ಇಂದಿಗೂ ಆದರ್ಶಪ್ರಾಯರಾಗಿದ್ದಾರೆ ಎಂದು ಹೇಳಿದರು.

ಜನಸಾಮಾನ್ಯರ ನಡುವೆ ಬೆರೆತು ಉತ್ತಮ ಆಡಳಿತ ನೀಡಿದ ಕೆಂಪೇಗೌಡರು ದೂರದೃಷ್ಟಿಯ ನಾಯಕತ್ವ, ಸಮನ್ವಯತೆ ಮತ್ತು ಅಭಿವೃದ್ಧಿಯ ಚಿಂತನೆಯ ಮೂಲಕ ಇತಿಹಾಸದಲ್ಲಿ ವಿಶಿಷ್ಟ ಸ್ಥಾನ ಪಡೆದಿದ್ದಾರೆ. ಅವರ ಜೀವನ ಚರಿತ್ರೆ, ಜಾಗತಿಕ ನಗರ ಬೆಂಗಳೂರನ್ನು ನಿರ್ಮಿಸಿದ ಸಾಧನೆ ಹಾಗೂ ಆಡಳಿತ ವೈಖರಿಯನ್ನು ಇಂದಿನ ಪೀಳಿಗೆ ಅರಿತುಕೊಳ್ಳಬೇಕು. ಮುಂದಿನ ತಲೆಮಾರುಗಳಿಗೂ ಅವರ ಆದರ್ಶಗಳನ್ನು ಪರಿಚಯಿಸುವ ಕೆಲಸ ಸಮಾಜದಿಂದ ಆಗಬೇಕು ಎಂದು ತಿಳಿಸಿದರು.

ಕೆಂಪೇಗೌಡರು ಬೆಂಗಳೂರನ್ನು ನಿರ್ಮಿಸಿ ಬೆಳೆಸಿದ ರೀತಿಯಲ್ಲೇ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಉತ್ತಮ ಆಡಳಿತ ಮತ್ತು ಅಭಿವೃದ್ಧಿಯ ಮೂಲಕ ಕರ್ನಾಟಕವನ್ನು ಇನ್ನಷ್ಟು ಪ್ರಗತಿಯತ್ತ ಕೊಂಡೊಯ್ಯಲಿದ್ದಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಕೆಂಪೇಗೌಡರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪನಮನ ಅರ್ಪಿಸಲಾಯಿತು. ಬಳಿಕ ಪ್ರಮುಖ ಬೀದಿಗಳಲ್ಲಿ ವಿವಿಧ ಕಲಾತಂಡಗಳೊಂದಿಗೆ ಅದ್ದೂರಿ ಮೆರವಣಿಗೆ ನಡೆಯಿತು. ಕಲಾತಂಡಗಳ ಪ್ರದರ್ಶನ ಮೆರವಣಿಗೆಗೆ ವಿಶೇಷ ಮೆರುಗು ನೀಡಿತು.

ಈ ಸಂದರ್ಭದಲ್ಲಿ ಎಚ್.ಕ್ರಾಸ್ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಕಾಳನಾಯಕನಹಳ್ಳಿ ಭೀಮೇಶ್, ಬಸವಾಪಟ್ಟಣ ಬೈರೇಗೌಡ ಸೇರಿದಂತೆ ಸ್ಥಳೀಯ ಮುಖಂಡರು, ಸಾರ್ವಜನಿಕರು ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಮಕ್ಕಳೊಂದಿಗೆ ತಾಯಿ ಕಾಣೆ

ತುಮಕೂರು

ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿ ಸಿದ್ದರಾಮೇಶ್ವರ ಕ್ರಷರ್‌ನಲ್ಲಿ ವಾಸವಾಗಿದ್ದ ಸುಮಾರು 30 ವರ್ಷದ ನೀಲಮ್ಮ ಎಂಬ ಮಹಿಳೆಯು 9 ವರ್ಷದ ಶರಣಮ್ಮ, 6 ವರ್ಷದ ಬಸವರಾಜ ಪೂಜಾರಿ ಹಾಗೂ 5 ವರ್ಷದ ಸೌಜನ್ಯ ಎಂಬ ತನ್ನ 3 ಮಕ್ಕಳೊಂದಿಗೆ ಜೂನ್ 23ರಂದು ಕಾಣೆಯಾಗಿದ್ದಾಳೆ ಎಂದು ಠಾಣೆಯಲ್ಲಿ ದೂರು ದಾಖಲಾಗಿದೆ.

ಕಾಣೆಯಾದ ನೀಲಮ್ಮ 5.4 ಅಡಿ ಎತ್ತರ, ಎಣ್ಣೆಗೆಂಪು ಮೈಬಣ್ಣ, ದುಂಡು ಮುಖ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾಳೆ. ಕಾಣೆಯಾದ ಸಂದರ್ಭದಲ್ಲಿ ನೀಲಿ ಬಣ್ಣದ ಸೀರೆ ಹಾಗೂ ಕೆಂಪು ಬಣ್ಣದ ರವಿಕೆ ಧರಿಸಿದ್ದಳು.

ಶರಣಮ್ಮ ಎಂಬ ಹೆಣ್ಣು ಮಗುವು ಎಣ್ಣೆಗೆಂಪು ಮೈಬಣ್ಣ, ದುಂಡು ಮುಖ, ಸಾಧಾರಣ ಮೈಕಟ್ಟು ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ನೀಲಿ ಬಣ್ಣದ ಫ್ರಾಕ್ ಧರಿಸಿದ್ದಳು.

ಬಸವರಾಜ ಪೂಜಾರಿ ಎಂಬ ಗಂಡು ಮಗುವು ಎಣ್ಣೆಗೆಂಪು ಮೈಬಣ್ಣ, ದುಂಡು ಮುಖ, ಸಾಧಾರಣ ಮೈಕಟ್ಟು ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ಕೆಂಪು ಬಣ್ಣದ ಅಂಗಿ ಹಾಗೂ ಕಪ್ಪು ಬಣ್ಣದ ನಿಕ್ಕರ್ ಧರಿಸಿದ್ದನು.

ಕಾಣೆಯಾದವರ ಬಗ್ಗೆ ಸುಳಿವು ಸಿಕ್ಕಲ್ಲಿ ದೂ.ವಾ.ಸಂ. 0816-2278381/ 2275301/ 2272340/ 2278000, ಮೊ.ಸಂ. 9480802948-31ನ್ನು ಸಂಪರ್ಕಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

# ಮಧುಗಿರಿ ಜಿಲ್ಲಾ ಬಿಜೆಪಿ ಮೋರ್ಚಾ ಪದಾಧಿಕಾರಿಗಳ ಪಟ್ಟಿ ತಡೆ

ತುಮಕೂರು

ಮಧುಗಿರಿ ಸಂಘಟನಾತ್ಮಕ ಜಿಲ್ಲೆಯ ನೂತನ ಜಿಲ್ಲಾ ಮೋರ್ಚಾ ಪದಾಧಿಕಾರಿಗಳ ಪಟ್ಟಿಯನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಮ್ ಗೌಡ ಅವರು ತಾತ್ಕಾಲಿಕವಾಗಿ ತಡೆಹಿಡಿದಿದ್ದಾರೆ.

ಕೊರಟಗೆರೆ ಬಿಜೆಪಿ ಮುಖಂಡ ಹಾಗೂ ಮಧುಗಿರಿ ಸಂಘಟನಾತ್ಮಕ ಜಿಲ್ಲೆಯ ಬಿಜೆಪಿ ಕೋರ್ ಕಮಿಟಿ ಸದಸ್ಯ ಬಿ.ಹೆಚ್. ಅನಿಲ್ ಕುಮಾರ್ ನೇತೃತ್ವದಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಬಿಜೆಪಿ ಪದಾಧಿಕಾರಿಗಳು ಹಾಗೂ ವಿವಿಧ ಮೋರ್ಚಾ ಪದಾಧಿಕಾರಿಗಳು ಬುಧವಾರ ರಾಜ್ಯಾಧ್ಯಕ್ಷ ವಿಜಯೇಂದ್ರ, ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಮ್ ಗೌಡ ಅವರನ್ನು ಭೇಟಿ ಮಾಡಿ, ಮಧುಗಿರಿ ಸಂಘಟನಾತ್ಮಕ ಜಿಲ್ಲೆಯ ನೂತನ ಪದಾಧಿಕಾರಿಗಳ ಪಟ್ಟಿ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು. ಮುಖಂಡರು ಹಾಗೂ ಪದಾಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದ ಬಿಜೆಪಿ ರಾಜ್ಯಾಧ್ಯಕ್ಷರು ಹಾಗೂ ರಾಜ್ಯ ಪ್ರಧಾನ ಕಾರ್ಯದರ್ಶಿಯವರು, ಮಧುಗಿರಿ ಜಿಲ್ಲಾ ನೂತನ ಪದಾಧಿಕಾರಿಗಳ ಪಟ್ಟಿಯನ್ನು ತಾತ್ಕಾಲಿಕವಾಗಿ ತಡೆಹಿಡಿಯಲು ಸೂಚಿಸಿದರು. ಜಿಲ್ಲಾ ಮುಖಂಡರು ಹಾಗೂ ಪದಾಧಿಕಾರಿಗಳೊಂದಿಗೆ ಚರ್ಚಿಸಿ, ಪಕ್ಷದ ಕಾರ್ಯಕರ್ತರು ಮತ್ತು ಸಂಘಟನೆಯ ನಡುವೆ ಯಾವುದೇ ರೀತಿಯ ಗೊಂದಲ ಉಂಟಾಗದಂತೆ ಎಚ್ಚರಿಕೆ ವಹಿಸುವಂತೆ ಸೂಚಿಸಿದರು. ಯಾವುದೇ ಭಿನ್ನಾಭಿಪ್ರಾಯಗಳಿದ್ದಲ್ಲಿ ಜುಲೈ 10ರಂದು ಸಭೆ ನಡೆಸಿ, ಎಲ್ಲರ ಅಭಿಪ್ರಾಯ ಪಡೆದು ಮುಂದಿನ ಜಿಲ್ಲಾ ಮೋರ್ಚಾ ಪದಾಧಿಕಾರಿಗಳನ್ನು ಆಯ್ಕೆ ಮಾಡುವಂತೆ ನಿರ್ದೇಶನ ನೀಡಿದರು ಎಂದು ಮಧುಗಿರಿ ಜಿಲ್ಲಾ ಕೋರ್ ಕಮಿಟಿ ಸದಸ್ಯ ಬಿ.ಹೆಚ್. ಅನಿಲ್‌ಕುಮಾರ್ ತಿಳಿಸಿದ್ದಾರೆ.

ಭಾರತ ಸಾರಥಿ
03/07/2026
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಮತಪಟ್ಟಿ ಪರಿಷ್ಕರಣೆ ಜಾಗೃತಿಗೆ 'ಸೈಕಲ್ ಜಾಥಾ'

ಕೋಲಾರ

ಕೋಲಾರ ಜಿಲ್ಲೆಯ ಸಾರ್ವಜನಿಕರಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026ರ ಕುರಿತು ಅರಿವು ಮೂಡಿಸುವ ಉದ್ದೇಶದಿಂದ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಸ್ವೀಪ್ (ಖಗಿಇಇಕ) ಸಮಿತಿಯ ವತಿಯಿಂದ ನಾಳೆ ದಿನಾಂಕ: 03.07.2026 ರಂದು ಬೆಳಿಗ್ಗೆ 8 ಗಂಟೆಗೆ ವಿಶೇಷ 'ಸೈಕಲ್ ಜಾಥಾ'ವನ್ನು ಹಮ್ಮಿಕೊಳ್ಳಲಾಗಿದೆ.

ಈ ಜಾಥಾ ಕಾರ್ಯಕ್ರಮವು ಖಃ (ಬಂಗಾರಪೇಟೆ ಸರ್ಕಲ್) ನಿಂದ ಪ್ರಾರಂಭವಾಗಲಿದೆ.

ಈ ಕಾರ್ಯಕ್ರಮಕ್ಕೆ ಜಿಲ್ಲೆಯ ಮಾನ್ಯ ಜಿಲ್ಲಾಧಿಕಾರಿಗಳು, ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಮಾನ್ಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಚಾಲನೆ ನೀಡಲಿದ್ದಾರೆ.

ಜಿಲ್ಲಾ ಮಟ್ಟದ ಮತ್ತು ಕೋಲಾರ ತಾಲೂಕು ಮಟ್ಟದ ಎಲ್ಲಾ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಈ ಜಾಗೃತಿ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಭಾಗವಹಿಸುವಂತೆ ಹಾಗೂ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ತಪ್ಪದೇ ತಮ್ಮ ಸೈಕಲ್‌ನೊಂದಿಗೆ ನಿಗದಿತ ಸಮಯಕ್ಕೆ ಖಃ (ಬಂಗಾರಪೇಟೆ ಸರ್ಕಲ್) ನಲ್ಲಿ ಹಾಜರಿರಬೇಕೆಂದು ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಅಧ್ಯಕ್ಷರು, ಸ್ವೀಪ್ ಸಮಿತಿ ಅವರು ಸೂಚಿಸಿರುತ್ತಾರೆ.

ಸಾರ್ವಜನಿಕರು ಮತ್ತು ಎಲ್ಲಾ ಇಲಾಖೆಯ ಸಹೋದ್ಯೋಗಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಈ ಜಾಗೃತಿ ಅಭಿಯಾನವನ್ನು ಯಶಸ್ವಿಗೊಳಿಸಲು ಕೋರಲಾಗಿದೆ.

# ದೊಡ್ಡಬಳ್ಳಾಪುರದಲ್ಲಿ ಶೀಘ್ರವೇ ಅತ್ಯಾಧುನಿಕ ಮಾರುಕಟ್ಟೆ

ದೊಡ್ಡಬಳ್ಳಾಪುರ

ದೊಡ್ಡಬಳ್ಳಾಪುರ ನಗರದಲ್ಲಿ ಶೀಘ್ರದಲ್ಲೇ ಅತ್ಯಾಧುನಿಕ ಸೌಲಭ್ಯಗಳನ್ನು ಹೊಂದಿರುವ ಮೀನು ಮಾರುಕಟ್ಟೆ ಸ್ಥಾಪಿಸಲಾಗುವುದು ಎಂದು ಕೆಪಿಸಿಸಿ ಮೀನುಗಾರರ ಘಟಕದ ರಾಜ್ಯಾಧ್ಯಕ್ಷ ಮಂಜುನಾಥ್ ಸುಣಗಾರ್ ತಿಳಿಸಿದರು.



ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾಲೂಕಿನ ಮೀನುಗಾರರು ಎದುರಿಸುತ್ತಿರುವ ವಿವಿಧ ಸಮಸ್ಯೆಗಳು ತಮ್ಮ ಗಮನಕ್ಕೆ ಬಂದಿದ್ದು, ಅವುಗಳನ್ನು ಹಂತ ಹಂತವಾಗಿ ಪರಿಹರಿಸಲು ಸರ್ಕಾರದ ಮಟ್ಟದಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ದೊಡ್ಡಬಳ್ಳಾಪುರದಲ್ಲಿ ಅತ್ಯಾಧುನಿಕ ಮೀನು ಮಾರುಕಟ್ಟೆ ಆರಂಭಿಸಲು ತೀರ್ಮಾನಿಸಲಾಗಿದ್ದು, ಇದರೊಂದಿಗೆ ಮೀನು ಆಧಾರಿತ ಉಪಾಹಾರ ಗೃಹವನ್ನು ಆರಂಭಿಸುವ ಯೋಜನೆಯನ್ನೂ ರೂಪಿಸಲಾಗಿದೆ. ಈ ಯೋಜನೆಯಿಂದ ಮೀನುಗಾರರಿಗೆ ತಮ್ಮ ಉತ್ಪನ್ನಗಳಿಗೆ ಉತ್ತಮ ಮಾರುಕಟ್ಟೆ ದೊರೆಯುವುದರ ಜೊತೆಗೆ ಗ್ರಾಹಕರಿಗೂ ಸ್ವಚ್ಛ ಹಾಗೂ ಗುಣಮಟ್ಟದ ಸೇವೆ ಒದಗಿಸಲು ಸಾಧ್ಯವಾಗಲಿದೆ ಎಂದು ತಿಳಿಸಿದರು.

ಮಳೆ ಕೊರತೆಯಿಂದಾಗಿ ಕೆರೆ, ಕೊಳಗಳಲ್ಲಿ ನೀರಿನ ಮಟ್ಟ ಕುಸಿದಿದ್ದು, ಮೀನುಗಾರರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಈ ಸಮಸ್ಯೆಯನ್ನು ರಾಜ್ಯ ಸರ್ಕಾರದ ಗಮನಕ್ಕೆ ತಂದು ಮೀನುಗಾರರ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಮನವಿ ಮಾಡಲಾಗುವುದು ಎಂದು ಹೇಳಿದರು.

ಕೈಗಾರಿಕೆಗಳಿಂದ ಹೊರಬರುವ ರಾಸಾಯನಿಕ ಮಿಶ್ರಿತ ತ್ಯಾಜ್ಯ ನೀರು ಕೆರೆಗಳಿಗೆ ಸೇರುತ್ತಿರುವುದರಿಂದ ನೀರು ಕಲುಷಿತವಾಗಿ ಮೀನುಗಳು ಸಾವನ್ನಪ್ಪುತ್ತಿರುವ ಕುರಿತು ದೂರುಗಳು ಬಂದಿವೆ. ಈ ಸಂಬಂಧ ಸಂಬಂಧಪಟ್ಟ ಅಧಿಕಾರಿಗಳಿಂದ ವರದಿ ಪಡೆದು ಪರಿಶೀಲನೆ ನಡೆಸಲಾಗುವುದು. ನಿಯಮ ಉಲ್ಲಂಘನೆ ಮಾಡಿರುವವರು ಕಂಡುಬಂದರೆ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಘಾಟಿ ದೇವಾಲಯ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಆರ್.ವಿ. ಮಹೇಶ್ ಕುಮಾರ್ ಮಾತನಾಡಿ, ಮೀನುಗಾರರ ಸಮಸ್ಯೆಗಳ ಪರಿಹಾರಕ್ಕಾಗಿ ಮಂಜುನಾಥ್ ಸುಣಗಾರ್ ಅವರು ನಿರಂತರವಾಗಿ ಶ್ರಮಿಸುತ್ತಿದ್ದು, ಸರ್ಕಾರದ ವಿವಿಧ ಯೋಜನೆಗಳು ಮತ್ತು ಸೌಲಭ್ಯಗಳನ್ನು ಮೀನುಗಾರರಿಗೆ ತಲುಪಿಸುವ ಕಾರ್ಯದಲ್ಲಿ ತೊಡಗಿದ್ದಾರೆ. ಅವರ ಸೇವೆಯನ್ನು ಪರಿಗಣಿಸಿ ಸರ್ಕಾರ ಅವರನ್ನು ವಿಧಾನ ಪರಿಷತ್ ಸದಸ್ಯರನ್ನಾಗಿ ನೇಮಕ ಮಾಡಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ನಗರಸಭಾ ಸದಸ್ಯ ಕಾಂತರಾಜ್, ಮೀನುಗಾರರ ಸಂಘದ ಮುಖಂಡರು ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಪ್ರಕರಣ ದಾಖಲಿಸಲು ಆಗ್ರಹ

ಗುಡಿಬಂಡೆ

ಚಿಕ್ಕಬಳ್ಳಾಪುರದಲ್ಲಿ ಇತ್ತೀಚೆಗೆ ನಡೆದ ನಾಡಪ್ರಭು ಕೆಂಪೇಗೌಡ ಜಯಂತಿ ಕಾರ್ಯಕ್ರಮದ ವೇಳೆ ನಡೆದ ಘಟನೆಗೆ ಸಂಬಂಧಿಸಿದಂತೆ ಪ್ರಚೋದನೆ ನೀಡಿರುವ ಆರೋಪದ ಮೇಲೆ ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಪ್ರಕರಣ ದಾಖಲಿಸಬೇಕು. ಇಲ್ಲದಿದ್ದರೆ ಒಕ್ಕಲಿಗರ ಸಂಘದ ವತಿಯಿಂದ ಜಿಲ್ಲೆಯಾದ್ಯಂತ ಉಗ್ರ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ತಾಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಮಂಜುನಾಥರೆಡ್ಡಿ ಎಚ್ಚರಿಕೆ ನೀಡಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಒಕ್ಕಲಿಗರ ಸಂಘದ ವತಿಯಿಂದ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜೂನ್ 27ರಂದು ನಡೆದ ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ ಸಮುದಾಯದ ಮುಖಂಡರನ್ನು ಒಳಗೆ ಬಿಡದಂತೆ ಪೊಲೀಸರಿಗೆ ಸೂಚನೆ ನೀಡಲಾಗಿತ್ತು ಎಂದು ಆರೋಪಿಸಿದರು. ಬಳಿಕ ಸಂಸದ ಡಾ. ಕೆ. ಸುಧಾಕರ್ ಅವರ ಮಧ್ಯಸ್ಥಿಕೆಯಿಂದ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಯಿತು ಎಂದು ಹೇಳಿದರು.

ಈ ವಿಚಾರದ ಬಗ್ಗೆ ಪ್ರಶ್ನಿಸಲು ಹೋದ ಸಮುದಾಯದ ಯುವಕರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಶಾಸಕರ ಮೇಲೆ ಚಪ್ಪಲಿ ಎಸೆದಿರುವುದು ಖಂಡನೀಯವಾದರೂ, ಆಕ್ರೋಶಕ್ಕೆ ಕಾರಣವಾದ ಪ್ರಚೋದನೆಯ ಆರೋಪದ ಬಗ್ಗೆ ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಎನ್‌ಡಿಎ ಬೆಂಬಲಿತ ಯುವಕರನ್ನು ಬಂಧಿಸಿರುವ ರೀತಿಯಲ್ಲೇ ಶಾಸಕ ಪ್ರದೀಪ್ ಈಶ್ವರ್ ವಿರುದ್ಧವೂ ಕಾನೂನು ಕ್ರಮ ಜರುಗಿಸಿ ಬಂಧಿಸಬೇಕು. ಇಲ್ಲವಾದರೆ ಒಕ್ಕಲಿಗರ ಸಂಘದ ನೇತೃತ್ವದಲ್ಲಿ ಜಿಲ್ಲೆಯಾದ್ಯಂತ ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ವಿರುದ್ಧ ನಿರಾಧಾರ ಆರೋಪಗಳನ್ನು ಮಾಡಿರುವುದರಿಂದಲೇ ಅವರ ಬೆಂಬಲಿಗರು ಪ್ರತಿಭಟನೆ ನಡೆಸಿದ್ದಾರೆ. ಸುಳ್ಳು ಆರೋಪಗಳನ್ನು ಮಾಡದೆ ರಾಜಕೀಯ ಪ್ರಬುದ್ಧತೆ ಪ್ರದರ್ಶಿಸಬೇಕು ಎಂದು ಅವರು ಹೇಳಿದರು.

ಬಳಿಕ ಮಾತನಾಡಿದ ಸಮುದಾಯದ ಮುಖಂಡ ಮಧು, ಶಾಸಕ ಪ್ರದೀಪ್ ಈಶ್ವರ್ ಅವರಿಗೆ ರಾಜಕೀಯ ಪ್ರಬುದ್ಧತೆಯ ಕೊರತೆ ಇದೆ ಎಂದು ಆರೋಪಿಸಿದರು. ಈ ಹಿಂದೆ ವಾಲ್ಮೀಕಿ, ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಕೈವಾರ ತಾತಯ್ಯ ಜಯಂತಿ ಸೇರಿದಂತೆ ಹಲವು ಕಾರ್ಯಕ್ರಮಗಳಿಗೆ ಗೈರಾಗಿದ್ದರು. ಸ್ವಾತಂತ್ರ್ಯ ದಿನಾಚರಣೆಯಲ್ಲೂ ಭಾಗವಹಿಸಿರಲಿಲ್ಲ ಎಂದು ಟೀಕಿಸಿದರು.=

ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ ನಡೆದ ಗಲಾಟೆ ಪೂರ್ವನಿಯೋಜಿತವಾಗಿದ್ದು, ಪಕ್ಷದ ವರಿಷ್ಠರ ಗಮನ ಸೆಳೆಯುವ ಉದ್ದೇಶದಿಂದ ಈ ಘಟನೆ ನಡೆದಿರಬಹುದು ಎಂದು ಆರೋಪಿಸಿದರು. ಶಾಸಕ ಪ್ರದೀಪ್ ಈಶ್ವರ್ ತಮ್ಮ ಆಸ್ತಿ ಹಾಗೂ ತರಬೇತಿ ಕೇಂದ್ರಗಳ ಆದಾಯದ ಬಗ್ಗೆ ಸಾರ್ವಜನಿಕರಿಗೆ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಒಕ್ಕಲಿಗರ ಸಂಘದ ವೇಣುಗೋಪಾಲ್, ಹೆಚ್.ಎನ್. ಮಂಜುನಾಥರೆಡ್ಡಿ, ಮುರಳಿ, ಮಾಚಹಳ್ಳಿ ಶಿವಣ್ಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# 'ಸಾಲುಮರದ ತಿಮ್ಮಕ್ಕನ ತ್ಯಾಗದ ಹಾದಿ ಪರಿಸರ ಪ್ರೇಮಕ್ಕೆ ಸ್ಫೂರ್ತಿ'

ವಿಜಯಪುರ

ಒಂದು ಗಿಡ ನೆಡುವುದು ಪ್ರಕೃತಿಗೆ ನಾವು ಸಲ್ಲಿಸುವ ಅತ್ಯುತ್ತಮ ಗೌರವವಾಗಿದೆ. ಪ್ರತಿಯೊಬ್ಬರೂ ಪರಿಸರ ಸಂರಕ್ಷಣೆಯನ್ನು ಜೀವನದ ಭಾಗವನ್ನಾಗಿಸಿಕೊಳ್ಳಬೇಕು ಎಂದು ಪಟ್ಟಣದ ಶ್ರೀ ಬಸವಕಲ್ಯಾಣ ಮಠದ ಕಿರಿಯ ಸ್ವಾಮೀಜಿ ಸದಾಶಿವ ಸ್ವಾಮೀಜಿ ಹೇಳಿದರು.



ಮೇಲೂರು ರಸ್ತೆಯ ಬಸವಕಲ್ಯಾಣ ಮಠದ ಆವರಣದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಸರ್ವೋದಯ ಮಂಡಳಿ ವತಿಯಿಂದ ಆಯೋಜಿಸಿದ್ದ ವೃಕ್ಷಮಾತೆ ನಾಡೋಜ ಪದ್ಮಶ್ರೀ ಡಾ. ಸಾಲುಮರದ ತಿಮ್ಮಕ್ಕ ಅವರ 115ನೇ ಜನ್ಮದಿನಾಚರಣೆ ಅಂಗವಾಗಿ ನಡೆದ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

"ಒಬ್ಬ ವಿದ್ಯಾರ್ಥಿ ಒಂದು ಗಿಡ" ಎಂಬ ಸಂಕಲ್ಪದೊಂದಿಗೆ ಪ್ರತಿಯೊಬ್ಬರೂ ಕನಿಷ್ಠ ಒಂದು ಗಿಡ ನೆಟ್ಟು ಸಾಲುಮರದ ತಿಮ್ಮಕ್ಕ ಅವರ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸಬೇಕು. ಪರಿಸರ ಉಳಿದರೆ ಮಾತ್ರ ಮುಂದಿನ ಪೀಳಿಗೆಗೆ ಉತ್ತಮ ಬದುಕು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲಾ ಸರ್ವೋದಯ ಮಂಡಳಿಯ ಅಧ್ಯಕ್ಷ ಡಾ. ವಿ. ಪ್ರಶಾಂತ್ ಮಾತನಾಡಿ, ಸಾಲುಮರದ ತಿಮ್ಮಕ್ಕ ಅವರು ತಮ್ಮ ಜೀವನವನ್ನೇ ಪರಿಸರ ಸಂರಕ್ಷಣೆಗೆ ಮುಡಿಪಾಗಿಟ್ಟಿದ್ದಾರೆ. ಮರಗಳನ್ನು ತಮ್ಮ ಮಕ್ಕಳಂತೆ ಪ್ರೀತಿಸಿ ಬೆಳೆಸಿದ ಅವರ ಹಸಿರು ಕ್ರಾಂತಿ ಇಂದಿನ ಯುವಜನತೆಗೆ ಸ್ಫೂರ್ತಿದಾಯಕವಾಗಿದೆ. ಅವರ ಸೇವೆ ಇತಿಹಾಸದಲ್ಲಿ ಶಾಶ್ವತವಾಗಿ ಉಳಿಯಲಿದೆ ಎಂದು ಹೇಳಿದರು.

ಜಿಲ್ಲಾ ಸರ್ವೋದಯ ಮಂಡಳಿಯ ಕಾರ್ಯದರ್ಶಿ ವಿ.ಎನ್. ಸೂರ್ಯಪ್ರಕಾಶ್ ಮಾತನಾಡಿ, ಪದ್ಮಶ್ರೀ ಡಾ. ಸಾಲುಮರದ ತಿಮ್ಮಕ್ಕ ಅವರ 115ನೇ ಜನ್ಮದಿನದ ಅಂಗವಾಗಿ ಸಾಲುಮರದ ತಿಮ್ಮಕ್ಕ ಇಂಟರ್‌ನ್ಯಾಷನಲ್ ಫೌಂಡೇಶನ್ ಅಧ್ಯಕ್ಷ ಬಳ್ಳೂರು ಉಮೇಶ್ ಅವರ ಮಾರ್ಗದರ್ಶನದಲ್ಲಿ ಪಟ್ಟಣದ ವಿವಿಧೆಡೆ 1,115 ವಿವಿಧ ಜಾತಿಯ ಸಸಿಗಳನ್ನು ನೆಡುವ ಹಾಗೂ ಸಸಿ ವಿತರಣಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ಸಾಯಿ ಜ್ಞಾನಗಂಗಾ ಪದವಿ ಕಾಲೇಜಿನ ಪ್ರಾಂಶುಪಾಲ ಎಸ್.ಎಸ್. ಪ್ರದೀಪ್, ಉಪನ್ಯಾಸಕರಾದ ಕೆ. ಅರ್ಚನ, ಮುಬಾರಕ್, ಹೆಚ್. ಎಂ. ಅಂಬಿಕಾ, ಎಂ. ಚೈತ್ರ, ಕೆ.ಎಂ. ನಾಗರಾಜ, ಡಿ.ಎನ್. ನಾಗೇಶ್, ಹೆಚ್.ಜಿ. ಹರೀಶ್, ಬಿ.ಎಸ್. ಶರತ್, ಎನ್‌ಎಸ್‌ಎಸ್ ಘಟಕದ ಸ್ವಯಂಸೇವಕರು ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಸರ್ವೋದಯ ಮಂಡಳಿಯ ಯುವ ಘಟಕದ ಪದಾಧಿಕಾರಿಗಳಾದ ಟಿ.ಎನ್. ಲೋಕೇಶ್, ಬಿ.ಎನ್. ಶ್ರೇಯಸ್, ಎನ್. ಪುನೀತ್, ಸ್ಪಂದನ, ಪಲ್ಲವಿ, ಭಾರತಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಚೀರಣಕುಪ್ಪೆ ಬಸವೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ

ಕನಕಪುರ

ತಾಲ್ಲೂಕಿನ ಚೀರಣಕುಪ್ಪೆ ಗ್ರಾಮದ ಪುರಾಣ ಪ್ರಸಿದ್ಧ ಬಸವೇಶ್ವರ ಹಾಗೂ ಮಾರಮ್ಮ ದೇವಸ್ಥಾನಕ್ಕೆ ಬೆಂಗಳೂರು ಗ್ರಾಮಾಂತರ ಲೋಕಸಭಾ ಸದಸ್ಯ ಡಾ. ಸಿ.ಎನ್. ಮಂಜುನಾಥ್ ಅವರ ಧರ್ಮಪತ್ನಿ ಅನುಸೂಯಮ್ಮ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು.



ಜೆಡಿಎಸ್ ಹಾಗೂ ಎನ್‌ಡಿಎ ಮೈತ್ರಿ ಪಕ್ಷದ ಕಾರ್ಯಕರ್ತರ ಇಷ್ಟಾರ್ಥ ಸಿದ್ಧಿಯಾದ ಹಿನ್ನೆಲೆಯಲ್ಲಿ ಬಸವೇಶ್ವರ ದೇವಸ್ಥಾನಕ್ಕೆ ಬಸವನ ಕರುವನ್ನು ಹರಕೆಯಾಗಿ ಅರ್ಪಿಸುವ ವಿಶೇಷ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಆಹ್ವಾನಿಸಿದ್ದ ಹಿನ್ನೆಲೆಯಲ್ಲಿ ಅವರು ದೇವಸ್ಥಾನಕ್ಕೆ ಭೇಟಿ ನೀಡಿದರು.

ಪೂಜೆ ಸಲ್ಲಿಸಿದ ಬಳಿಕ ಮಾತನಾಡಿದ ಅನುಸೂಯಮ್ಮ, ದೇವಾಲಯಗಳಿಗೆ ಹರಕೆಯಾಗಿ ಕರು ಅಥವಾ ಹಸುಗಳನ್ನು ಅರ್ಪಿಸುವುದು ಕರ್ನಾಟಕದ ಹಲವು ಭಾಗಗಳಲ್ಲಿ ನಡೆದುಕೊಂಡು ಬಂದಿರುವ ಸಂಪ್ರದಾಯವಾಗಿದೆ.

ಕಾರ್ಯಕರ್ತರು ಹಾಗೂ ಮುಖಂಡರ ಆಹ್ವಾನದ ಮೇರೆಗೆ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದ್ದು, ನಾಡಿನ ಜನತೆಗೆ ಸುಖ, ಶಾಂತಿ, ಸಮೃದ್ಧಿ ಹಾಗೂ ಒಳಿತನ್ನು ಕರುಣಿಸುವಂತೆ ದೇವರಲ್ಲಿ ಪ್ರಾರ್ಥನೆ ಸಲ್ಲಿಸಿದ್ದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ದಿಶಾ ಸಮಿತಿ ಸದಸ್ಯೆ ಶೋಭಾ ಶಿವಲಿಂಗೇಗೌಡ, ಪಕ್ಷದ ಮುಖಂಡ ಬಿ. ನಾಗರಾಜ್, ಜೆಡಿಎಸ್ ತಾಲೂಕು ಉಪಾಧ್ಯಕ್ಷ ಹೆಗ್ಗನೂರು ಶಿವಕುಮಾರ್, ರಮೇಶ್, ಜೆಡಿಎಸ್ ತಾಲೂಕು ಮಹಿಳಾ ಉಪಾಧ್ಯಕ್ಷೆ ಮಂಜುಳಾ, ಪ್ರಧಾನ ಕಾರ್ಯದರ್ಶಿ ಜಯಲಕ್ಷ್ಮಿ, ಮುಖಂಡರಾದ ಶಾಂತಮೇರಿ, ಅಂದಾನಿ, ಯಡಮಾರನಹಳ್ಳಿ ಶಿವಸಿದ್ದೇಗೌಡ, ಕಾಳೇಗೌಡ, ಯೂನಸ್, ಪ್ರಕಾಶ್, ಮನು ಸೇರಿದಂತೆ ಪಕ್ಷದ ಕಾರ್ಯಕರ್ತರು, ಗ್ರಾಮಸ್ಥರು ಹಾಗೂ ಭಕ್ತರು ಉಪಸ್ಥಿತರಿದ್ದರು.

# ಶಿಕ್ಷಕ ಎಸ್. ಮಂಜುನಾಥ್‌ರಿಗೆ ಆತ್ಮೀಯ ಬೀಳ್ಕೊಡುಗೆ



ಚಿಂತಾಮಣಿ

ತಾಲೂಕಿನ ಕಸಬಾ ಹೋಬಳಿಯ ದೊಡ್ಡಗಂಜೂರು ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಸಹಶಿಕ್ಷಕರಾಗಿ ಸೇವೆ ಸಲ್ಲಿಸಿ ಇತ್ತೀಚೆಗೆ ವಯೋನಿವೃತ್ತಿ ಹೊಂದಿದ ಎಸ್. ಮಂಜುನಾಥ್ ಅವರಿಗೆ ಶಾಲೆಯಲ್ಲಿ ಆಯೋಜಿಸಿದ್ದ ಸರಳ ಸಮಾರಂಭದಲ್ಲಿ ಎಸ್‌ಡಿಎಂಸಿ ವತಿಯಿಂದ ಸನ್ಮಾನಿಸಿ ಆತ್ಮೀಯ ಬೀಳ್ಕೊಡುಗೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಎ.ಸಿ. ನಾರಾಯಣಸ್ವಾಮಿ, ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದದ್ದು. ಅದನ್ನು ನಿಷ್ಠೆಯಿಂದ ನಿರ್ವಹಿಸಿದಾಗ ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗುತ್ತದೆ. ಹಲವು ವರ್ಷಗಳ ಕಾಲ ಪ್ರಾಮಾಣಿಕ ಸೇವೆ ಸಲ್ಲಿಸಿದ ಮಂಜುನಾಥ್ ಅವರ ನಿವೃತ್ತಿ ಜೀವನ ಆರೋಗ್ಯ, ನೆಮ್ಮದಿ ಹಾಗೂ ಸಂತೋಷದಿಂದ ಕೂಡಿರಲಿ ಎಂದು ಹಾರೈಸಿದರು.

ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷ ಎಸ್. ಅಂಜನಪ್ಪ ಮಾತನಾಡಿ, ಮಂಜುನಾಥ್ ಅವರು ಉತ್ತಮ ಬೋಧನೆಯ ಮೂಲಕ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಗಮನಾರ್ಹ ಕೊಡುಗೆ ನೀಡಿದ್ದಾರೆ. ಅವರ ಸೇವೆಯನ್ನು ಶಾಲೆ ಹಾಗೂ ಗ್ರಾಮಸ್ಥರು ಸದಾ ಸ್ಮರಿಸಲಿದ್ದಾರೆ ಎಂದು ಹೇಳಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಎಸ್. ಮಂಜುನಾಥ್, ತಮ್ಮ ಸೇವಾ ಅವಧಿಯಲ್ಲಿ ಪ್ರಾಮಾಣಿಕತೆ ಹಾಗೂ ಬದ್ಧತೆಯಿಂದ ಕರ್ತವ್ಯ ನಿರ್ವಹಿಸಿದ್ದೇನೆ. ಈ ಅವಧಿಯಲ್ಲಿ ಸಹಕಾರ ನೀಡಿದ ಶಿಕ್ಷಣ ಇಲಾಖೆ ಅಧಿಕಾರಿಗಳು, ಸಹೋದ್ಯೋಗಿಗಳು, ವಿದ್ಯಾರ್ಥಿಗಳು, ಪೋಷಕರು ಹಾಗೂ ಗ್ರಾಮಸ್ಥರಿಗೆ ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸುತ್ತೇನೆ ಎಂದು ಹೇಳಿದರು.

ಈ ವೇಳೆ ಹಲವು ವಿದ್ಯಾರ್ಥಿಗಳು ತಮ್ಮ ನೆಚ್ಚಿನ ಶಿಕ್ಷಕರಾದ ಮಂಜುನಾಥ್ ಅವರ ಬೋಧನಾ ಶೈಲಿ, ಮಾರ್ಗದರ್ಶನ ಹಾಗೂ ಶಿಸ್ತುಬದ್ಧ ಕಾರ್ಯವೈಖರಿಯನ್ನು ಸ್ಮರಿಸಿ ಅಭಿನಂದಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯ ಶಿಕ್ಷಕ ಎಂ. ನಾರಾಯಣ ರೆಡ್ಡಿ, ಡಯಟ್ ಉಪನ್ಯಾಸಕ ಸುಬ್ಬಾರೆಡ್ಡಿ, ತಾಲೂಕು ಕೃಷಿಕ ಸಮಾಜದ ಅಧ್ಯಕ್ಷ ಜೆ.ಸಿ. ಜಯರಾಮರೆಡ್ಡಿ, ಎಂಪಿಸಿಎಸ್ ನಿರ್ದೇಶಕ ವಿ. ಮುನಿರೆಡ್ಡಿ, ಮಾಜಿ ಕಾರ್ಯದರ್ಶಿ ಕೆ.ಆರ್. ನಾರಾಯಣಸ್ವಾಮಿ, ಹಿರಿಯ ಜ್ಯೋತಿಷಿ ನರಸಿಂಹಮೂರ್ತಿ, ನಿವೃತ್ತ ಶಿಕ್ಷಕ ಎನ್. ಮುನಿಸ್ವಾಮಿ, ಯುವ ಮುಖಂಡ ಎನ್. ಸುರೇಶ್, ವಿದ್ಯಾರ್ಥಿಗಳು, ಪೋಷಕರು ಹಾಗೂ ಬೋಧಕ ಸಿಬ್ಬಂದಿ ಉಪಸ್ಥಿತರಿದ್ದರು.

# 'ಸಮಾಜದ ಎರಡು ಕಣ್ಣುಗಳಂತೆ ಶಿಕ್ಷಣ ಮತ್ತು ಪತ್ರಿಕಾರಂಗ ಕಾರ್ಯನಿರ್ವಹಿಸುತ್ತಿವೆ'

ಕುಣಿಗಲ್

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಶಿಕ್ಷಣ ಮತ್ತು ಪತ್ರಿಕಾರಂಗ ಸಮಾಜದ ಎರಡು ಕಣ್ಣುಗಳಂತೆ ಕಾರ್ಯನಿರ್ವಹಿಸುತ್ತಿದ್ದು, ಸತ್ಯನಿಷ್ಠೆ ಹಾಗೂ ಅಭಿವೃದ್ಧಿಯ ಪರವಾಗಿ ಸ್ವಾತಂತ್ರ್ಯ ಪೂರ್ವದಿಂದಲೂ ಮಹತ್ವದ ಪಾತ್ರ ವಹಿಸಿವೆ ಎಂದು ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಮಮತಾಮಣಿ ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಘಟಕವು ಪಟ್ಟಣದ ಕನ್ನಡ ಭವನದಲ್ಲಿ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಅವರು ಮಾತನಾಡಿದರು.

ಶಿಕ್ಷಣ ವ್ಯಕ್ತಿಯನ್ನು ರೂಪಿಸಿದರೆ, ಪತ್ರಿಕಾರಂಗ ಇಡೀ ಸಮಾಜವನ್ನು ರೂಪಿಸುವ ಶಕ್ತಿ ಹೊಂದಿದೆ. ಕತ್ತಿಗಿಂತ ಲೇಖನಿ ಹೆಚ್ಚು ಪ್ರಭಾವಶಾಲಿಯಾಗಿದ್ದು, ಸಮಾಜದ ಅಭಿವೃದ್ಧಿ, ಆರೋಗ್ಯ, ಶಿಕ್ಷಣ, ನೀರಾವರಿ, ಆಡಳಿತದ ಲೋಪ ಸೇರಿದಂತೆ ಜನಸಾಮಾನ್ಯರ ಸಮಸ್ಯೆಗಳನ್ನು ಬೆಳಕಿಗೆ ತರುವ ಕೆಲಸವನ್ನು ಪತ್ರಿಕಾರಂಗ ನಿರಂತರವಾಗಿ ಮಾಡುತ್ತಿದೆ ಎಂದು ಹೇಳಿದರು.

ಮಳೆ, ಗಾಳಿ, ಚಳಿ ಎನ್ನದೆ ಸುದ್ದಿಗಳನ್ನು ಸಂಗ್ರಹಿಸಿ ಜನರಿಗೆ ತಲುಪಿಸುವ ಪತ್ರಕರ್ತರ ಸೇವೆ ಶ್ಲಾಘನೀಯ. ಪತ್ರಕರ್ತರ ಕುಟುಂಬಗಳಿಗೆ ಸರ್ಕಾರ ಹೆಚ್ಚಿನ ಸೌಲಭ್ಯಗಳನ್ನು ಕಲ್ಪಿಸಬೇಕು. ಮಹಾತ್ಮ ಗಾಂಧೀಜಿಯವರು ಪ್ರತಿಪಾದಿಸಿದ ಸತ್ಯನಿಷ್ಠೆ ಮತ್ತು ಪ್ರಾಮಾಣಿಕತೆಯ ಮೌಲ್ಯಗಳನ್ನು ಉಳಿಸಿಕೊಂಡು ಪತ್ರಕರ್ತರು ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸಬೇಕು ಎಂದು ಕರೆ ನೀಡಿದರು.

ಪೊಲೀಸ್ ಇನ್‌ಸ್ಪೆಕ್ಟರ್ ಮಾಧ್ಯನಾಯಕ್ ಮಾತನಾಡಿ, ಪ್ರಜಾಪ್ರಭುತ್ವದ ನಾಲ್ಕನೇ ಸ್ತಂಭವಾದ ಪತ್ರಿಕಾರಂಗ ತನ್ನದೇ ಆದ ಛಾಪನ್ನು ಮೂಡಿಸಿದೆ. ದೇಶ, ರಾಜ್ಯ ಹಾಗೂ ವಿಶ್ವದ ಬೆಳವಣಿಗೆಗಳನ್ನು ಜನರಿಗೆ ತಲುಪಿಸುವ ಜವಾಬ್ದಾರಿಯನ್ನು ಪತ್ರಕರ್ತರು ಸಮರ್ಥವಾಗಿ ನಿಭಾಯಿಸುತ್ತಿದ್ದಾರೆ. ತಂತ್ರಜ್ಞಾನದ ಯುಗದಲ್ಲಿ ಸುಳ್ಳು ಸುದ್ದಿಗಳ ಪ್ರಸಾರ ಹೆಚ್ಚಾಗುತ್ತಿರುವ ಸಂದರ್ಭದಲ್ಲಿ ನೈಜ ಹಾಗೂ ಸತ್ಯಾಧಾರಿತ ಸುದ್ದಿಗಳನ್ನು ಜನರಿಗೆ ತಲುಪಿಸುವ ಜವಾಬ್ದಾರಿ ಪತ್ರಕರ್ತರ ಮೇಲಿದೆ ಎಂದು ಹೇಳಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಯೋಗೇಶ್ ಮಾತನಾಡಿ, ಪತ್ರಕರ್ತರ ಮೂಲಭೂತ ಸೌಲಭ್ಯಗಳ ಜೊತೆಗೆ ಅವರ ಮಕ್ಕಳ ಉನ್ನತ ಶಿಕ್ಷಣಕ್ಕೂ ಸರ್ಕಾರ ಹೆಚ್ಚಿನ ಆದ್ಯತೆ ನೀಡಬೇಕು. ಪತ್ರಕರ್ತರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ದೇಶದ ಆದರ್ಶ ಪ್ರಜೆಗಳನ್ನಾಗಿ ರೂಪಿಸಬೇಕು ಎಂದು ಹೇಳಿದರು.

ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬೀಚನಹಳ್ಳಿ ಶ್ರೀನಿವಾಸ್ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಘುರಾಮ್, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ರಮೇಶ್, ಜಿಲ್ಲಾ ನಿರ್ದೇಶಕ ಎಚ್.ಎಂ. ಅಶೋಕ್, ರಾಜ್ಯ ಸಮಿತಿಯ ಮಾಜಿ ಸದಸ್ಯ ಸಿದ್ದಲಿಂಗಸ್ವಾಮಿ, ಜಯಣ್ಣ ಬೆಳಗೆರೆ, ಸುರೇಶ್ ವಾತ್ಸವ, ಪುರುಷೋತ್ತಮ್, ಕಸಾಪ ಮಾಜಿ ಅಧ್ಯಕ್ಷ ದಿನೇಶ್ ಕುಮಾರ್, ಉಪಾಧ್ಯಕ್ಷ ಎಂ.ಡಿ. ಮೋಹನ್, ಪ್ರಧಾನ ಕಾರ್ಯದರ್ಶಿ ಎ.ಎಂ. ಶರೀಫುಲ್ಲಾ, ರಾಮಚಂದ್ರಯ್ಯ, ಕೆ.ಆರ್. ರಂಗನಾಥ್, ಕಾರ್ಯದರ್ಶಿ ಆನಂದ್ ಸಿಂಗ್, ಖಜಾಂಚಿ ರೇಣುಕಾ ಪ್ರಸಾದ್, ಕೆ.ಎ. ರವೀಂದ್ರಕುಮಾರ್, ಶಂಕರ್, ಗೋಪಾಲ, ನಿವೃತ್ತ ಶಿಕ್ಷಕ ಜೀವನದರ್ ಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಪತ್ರಕರ್ತರ ಪ್ರತಿಭಾವಂತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

# ಶಾಸಕ ಪ್ರದೀಪ್ ಈಶ್ವರ್ ವರ್ತನೆಗೆ ಎನ್‌ಡಿಎ ಕಾರ್ಯಕರ್ತರ ಆಕ್ಷೇಪ; ಪೊಲೀಸ್ ಕ್ರಮದ ಬಗ್ಗೆಯೂ ಅಸಮಾಧಾನ

ಚಿಕ್ಕಬಳ್ಳಾಪುರ

ಕನ್ನಡ ಭವನದಲ್ಲಿ ನಡೆದ ಕೆಂಪೇಗೌಡ ಜಯಂತಿ ಕಾರ್ಯಕ್ರಮದ ವೇಳೆ ಉಂಟಾದ ಗದ್ದಲದ ಘಟನೆ ಜಿಲ್ಲೆಯ ರಾಜಕೀಯದಲ್ಲಿ ಇನ್ನೂ ಚರ್ಚೆಗೆ ಗ್ರಾಸವಾಗಿದೆ. ಕಾರ್ಯಕ್ರಮದ ವೇಳೆ ಶಾಸಕ ಪ್ರದೀಪ್ ಈಶ್ವರ್ ಹಾಗೂ ಎನ್‌ಡಿಎ ಕಾರ್ಯಕರ್ತರ ನಡುವೆ ಉಂಟಾದ ವಾಗ್ವಾದ, ಘೋಷಣೆಗಳು ಮತ್ತು ನಂತರದ ಪೊಲೀಸ್ ಕ್ರಮಗಳ ಕುರಿತು ವಿವಿಧ ಸಂಘಟನೆಗಳ ಮುಖಂಡರು, ಸಾರ್ವಜನಿಕರು ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಚರ್ಚೆ ನಡೆಯುತ್ತಿದೆ.

ಕಾರ್ಯಕ್ರಮದ ವೇಳೆ ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ಕುರಿತು ಶಾಸಕ ಪ್ರದೀಪ್ ಈಶ್ವರ್ ನೀಡಿದ್ದ ಹೇಳಿಕೆಗೆ ಎನ್‌ಡಿಎ ಕಾರ್ಯಕರ್ತರು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದರು. ಶಾಸಕರು ಕ್ಷಮೆ ಕೇಳಬೇಕು ಎಂದು ಒತ್ತಾಯಿಸಿ ಕಾರ್ಯಕರ್ತರು ಘೋಷಣೆ ಕೂಗಿದ ಪರಿಣಾಮ ಸ್ಥಳದಲ್ಲಿ ಉದ್ವಿಗ್ನ



ವಾತಾವರಣ ನಿರ್ಮಾಣವಾಗಿತ್ತು. ಬಳಿಕ ಪೊಲೀಸರು ಮಧ್ಯಪ್ರವೇಶಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದಿದ್ದರು.

ಕಾರ್ಯಕ್ರಮದ ವೇಳೆ ಶಾಸಕ ಪ್ರದೀಪ್

ಮತ್ತೊಂದೆಡೆ, ಕಾರ್ಯಕ್ರಮದ ಬಳಿಕವೂ ಶಾಸಕ ಪ್ರದೀಪ್ ಈಶ್ವರ್ ಅವರು ಕುಮಾರಸ್ವಾಮಿ ವಿರುದ್ಧ ತಮ್ಮ ಆರೋಪಗಳನ್ನು ಪುನರುಚ್ಚರಿಸಿದ್ದು, ಇದಕ್ಕೆ ಎನ್‌ಡಿಎ ಕಾರ್ಯಕರ್ತರು ಆಕ್ಷೇಪ ವ್ಯಕ್ತಪಡಿಸುತ್ತಿದ್ದಾರೆ. ಶಿಡ್ಲಘಟ್ಟ ಶಾಸಕ ರವಿಕುಮಾರ್ ಕುರಿತು ಶಾಸಕ ನೀಡಿದ ಹೇಳಿಕೆಗಳ ಬಗ್ಗೆಯೂ ರಾಜಕೀಯ ವಲಯದಲ್ಲಿ ಚರ್ಚೆ ನಡೆಯುತ್ತಿದೆ.

ಈಶ್ವರ್ ತೋರಿದ ವರ್ತನೆ ಸಾರ್ವಜನಿಕರನ್ನು ಮತ್ತಷ್ಟು ಉದ್ರೇಕಗೊಳಿಸಿತು ಎಂದು ಕೆಲವು ಸಂಘಟನೆಗಳ ಮುಖಂಡರು ಆರೋಪಿಸಿದ್ದಾರೆ. ಸರ್ಕಾರಿ ಕಾರ್ಯಕ್ರಮದಲ್ಲಿ ಜನಪ್ರತಿನಿಧಿಗಳು ಸಂಯಮದಿಂದ ವರ್ತಿಸಬೇಕಾಗಿತ್ತು ಎಂಬ ಅಭಿಪ್ರಾಯವೂ ವ್ಯಕ್ತವಾಗಿದೆ.

ಮತ್ತೊಂದೆಡೆ, ಕಾರ್ಯಕ್ರಮದ ಬಳಿಕವೂ ಶಾಸಕ ಪ್ರದೀಪ್ ಈಶ್ವರ್ ಅವರು ಕುಮಾರಸ್ವಾಮಿ ವಿರುದ್ಧ ತಮ್ಮ ಆರೋಪಗಳನ್ನು ಪುನರುಚ್ಚರಿಸಿದ್ದು, ಇದಕ್ಕೆ ಎನ್‌ಡಿಎ ಕಾರ್ಯಕರ್ತರು ಆಕ್ಷೇಪ ವ್ಯಕ್ತಪಡಿಸುತ್ತಿದ್ದಾರೆ. ಶಿಡ್ಲಘಟ್ಟ ಶಾಸಕ ರವಿಕುಮಾರ್ ಕುರಿತು ಶಾಸಕ ನೀಡಿದ ಹೇಳಿಕೆಗಳ ಬಗ್ಗೆಯೂ ರಾಜಕೀಯ ವಲಯದಲ್ಲಿ ಚರ್ಚೆ ನಡೆಯುತ್ತಿದೆ.

ಘಟನೆಗೆ ಸಂಬಂಧಿಸಿದಂತೆ ಪೊಲೀಸರು ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಿಕೊಂಡಿದ್ದು, ಒಂಬತ್ತು ಮಂದಿಯನ್ನು ಬಂಧಿಸಿರುವುದಾಗಿ ತಿಳಿದುಬಂದಿದೆ. ನೂರಕ್ಕೂ ಅಧಿಕ ಮಂದಿಯ ವಿರುದ್ಧ ಪ್ರಕರಣ ದಾಖಲಿಸಿರುವ ಕ್ರಮಕ್ಕೂ ಕೆಲ ಸಂಘಟನೆಗಳು ಅಸಮಾಧಾನ ವ್ಯಕ್ತಪಡಿಸಿವೆ. ಗ್ರಾಮೀಣ ಪ್ರದೇಶಗಳಲ್ಲಿ ಪೊಲೀಸರು ನಡೆಸುತ್ತಿರುವ ಕ್ರಮದಿಂದ ಸಾರ್ವಜನಿಕರಲ್ಲಿ ಆತಂಕ ಉಂಟಾಗಿದೆ ಎಂದು ಕೆಲವು ಮುಖಂಡರು ಆರೋಪಿಸಿದ್ದಾರೆ.

ಇದೇ ವೇಳೆ, ಕಾರ್ಯಕ್ರಮಕ್ಕೂ ಮುನ್ನವೇ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗುವ ಸಾಧ್ಯತೆ ಇದ್ದರೂ, ಅಗತ್ಯ ಪ್ರಮಾಣದಲ್ಲಿ ಪೊಲೀಸ್ ಬಂದೋಬಸ್ತ್ ಕಲ್ಪಿಸಿರಲಿಲ್ಲ ಎಂಬ ಟೀಕೆಗಳು ಕೇಳಿಬರುತ್ತಿವೆ. ಮುನ್ನೆಚ್ಚರಿಕೆ ಕ್ರಮಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಕೈಗೊಂಡಿದ್ದರೆ ಗದ್ದಲವನ್ನು ತಪ್ಪಿಸಬಹುದಾಗಿತ್ತು ಎಂಬ ಅಭಿಪ್ರಾಯವನ್ನು ಕೆಲವು ಸಾರ್ವಜನಿಕರು ವ್ಯಕ್ತಪಡಿಸಿದ್ದಾರೆ.

ಚಿಕ್ಕಬಳ್ಳಾಪುರ ಜಿಲ್ಲೆ ಶಾಂತಿ ಮತ್ತು ಸಾಮರಸ್ಯಕ್ಕೆ ಹೆಸರುವಾಸಿಯಾಗಿದ್ದು, ಇಂತಹ ಘಟನೆಗಳು ಸಮಾಜದಲ್ಲಿ ಅನಗತ್ಯ ಉದ್ವಿಗ್ನತೆ ಉಂಟುಮಾಡಬಾರದು ಎಂಬ ಆಶಯವನ್ನು ವಿವಿಧ ಸಂಘಟನೆಗಳ ಮುಖಂಡರು ವ್ಯಕ್ತಪಡಿಸಿದ್ದಾರೆ. ಘಟನೆಗೆ ಸಂಬಂಧಿಸಿದ ರಾಜಕೀಯ ಚರ್ಚೆ ಮುಂದುವರಿದಿದ್ದು, ಸಂಬಂಧಪಟ್ಟ ಎಲ್ಲರೂ ಸಂಯಮದಿಂದ ವರ್ತಿಸಬೇಕು ಎಂಬ ಒತ್ತಾಯವೂ ಕೇಳಿಬರುತ್ತಿದೆ.

# ಎಸ್‌ಐಆರ್ ಕುರಿತು ಜಾಗೃತಿ ಮೂಡಿಸಲು ತಿಪಟೂರಿನಲ್ಲಿ ಕ್ಯಾಂಡಲ್ ಲೈಟ್ ಜಾಥಾ

ತಿಪಟೂರು

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ತಾಲೂಕು ಆಡಳಿತದ ವತಿಯಿಂದ ನಗರದ ನಗರಸಭೆ ವೃತ್ತದಲ್ಲಿ ಎಸ್‌ವಿಇಇಪಿ ಕಾರ್ಯಕ್ರಮದಡಿ ಕ್ಯಾಂಡಲ್ ಲೈಟ್ ಜಾಥಾವನ್ನು ಹಮ್ಮಿಕೊಳ್ಳಲಾಯಿತು.

ತುಮಕೂರು ಜಿಲ್ಲಾ ಪಂಚಾಯಿತಿಯ ಜಿಲ್ಲಾ ಸ್ವೀಪ್/ಎಸ್‌ಐಆರ್ ನೋಡಲ್ ಅಧಿಕಾರಿ ಹಾಗೂ ಉಪಕಾರ್ಯದರ್ಶಿ (ಆಡಳಿತ) ಅವರ ನಿರ್ದೇಶನದಂತೆ ಆಯೋಜಿಸಲಾದ ಈ ಜಾಥಾದಲ್ಲಿ ಶಾಲಾ ವಿದ್ಯಾರ್ಥಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಭಾಗವಹಿಸಿ ಮತದಾರರ ಪಟ್ಟಿಯ ಪರಿಷ್ಕರಣೆ ಮಹತ್ವದ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಿದರು.

ಜಾಥಾ ವೇಳೆ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ, ತಿದ್ದುಪಡಿ ಹಾಗೂ ವಿವರಗಳ ನವೀಕರಣ ಕುರಿತ ಸಂದೇಶಗಳನ್ನು ಸಾರಲಾಯಿತು. ಮತದಾರರ ಪಟ್ಟಿಯನ್ನು ನಿಖರ ಹಾಗೂ ದೋಷರಹಿತವಾಗಿಸಲು ಸಾರ್ವಜನಿಕರು ಸಹಕರಿಸಬೇಕು ಎಂಬ ಸಂದೇಶವನ್ನು ವಿದ್ಯಾರ್ಥಿಗಳು ಮತ್ತು ಅಧಿಕಾರಿಗಳು ಜನರಿಗೆ ತಲುಪಿಸಿದರು.

ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಮೋಹನ್ ಕುಮಾರ್, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸುದರ್ಶನ್, ನಗರಸಭೆ ಪೌರಾಯುಕ್ತ ವಿಶ್ವೇಶ್ವರ ಬದರಗಡೆ, ಕೃಷಿ ಇಲಾಖೆ ಅಧಿಕಾರಿ ಡಾ. ಪವನ್, ಹಿಂದುಳಿದ ವರ್ಗಗಳ ಇಲಾಖೆಯ ಜಲಜಾಕ್ಷಮ್ಮ, ಶಾಲಾ ವಿದ್ಯಾರ್ಥಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಚಿತ್ರ ಸುದ್ದಿ: ತಿಪಟೂರಿನ ನಗರಸಭೆ ವೃತ್ತದಲ್ಲಿ ಎಸ್‌ವಿಇಇಪಿ ಕಾರ್ಯಕ್ರಮದಡಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಜಾಗೃತಿ ಮೂಡಿಸಲು ಶಾಲಾ ವಿದ್ಯಾರ್ಥಿಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಕ್ಯಾಂಡಲ್ ಲೈಟ್ ಜಾಥಾ ನಡೆಸಿದರು.



ಸಂಸದ ಎಂ.ಮಲ್ಲೇಶ್ ಬಾಬು ಅವರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಮಾಲೂರಿನ ಜೆಡಿಎಸ್ ಮುಖಂಡ ಹೂಡಿ ವಿಜಯ್ ಕುಮಾರ್ ತಮ್ಮ ಬೆಂಬಲಿಗರೊಂದಿಗೆ ಆಗಮಿಸಿ ಶುಭ ಕೋರಿದರು. ಈ ಸಂದರ್ಭದಲ್ಲಿ ಜೆಡಿಎಸ್ ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ರಶ್ಮಿ ರಾಮೇಗೌಡ, ಹಿರಿಯ ಮುಖಂಡರಾದ ಪ್ರಭಾಕರ್, ಜೆಡಿಎಸ್ ಎಸ್ಸಿ ಘಟಕದ ಜಿಲ್ಲಾ ಉಪಾಧ್ಯಕ್ಷ ಯಲುವಗುಳಿ ನಾಗರಾಜ್, ಮುಖಂಡರಾದ ಬಿ.ಆರ್ ವೆಂಕಟೇಶ್, ಹನುಮಪ್ಪ, ಶ್ರೀನಾಥ್, ಶಿವಾರ ಬುಜ್ಜಿ, ನಾನಿ, ವೆಂಕಟೇಶ್, ಮುಂತಾದವರು ಇದ್ದರು

# ಸಾಧಕ ಅಧಿಕಾರಿ ಹಾಗೂ ಸಿಬ್ಬಂದಿಗೆ ಪ್ರಶಸ್ತಿ ಪ್ರದಾನ

ತುಮಕೂರು

ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿ ಪ್ರಗತಿ ಸಾಧಿಸಿದ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗವನ್ನು ನಗರದ ಕನ್ನಡ ಸಾಹಿತ್ಯ ಭವನದಲ್ಲಿ ಬುಧವಾರ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕರ್ನಾಟಕ ರಾಜ್ಯ ಕಂದಾಯ ಇಲಾಖಾ ನೌಕರರ ಸಂಘದ ಜಿಲ್ಲಾ ಶಾಖೆ, ಗ್ರಾಮ ಆಡಳಿತಾಧಿಕಾರಿಗಳ ಜಿಲ್ಲಾ ಸಂಘ ಹಾಗೂ ದ್ವಿತೀಯ ದರ್ಜೆ ಸಹಾಯಕರ ನೌಕರರ ಜಿಲ್ಲಾ ಸಂಘದ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ಕಂದಾಯ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಕಂದಾಯ ಇಲಾಖೆಯು ಜಿಲ್ಲೆಯ ಜನತೆಗೆ ತ್ವರಿತ, ಪಾರದರ್ಶಕ ಹಾಗೂ ಜನಸ್ನೇಹಿ ಸೇವೆಗಳನ್ನು ಒದಗಿಸುವ ಮೂಲಕ ಜಿಲ್ಲೆಯ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರವಹಿಸುತ್ತಿದೆ.

ಜಿಲ್ಲೆಯ 1.56 ಲಕ್ಷಕ್ಕೂ ಅಧಿಕ ರೈತರಿಗೆ ಪೌತಿ ಖಾತೆ ಒದಗಿಸುವ ಮೂಲಕ ಮಹತ್ವದ ಸಾಧನೆ ಮಾಡಲಾಗಿದ್ದು, ಈ ಅಭಿಯಾನವು ಗಿನ್ನೆಸ್ ವಿಶ್ವ ದಾಖಲೆ ನಿರ್ಮಿಸುವಲ್ಲಿ ಪ್ರಮುಖ ಪಾತ್ರ ವಹಿಸಿರುವುದು ಜಿಲ್ಲೆಯ ಹೆಮ್ಮೆಯ ವಿಷಯವಾಗಿದೆ ಎಂದರು.

ಇದಲ್ಲದೆ, 16 ವರ್ಷಗಳಿಂದ ಬಾಕಿ ಉಳಿದಿದ್ದ 202 ಅಲೆಮಾರಿ ಕುಟುಂಬಗಳಿಗೆ ಹಕ್ಕುಪತ್ರಗಳನ್ನು ವಿತರಿಸುವ ಮೂಲಕ ಅವರ ಬಹುಕಾಲದ ಕನಸನ್ನು ನನಸಾಗಿಸಲಾಗಿದೆ. ಈ ಮೂಲಕ ಹಲವು ಕುಟುಂಬಗಳಿಗೆ ಭೂಮಿಯ ಕಾನೂನುಬದ್ಧ ಹಕ್ಕು



ದೊರೆತು, ಸಾಮಾಜಿಕ ಹಾಗೂ ಆರ್ಥಿಕ ಭದ್ರತೆ ಒದಗಿಸಲಾಗಿದೆ ಎಂದು ತಿಳಿಸಿದರು.

ಭೂ ದಾಖಲೆಗಳ ನಿರ್ವಹಣೆ, ಪೌತಿ ಖಾತೆ ಅಭಿಯಾನ, ಹಕ್ಕುಪತ್ರ ವಿತರಣೆ, ಪ್ರಕೃತಿ ವಿಕೋಪಗಳ ಸಂದರ್ಭದಲ್ಲಿ ತುರ್ತು ಸ್ಪಂದನೆ, ಸಾರ್ವಜನಿಕರ ಅರ್ಜಿಗಳ ತ್ವರಿತ ವಿಲೇವಾರಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಕಂದಾಯ ಇಲಾಖೆಯು ಜನಪರ ಸೇವೆ ಸಲ್ಲಿಸುತ್ತಿದ್ದು, ಸಾರ್ವಜನಿಕರ ವಿಶ್ವಾಸ ಗಳಿಸುವಲ್ಲಿ ಯಶಸ್ವಿಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಜನಸ್ನೇಹಿ ಆಡಳಿತ, ಪಾರದರ್ಶಕತೆ ಹಾಗೂ ಸಮಯಬದ್ಧ ಸೇವೆ ನೀಡುವ ಬದ್ಧತೆಯನ್ನು ಪುನರುಚ್ಚರಿಸಿದರು. ಮುಂದಿನ ದಿನಗಳಲ್ಲಿಯೂ ಸಾರ್ವಜನಿಕರಿಗೆ ಇನ್ನಷ್ಟು ಗುಣಮಟ್ಟದ ಸೇವೆಗಳನ್ನು ಒದಗಿಸಲು ಸಮರ್ಪಣಾ ಮನೋಭಾವದಿಂದ ಕಾರ್ಯನಿರ್ವಹಿಸುವ ಸಂಕಲ್ಪ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಕಂದಾಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ, ಗ್ರಾಮ ಆಡಳಿತಾಧಿಕಾರಿಗಳು, ವಿವಿಧ ಸಂಘಗಳ ಪದಾಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು. ಕಂದಾಯ ಇಲಾಖೆಯ ಸಾಧನೆಗೆ ಸೇವೆ ಸಲ್ಲಿಸಿದ ನೌಕರರ ಅಮೂಲ್ಯ ಕೊಡುಗೆಯನ್ನು ಈ ಸಂದರ್ಭದಲ್ಲಿ ಸ್ಮರಿಸಲಾಯಿತು.



ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಅವರು ದೆಹಲಿಯಲ್ಲಿ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್ ಮತ್ತು ರೈಲ್ವೆ ಹಾಗೂ ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅವರನ್ನು ಭೇಟಿ ಮಾಡಿ ವಿವಿಧ ಗ್ರಾಮೀಣ ಕುಡಿಯುವ ನೀರಿನ ಯೋಜನೆಗಳ ಬಗ್ಗೆ ಚರ್ಚಿಸಿದರು.

### ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಕ್ರಮಕ್ಕೆ

# ಜೆಡಿಎಸ್ ಆಗ್ರಹ

ಬೆಂಗಳೂರು

ನಾಡಪ್ರಭು ಕೆಂಪೇಗೌಡ ಜಯಂತಿ ಆಚರಣೆ ವೇಳೆ ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್ ಅಸಭ್ಯ ವರ್ತನೆ ತೋರಿದ್ದು, ಸಾರ್ವಜನಿಕರನ್ನು ಪ್ರಚೋದಿಸುವ ರೀತಿಯಲ್ಲಿ ನಡೆದುಕೊಂಡಿದ್ದಾರೆ ಎಂದು ಆರೋಪಿಸಿರುವ ಜೆಡಿಎಸ್, ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ರಾಜ್ಯ ಪೊಲೀಸ್ ಮಹಾನಿರ್ದೇಶಕರಿಗೆ (ಡಿಜಿಪಿ) ದೂರು ಸಲ್ಲಿಸಲು ನಿರ್ಧರಿಸಿದೆ.

ಜೆಡಿಎಸ್ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪಕ್ಷದ ಮುಖ್ಯ ವಕ್ತಾರ ಹಾಗೂ ಮಾಜಿ ಶಾಸಕ ಕೆ.ಟಿ. ಶ್ರೀಕಂಠೇಗೌಡ, ಶಾಸಕರ ವರ್ತನೆ ಖಂಡನೀಯವಾಗಿದ್ದು, ಇದೇ ರೀತಿಯ ನಡೆ ಮುಂದುವರಿದರೆ ಪಕ್ಷದ ವತಿಯಿಂದ ರಾಜ್ಯಾದ್ಯಂತ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಬಿಡದಿ ಟೌನ್‌ಶಿಪ್ ಯೋಜನೆ ವಿರುದ್ಧ ರೈತರು ನಡೆಸುತ್ತಿರುವ ಹೋರಾಟಕ್ಕೆ ಜೆಡಿಎಸ್ ಬೆಂಬಲ ನೀಡಿರುವುದನ್ನು ಮರೆಮಾಚಲು ಮತ್ತು ಸಾರ್ವಜನಿಕರ ಗಮನ ಬೇರೆಡೆ ಸೆಳೆಯಲು ಇಂತಹ ಬೆಳವಣಿಗೆಗಳು ನಡೆಯುತ್ತಿವೆ ಎಂದು ಅವರು ಆರೋಪಿಸಿದರು.

ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ ಶಾಸಕ ಪ್ರದೀಪ್ ಈಶ್ವರ್ ತೊಡೆ ತಟ್ಟಿ, ತೋಳೇರಿಸಿ ಸಾರ್ವಜನಿಕರನ್ನು ಪ್ರಚೋದಿಸುವ ರೀತಿಯಲ್ಲಿ ವರ್ತಿಸಿದ್ದಾರೆ. ಆದರೂ ಅವರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳದಿರುವುದು ಪ್ರಶ್ನಾರ್ಹವಾಗಿದೆ ಎಂದು ಹೇಳಿದರು.

ಕಾಂಗ್ರೆಸ್ ನಾಯಕರು ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ಶಾಸಕರಿಗೆ ಸೂಕ್ತ ಸಲಹೆ ನೀಡಬೇಕು ಹಾಗೂ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಕಾನೂನುಬಾಹಿರವಾಗಿ ಮೂರು ಸಿಎ ನಿವೇಶನಗಳನ್ನು ಪಡೆದಿರುವ ವಿಚಾರವನ್ನು ಜೆಡಿಎಸ್ ಪ್ರಶ್ನಿಸಿರುವುದರಿಂದ ಶಾಸಕರು ಪಕ್ಷದ ನಾಯಕರ ವಿರುದ್ಧ ಅವಹೇಳನಕಾರಿ ಹೇಳಿಕೆಗಳನ್ನು ನೀಡುತ್ತಿದ್ದಾರೆ ಎಂದು ಆರೋಪಿಸಿದರು.

ಜೆಡಿಎಸ್ ವಕ್ತಾರ ಎಸ್.ಪಿ. ಪ್ರದೀಪ್ ಕುಮಾರ್ ಮಾತನಾಡಿ, ಜನರನ್ನು ಪ್ರಚೋದಿಸುವ ಹಾಗೂ ಜಾತಿ ವೈಷಮ್ಯಕ್ಕೆ ಕಾರಣವಾಗುವ ಹೇಳಿಕೆಗಳನ್ನು ನೀಡಿದ ಆರೋಪದಡಿ ದೂರು ನೀಡಿದರೂ ಪ್ರಕರಣ ದಾಖಲಿಸದಿರುವುದು ಅಸಮಾಧಾನಕರ ಸಂಗತಿಯಾಗಿದೆ ಎಂದು ಹೇಳಿದರು.

# ಎಸ್‌ಐಆರ್ ಪ್ರಕ್ರಿಯೆ ಮುಂದೂಡಲು ರಮೇಶ್ ಬಾಬು ಆಗ್ರಹ

ಬೆಂಗಳೂರು

ಮುಖ್ಯ ಚುನಾವಣಾಧಿಕಾರಿಗಳ ವೆಬ್‌ಸೈಟ್‌ನಲ್ಲಿ ಪ್ರಕಟವಾಗಿರುವ ಬೂತ್ ಮಟ್ಟದ ಅಧಿಕಾರಿಗಳು (ಃಐಔ) ಹಾಗೂ ಬಿಎಲ್‌ಒ ಮೇಲ್ವಿಚಾರಕರ ಮಾಹಿತಿಯಲ್ಲಿ ಕಂಡುಬಂದಿರುವ ವ್ಯತ್ಯಾಸಗಳನ್ನು ತಕ್ಷಣ ಸರಿಪಡಿಸಬೇಕು. ನಿಖರ ಮತ್ತು ದೃಢೀಕೃತ ಮಾಹಿತಿ ಪ್ರಕಟವಾಗುವವರೆಗೆ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಖಖಖ) ಪ್ರಕ್ರಿಯೆಯನ್ನು ಮುಂದೂಡಬೇಕು ಎಂದು ಕೆಪಿಸಿಸಿ ಮಾಧ್ಯಮ ಸಂವಹನ ವಿಭಾಗದ ಅಧ್ಯಕ್ಷ ಹಾಗೂ ವಿಧಾನಪರಿಷತ್ ಸದಸ್ಯ ರಮೇಶ್ ಬಾಬು ಆಗ್ರಹಿಸಿದ್ದಾರೆ.

ಈ ಸಂಬಂಧ ಕರ್ನಾಟಕದ ಮುಖ್ಯ ಚುನಾವಣಾಧಿಕಾರಿಗಳಿಗೆ ಪತ್ರ ಬರೆದಿರುವ ಅವರು, ಚುನಾವಣಾ ಆಯೋಗದ ಅಧಿಕೃತ ವೆಬ್‌ಸೈಟ್‌ನಲ್ಲಿ ಎಸ್‌ಐಆರ್ ಪ್ರಕ್ರಿಯೆಗೆ ಸಂಬಂಧಿಸಿದಂತೆ ಪ್ರಕಟಿಸಿರುವ ಮಾಹಿತಿಯಲ್ಲಿ ಗಂಭೀರ ವ್ಯತ್ಯಾಸಗಳು ಕಂಡುಬಂದಿವೆ ಎಂದು ತಿಳಿಸಿದ್ದಾರೆ.

ಮುಖ್ಯ ಚುನಾವಣಾಧಿಕಾರಿಗಳ ವೆಬ್‌ಸೈಟ್‌ನಲ್ಲಿ ಬಿಎಲ್‌ಒ ಮತ್ತು ಬಿಎಲ್‌ಒ ಮೇಲ್ವಿಚಾರಕರ ವಿವರಗಳನ್ನು ಒಳಗೊಂಡ ಎರಡು ಪ್ರತ್ಯೇಕ ಪಟ್ಟಿಗಳು ಪ್ರಕಟವಾಗಿವೆ. ಈ ಪಟ್ಟಿಗಳಲ್ಲಿ ಹಲವು ಮತಗಟ್ಟೆಗಳು ಹಾಗೂ ವಿಧಾನಸಭಾ ಕ್ಷೇತ್ರಗಳಿಗೆ ಸಂಬಂಧಿಸಿದ ಅಧಿಕಾರಿಗಳ ಹೆಸರುಗಳು ಮತ್ತು ಮೊಬೈಲ್ ಸಂಖ್ಯೆಗಳು ಪರಸ್ಪರ ಹೊಂದಿಕೆಯಾಗುತ್ತಿಲ್ಲ ಎಂದು ಅವರು ದೂರಿದ್ದಾರೆ.



ವಿಶೇಷವಾಗಿ ಕೆಲವು ವಿಧಾನಸಭಾ ಕ್ಷೇತ್ರಗಳಲ್ಲಿ ಒಂದೇ ಮತಗಟ್ಟೆಗೆ ಸಂಬಂಧಿಸಿದಂತೆ ವಿಭಿನ್ನ ಹೆಸರುಗಳು ಹಾಗೂ ಬೇರೆಬೇರೆ ಸಂಪರ್ಕ ಸಂಖ್ಯೆಗಳು ನಮೂದಾಗಿರುವುದು ಗೊಂದಲಕ್ಕೆ ಕಾರಣವಾಗಿದೆ. ಇದರಿಂದ ಮತದಾರರು, ರಾಜಕೀಯ ಪಕ್ಷಗಳು, ಬೂತ್ ಮಟ್ಟದ ಏಜೆಂಟರು ಹಾಗೂ ಚುನಾವಣಾ ಪ್ರಕ್ರಿಯೆಗೆ ಸಂಬಂಧಿಸಿದ ಇತರರು ಸರಿಯಾದ ಅಧಿಕಾರಿಗಳನ್ನು ಸಂಪರ್ಕಿಸಲು ಕಷ್ಟವಾಗುತ್ತಿದೆ ಎಂದು ತಿಳಿಸಿದ್ದಾರೆ.

ಮತದಾರರ ಪಟ್ಟಿಯ ಪರಿಷ್ಕರಣೆ ಕಾನೂನುಬದ್ಧ ಹಾಗೂ ಮಹತ್ವದ ಪ್ರಕ್ರಿಯೆಯಾಗಿದ್ದು, ಚುನಾವಣಾ ಅಧಿಕಾರಿಗಳ ಹೆಸರು ಮತ್ತು ಸಂಪರ್ಕ ವಿವರಗಳಲ್ಲಿ ನಿಖರತೆ ಹಾಗೂ ಪಾರದರ್ಶಕತೆ ಇರಬೇಕು. ತಪ್ಪು ಅಥವಾ ಪರಸ್ಪರ ವಿರೋಧಾಭಾಸದ ಮಾಹಿತಿ ಸಾರ್ವಜನಿಕರ ವಿಶ್ವಾಸಕ್ಕೆ ಧಕ್ಕೆ ತರುವ ಸಾಧ್ಯತೆ ಇದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಈ ಹಿನ್ನೆಲೆಯಲ್ಲಿ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ಎರಡೂ ಪಟ್ಟಿಗಳಲ್ಲಿನ ವ್ಯತ್ಯಾಸಗಳನ್ನು ತಕ್ಷಣ ಪರಿಶೀಲಿಸಿ ಸರಿಪಡಿಸಬೇಕು. ಬಿಎಲ್‌ಒಗಳು ಮತ್ತು ಬಿಎಲ್‌ಒ ಮೇಲ್ವಿಚಾರಕರ ಸರಿಯಾದ ಹೆಸರು, ಹುದ್ದೆ, ಮತಗಟ್ಟೆ ವಿವರಗಳು ಹಾಗೂ ಮೊಬೈಲ್ ಸಂಖ್ಯೆಗಳಿರುವ ಏಕೀಕೃತ ಮತ್ತು ದೃಢೀಕೃತ ಪಟ್ಟಿಯನ್ನು ಪ್ರಕಟಿಸಬೇಕು ಎಂದು ಮನವಿ ಮಾಡಿದ್ದಾರೆ.

ತಪ್ಪು ಅಥವಾ ಹಳೆಯ ಮಾಹಿತಿಯನ್ನು ಒಳಗೊಂಡ ಪಟ್ಟಿಗಳನ್ನು ವೆಬ್‌ಸೈಟ್‌ನಿಂದ ತೆಗೆದುಹಾಕಬೇಕು. ಯಾವ ಪಟ್ಟಿಯು ಅಧಿಕೃತವಾಗಿದೆ ಎಂಬುದರ ಕುರಿತು ಸಾರ್ವಜನಿಕ ಪ್ರಕಟಣೆ ನೀಡಬೇಕು. ರಾಜ್ಯದ ಎಲ್ಲಾ ಜಿಲ್ಲೆಗಳ ಬಿಎಲ್‌ಒ ಹಾಗೂ ಮೇಲ್ವಿಚಾರಕರ ಮಾಹಿತಿಯನ್ನು ಮರುಪರಿಶೀಲಿಸಿದ ಬಳಿಕವೇ ಎಸ್‌ಐಆರ್ ಪ್ರಕ್ರಿಯೆ ಮುಂದುವರಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ನಿಖರ ಮಾಹಿತಿಯಿಲ್ಲದೆ ಎಸ್‌ಐಆರ್ ಪ್ರಕ್ರಿಯೆ ಮುಂದುವರಿಸುವುದರಿಂದ ಮತದಾರರ ಹಕ್ಕುಗಳಿಗೆ ಧಕ್ಕೆಯಾಗುವ ಸಾಧ್ಯತೆ ಇದ್ದು, ಸಾರ್ವಜನಿಕರಲ್ಲಿ ಚುನಾವಣಾ ಪ್ರಕ್ರಿಯೆಯ ಬಗ್ಗೆ ಅನುಮಾನ ಮೂಡಬಹುದು.

ಆದ್ದರಿಂದ ಈ ವಿಷಯವನ್ನು ತುರ್ತಾಗಿ ಪರಿಗಣಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ರಮೇಶ್ ಬಾಬು ಚುನಾವಣಾ ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

# ಶಾಲಾ ಕಾಲೇಜುಗಳಲ್ಲಿ ವಿವಿಧ ಸ್ಪರ್ಧೆಗಳು

ಕೋಲಾರ

ನಾಡಪ್ರಭು ಕೆಂಪೇಗೌಡ ಜಯಂತಿಯನ್ನು ರಾಜ್ಯಾದ್ಯಂತ ಅರ್ಥಪೂರ್ಣವಾಗಿ ಆಚರಿಸುವ ಸಂಬಂಧ ಕೋಲಾರ ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿ ತಾಲ್ಲೂಕು ಮಟ್ಟದ ಎಲ್ಲಾ ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ನಾಡಪ್ರಭು ಕೆಂಪೇಗೌಡ ರವರ ಕುರಿತು ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಲು ಸೂಚಿಸಲಾಗಿದೆ.

ನಾಡಪ್ರಭು ಕೆಂಪೇಗೌಡರ ಕುರಿತು ಶಾಲಾ ಕಾಲೇಜುಗಳಲ್ಲಿ ಸ್ಪರ್ಧೆಗಳನ್ನು ಏರ್ಪಡಿಸುವುದರ ಮೂಲಕ ನಾಡಪ್ರಭು ಕೆಂಪೇಗೌಡರ ಸಾಧನೆ ಕುರಿತು ಅರಿವು ಮೂಡಿಸುವುದು. ಶಾಲೆಗಳು, ಪದವಿ ಕಾಲೇಜು ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ನಾಡಪ್ರಭು ಕೆಂಪೇಗೌಡರ ಕುರಿತು ರಸ ಪ್ರಶ್ನೆ, ಪ್ರಬಂಧ ಸ್ಪರ್ಧೆ, ಆಶು ಭಾಷಣ, ಕವನ ವಾಚನ, ಗಾಯನ, ಚಿತ್ರಕಲೆ ಸ್ಪರ್ಧೆ ಇವುಗಳಲ್ಲಿ ಯಾವುದಾದರು ಎರಡು ಸ್ಪರ್ಧೆಗಳನ್ನು ಏರ್ಪಡಿಸುವುದು.

ಜಿಲ್ಲೆಯಲ್ಲಿ ಬರುವ ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ಕಾರ್ಯಕ್ರಮಗಳನ್ನು ಏರ್ಪಡಿಸಲು ಆದ್ಯತೆ ನೀಡುವುದು. ಸ್ಪರ್ಧೆಯಲ್ಲಿ ಎಲ್ಲಾ ಸಮುದಾಯದ ವಿದ್ಯಾರ್ಥಿಗಳು ಭಾಗವಹಿಸಲು ಮುಕ್ತವಾಗಿರುತ್ತದೆ ಹಾಗೂ ಸ್ಪರ್ಧೆಯಲ್ಲಿ ಕನಿಷ್ಠ 25 ವಿದ್ಯಾರ್ಥಿಗಳು ಭಾಗವಹಿಸತಕ್ಕದ್ದು. ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ನಾಡಪ್ರಭು ಕೆಂಪೇಗೌಡರ ಪುಸ್ತಕಗಳನ್ನು ಪ್ರಥಮ, ದ್ವಿತೀಯ, ತೃತೀಯ ಹಾಗೂ ಎರಡು ಸಮಾದಾನಕರ ಬಹುಮಾನವಾಗಿ ನೀಡಲಾಗುವುದು ಎಂದು ಕೋಲಾರ ಅಪರ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

## ನಾಗರೀಕ ಬಂದೂಕು ತರಬೇತಿ ಶಿಬಿರ

ಕೋಲಾರ

ಕೋಲಾರ ಪೊಲೀಸ್ ಅಧೀಕ್ಷಕರು ರವರ ಅನುಮತಿಯೊಂದಿಗೆ ಕೋಲಾರ ಜಿಲ್ಲಾ ಸಶಸ್ತ್ರ ಮೀಸಲು ಪಡೆ ವತಿಯಿಂದ ನಾಗರೀಕ ಬಂದೂಕು ತರಬೇತಿ ಶಿಬಿರವನ್ನು 1ನೇ ಹಂತವಾಗಿ ದಿನಾಂಕ: 13–07–2026 ರಿಂದ 19–07–2026ರ ವರೆಗೆ ಕೋಲಾರ ನಗರ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲೆಯ ಆಸಕ್ತ ನಾಗರೀಕರು ಈ ತರಬೇತಿಗೆ ಅರ್ಜಿಯನ್ನು ಜುಲೈ 02 ರಿಂದ ಜುಲೈ 11 ರವರೆಗೆ ಕೋಲಾರ ಜಿಲ್ಲಾ ಸಶಸ್ತ್ರ ಮೀಸಲು ಪಡೆ, ಇಲ್ಲಿ ಕಚೇರಿಯ ಅವಧಿಯಲ್ಲಿ ಪಡೆದು, ಭರ್ತಿ ಮಾಡಿದ ಅರ್ಜಿಗಳನ್ನು ಜುಲೈ 12 ರೊಳಗೆ ಸಲ್ಲಿಸಬೇಕು. ಮಹಿಳೆಯರಿಗೆ ವಿಶೇಷ ಆದ್ಯತೆ ಇರುತ್ತದೆ. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ: 08152 222023 ಅನ್ನು ಸಂಪರ್ಕಿಸಬಹುದು ಎಂದು ಕೋಲಾರ ಡಿ.ಎ.ಆರ್ ಪೊಲೀಸ್ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

ಕೋಲಾರ

ಕೋಲಾರ ತಾಲ್ಲೂಕು ವೇಮಗಲ್ ಹೋಬಳಿ ಅಮ್ಮನಲ್ಲೂರು ಕಂದಾಯ ವೃತ್ತದ ಗ್ರಾಮ ಸಹಾಯಕರ ಒಂದು ಹುದ್ದೆ ಈ ಕಛೇರಿಯಲ್ಲಿ ಖಾಲಿ ಇದ್ದು, ಖಾಲಿ ಇರುವ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸದರಿ ಹುದ್ದೆಯು ತಾತ್ಕಾಲಿಕ ಹುದ್ದೆಯಾಗಿದ್ದು, ಮಾಸಿಕ ಗೌರವಧನವನ್ನು ನೀಡಲಾಗುವುದು. ಅಭ್ಯರ್ಥಿಯು ಸ್ಥಳೀಯ ನಿವಾಸಿಯಾಗಿರಬೇಕು. ಸಾಮಾನ್ಯ ಜ್ಞಾನವುಳ್ಳವರಾಗಿದ್ದು, ಕನಿಷ್ಠ ಎಸ್.ಎಸ್.ಎಲ್.ಸಿ ವರೆಗೆ ವಿದ್ಯಾಭ್ಯಾಸ ಮಾಡಿ ಓದು, ಬರಹವುಳ್ಳವರಾಗಿರಬೇಕು. ಕನಿಷ್ಠ 25 ರಿಂದ ಗರಿಷ್ಠ 65 ವರ್ಷ ವಯೋಮಿತಿಯೊಳಗಿರಬೇಕು. ಅಭ್ಯರ್ಥಿಯು ಯಾವುದೇ ಕ್ರಿಮಿನಲ್ ಅಪರಾಧವೆಸಗಿರಬಾರದು ಹಾಗೂ ನ್ಯಾಯಾಲಯದಿಂದ ದಂಡನೆಗೆ ಒಳಗಾಗಿರಬಾರದು.

ಹೆಚ್ಚಿನ ಮಾಹಿತಿಗೆ ಕೋಲಾರ ತಾಲ್ಲೂಕು ಕಛೇರಿಯನ್ನು ಸಂಪರ್ಕಿಸಬಹುದೆಂದು ಕೋಲಾರ ತಾಲ್ಲೂಕು ತಹಶೀಲ್ದಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾಹನ ಚಾಲನಾ ತರಬೇತಿ

ಕೋಲಾರ

ಕ.ರಾ.ರ.ಸಾ.ನಿಗಮ ಕೇಂದ್ರೀಯ ತರಬೇತಿ ಕೇಂದ್ರ, ಮಾಲೂರು ತಾಲ್ಲೂಕಿನಲ್ಲಿ ಎಸ್.ಸಿ ಮತ್ತು ಎಸ್.ಟಿ ಅಭ್ಯರ್ಥಿಗಳಿಗೆ ಉಚಿತ ವಾಹನ ಚಾಲನಾ ತರಬೇತಿ ನೀಡಲಾಗುವುದು.

30 ದಿನಗಳ ಲಘು ಮತ್ತು ಭಾರಿ ವಾಹನ ಚಾಲನಾ ತರಬೇತಿಯೊಂದಿಗೆ ಉಚಿತ ಊಟ, ವಸತಿ ಮತ್ತು ಚಾಲನಾ ಪರವಾನಿಗೆ ನೀಡಲಾಗುವುದು. ವಯೋಮಿತಿ ಲಘು ವಾಹನ (ಎಲ್‌ಎಂವಿ) ಪರವಾನಿಗೆ ಪಡೆಯಲು 18–45 ವರ್ಷ ಮತ್ತು ಭಾರಿ ವಾಹನ (ಹೆಚ್‌ಎಂವಿ) ಪರವಾನಿಗೆ ಪಡೆಯಲು 21–45 ವರ್ಷ ವಯಸ್ಸು ಆಗಿರಬೇಕು. ಭಾರಿ ವಾಹನ ಚಾಲನೆಗೆ ಲಘು ವಾಹನ ಚಾಲನೆಯ ಪರವಾನಿಗೆಯನ್ನು ಒಂದು ವರ್ಷ ಮುಂಚಿತವಾಗಿ ಪಡೆದಿರಬೇಕು.

ಅಗತ್ಯ ದಾಖಲೆಗಳಾದ ಮೂಲ ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಮೂಲ ಆಧಾರ್ ಕಾರ್ಡ್, ಮೂಲ ಜಾತಿ ಪ್ರಮಾಣಪತ್ರ, ಮೂಲ ಆದಾಯ ಪ್ರಮಾಣಪತ್ರ, 5 ಪಾಸ್‌ಪೋರ್ಟ್ ಫೋಟೋ ಹಾಗೂ ಮೂರು ಸೆಟ್ ಜೆರಾಕ್ಸ್ ಪ್ರತಿಗಳನ್ನು ಸಲ್ಲಿಸಬೇಕು.

# 12 ಕಿ.ಮೀಗೂ ಹೆಚ್ಚು ಫುಟ್‌ಪಾತ್ ಒತ್ತುವರಿ ತೆರವು ಯಶಸ್ವಿ

ಬೆಂಗಳೂರು

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವರಾದ ಕೃಷ್ಣ ಬೈರೇಗೌಡ ಅವರ ನಿರ್ದೇಶನದಂತೆ ಹಾಗೂ ಬೆಂಗಳೂರು ಉತ್ತರ ನಗರ ಪಾಲಿಕೆಯ ಆಯುಕ್ತ ಪೋಮ್ಮಲ ಸುನೀಲ್ ಕುಮಾರ್ ಅವರ ಮಾರ್ಗದರ್ಶನದಲ್ಲಿ, ಘನ ಉಚ್ಚ ನ್ಯಾಯಾಲಯದ ಆದೇಶದಂತೆ ಪಾದಚಾರಿ ಸ್ನೇಹಿ ನಗರ ನಿರ್ಮಾಣ ಹಾಗೂ ಪಾದಚಾರಿಗಳಿಗೆ ಸುರಕ್ಷಿತ ಸಂಚಾರ ವ್ಯವಸ್ಥೆ ಕಲ್ಪಿಸುವ ಉದ್ದೇಶದಿಂದ ಬೆಂಗಳೂರು ಉತ್ತರ ನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗ ಅತಿಕ್ರಮಣ ತೆರವು ಕಾರ್ಯಾಚರಣೆ ನಡೆಸಲಾಯಿತು.

ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರ: ಬ್ಯಾಟರಾಯನಪುರ ವಿಭಾಗದ ವತಿಯಿಂದ ಸಹಕಾರನಗರ ರೈಲ್ವೆ ಸಮಾನಾಂತರ ರಸ್ತೆಯಲ್ಲಿ ಸುಮಾರು 2.60 ಕಿ.ಮೀ ಉದ್ದದ ಎರಡೂ ಬದಿಯ ಪಾದಚಾರಿ ಮಾರ್ಗಗಳನ್ನು ಅತಿಕ್ರಮಣ ಮುಕ್ತಗೊಳಿಸಲು ಎರಡು ಜೆಸಿಬಿ, ಎರಡು ಟ್ರಾಕ್ಟರ್ ಹಾಗೂ 20 ಕಾರ್ಮಿಕರನ್ನು ಬಳಸಿಕೊಂಡು ಬೆಳಿಗ್ಗೆ 10.00 ಗಂಟೆಯಿಂದ ಕಾರ್ಯಾಚರಣೆ ನಡೆಸಲಾಯಿತು. ಕಾರ್ಯಾಚರಣೆಯಲ್ಲಿ 8 ಬೀದಿ ಬದಿ ವ್ಯಾಪಾರಿಗಳು ಹಾಗೂ 6 ಪಾದಚಾರಿ ಮಾರ್ಗ ಅತಿಕ್ರಮಣಗಳನ್ನು ತೆರವುಗೊಳಿಸಲಾಯಿತು.

ವಿದ್ಯಾರಣ್ಯಪುರ ವಿಭಾಗದ ವತಿಯಿಂದ ವಿದ್ಯಾರಣ್ಯಪುರ ಮುಖ್ಯ ರಸ್ತೆಯಲ್ಲಿ ನಂಜಪ್ಪ ಸರ್ಕಲ್‌ನಿಂದ ಕೊನೆಯ ಬಸ್ ನಿಲ್ದಾಣದವರೆಗೆ ಸುಮಾರು 1.00 ಕಿ.ಮೀ ಉದ್ದದ ಎರಡೂ ಬದಿಯ ಪಾದಚಾರಿ ಮಾರ್ಗಗಳನ್ನು ತೆರವುಗೊಳಿಸಲು ಎರಡು ಜೆಸಿಬಿ, ಆರು ಟ್ರಾಕ್ಟರ್ ಹಾಗೂ 20 ಕಾರ್ಮಿಕರನ್ನು ಬಳಸಿಕೊಂಡು ಕಾರ್ಯಾಚರಣೆ ನಡೆಸಲಾಯಿತು. ಈ ವೇಳೆ 15 ಬೀದಿ ಬದಿ ವ್ಯಾಪಾರಿಗಳು, 16 ಪಾದಚಾರಿ ಮಾರ್ಗ ಅತಿಕ್ರಮಣಗಳು ಹಾಗೂ 12 ಅನಧಿಕೃತ ಜಾಹೀರಾತು ಫಲಕಗಳನ್ನು ತೆರವುಗೊಳಿಸಲಾಯಿತು. ಪುಲಿಕೇಶಿನಗರ ವಿಭಾಗದ ವತಿಯಿಂದ ರಿಚ್ಮಂಡ್ ಟೌನ್‌ನ ಕ್ಲಾರ್ಕ್ ರಸ್ತೆಯಲ್ಲಿ ಸುಮಾರು 0.75 ಕಿ.ಮೀ ಉದ್ದದ ಎರಡೂ ಬದಿಯ ಪದಚಾರಿ ಮಾರ್ಗಗಳನ್ನು ಅತಿಕ್ರಮಣ ಮುಕ್ತಗೊಳಿಸಲು ಮೂರು ಟ್ರಾಕ್ಟರ್ ಹಾಗೂ 15 ಕಾರ್ಮಿಕರನ್ನು ಬಳಸಿಕೊಂಡು ಬೆಳಿಗ್ಗೆ 10.30 ಗಂಟೆಯಿಂದ ಕಾರ್ಯಾಚರಣೆ ನಡೆಸಲಾಯಿತು.



ಬೆಂಗಳೂರಿನ ಸೇಂಟ್ ಜೋಸೆಫ್ ಸಂಸ್ಥೆಯ ಫಾದರ್ ಡೇನಿಯಲ್, ಫಾದರ್ ಚಾರ್ಲಸ್, ಫಾದರ್ ಜೋಯಲ್, ಫಾದರ್ ನೋರ್ವಿನ್ ಹಾಗೂ ಪ್ರವೀಣ್ ಪೀಟರ್ ಅವರು ಸಿಎಂ ಡಿ ಕೆ ಶಿವಕುಮಾರ್ ಅವರನ್ನು ಸಿಎಂ ಗೃಹಕಚೇರಿ 'ಕೃಷ್ಣಾ'ದಲ್ಲಿ ಬುಧವಾರ ಭೇಟಿ ಮಾಡಿ ಅಭಿನಂದನೆ ಸಲ್ಲಿಸಿದರು.

# ಹೆಚ್.ಕೆ.ಮುನಿರಾಜು 50ನೇ ಹುಟ್ಟುಹಬ್ಬ ಸಂಭ್ರಮಾಚರಣೆ

ಬೆಂಗಳೂರು

ಹಗದೂರು ಶ್ರೀರಾಮ ಯುವಕ ರೈತ ಸಂಘದ ಖಜಾಂಚಿ ಹೆಚ್.ಕೆ. ಮುನಿರಾಜು ಅವರ 50ನೇ ವರ್ಷದ ಹುಟ್ಟುಹಬ್ಬವನ್ನು ಹಗದೂರಿನಲ್ಲಿ ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಹಗದೂರು ಶ್ರೀರಾಮ ಯುವಕ ರೈತ ಸಂಘದ ಅಧ್ಯಕ್ಷ ಹೆಚ್. ಕೆ. ನಾರಾಯಣಸ್ವಾಮಿ, ಮಾಜಿ ಮಹಾನಗರ ಪಾಲಿಕೆ ಸದಸ್ಯ ಹೆಚ್.ಎ. ಶ್ರೀನಿವಾಸ್, ಮಂಜು ವೈನ್ಸ್‌ನ ಎಸ್. ಮಂಜುನಾಥ್ ಗೌಡ, ಕಂದಾಯ ಪರಿವೀಕ್ಷಕ ಹಾಗೂ ಜಿಬಿಎ–ಪಾಲಿಕೆಗಳ ಅಧಿಕಾರಿ ಮತ್ತು



ನೌಕರರ ಕ್ಷೇಮಾಭಿವೃದ್ಧಿ ಸಂಘದ ನಿರ್ದೇಶಕ ಹೆಚ್.ಬಿ. ಹರೀಶ್, ಹೆಚ್.ಎ. ಮುನಿಯಪ್ಪ, ಪ್ರಾಂಶುಪಾಲ ಎಂ. ಮಲ್ಲೇಶ್, ಬಿಲ್ಡರ್ ಅಶೋಕ್ ರೆಡ್ಡಿ, ಭರಣಿ ಎಲೆಕ್ಟ್ರಿಕಲ್ಸ್ ಮಾಲೀಕ ರಘು ಜೆ., ಸ್ಥಳೀಯ ಮುಖಂಡರಾದ ಜನಾರ್ಧನ್, ಹೆಚ್.ಎಂ. ಮಂಜುನಾಥ್, ಟಿ. ಬಾಬಣ್ಣ, ಎಲ್. ವಿಜಯಕುಮಾರ್ ಸೇರಿದಂತೆ ಅನೇಕರು ಭಾಗವಹಿಸಿ ಹೆಚ್. ಕೆ. ಮುನಿರಾಜು ಅವರನ್ನು ಆತ್ಮೀಯವಾಗಿ ಸನ್ಮಾನಿಸಿ ಶುಭ ಹಾರೈಸಿದರು. ಹೆಚ್.ಕೆ. ಮುನಿರಾಜು ಅವರು ದೈವಭಕ್ತಿಯೊಂದಿಗೆ ಕೃಷಿ ಕ್ಷೇತ್ರದ ಮೇಲೂ ಅಪಾರ ಆಸಕ್ತಿ ಹೊಂದಿದ್ದು, ಸಮಾಜಮುಖಿ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಹಗದೂರು ಶ್ರೀರಾಮ ರಥ ನಿರ್ಮಾಣ ಕಾರ್ಯದಲ್ಲಿಯೂ ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳೊಂದಿಗೆ ಶ್ರಮವಹಿಸಿ ಪ್ರಮುಖ ಪಾತ್ರ ನಿರ್ವಹಿಸಿದ್ದಾರೆ.

ಮುನಿರಾಜು ಅವರು ಇನ್ನಷ್ಟು ಸಮಾಜಸೇವೆ ಮತ್ತು ಧಾರ್ಮಿಕ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಲಿ ಎಂದು ಗಣ್ಯರು ಹಾರೈಸಿದರು.

03/07/2026

# ಭಾರತ ಸಾರಥಿ

BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕುರಿತು ಜಾಗೃತಿ

ದೇವನಹಳ್ಳಿ

ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ದೇವನಹಳ್ಳಿ ತಾಲೂಕಿನ ಚನ್ನರಾಯಪಟ್ಟಣ ಹೋಬಳಿಯ ಚೆನ್ನಹಳ್ಳಿ ಗ್ರಾಮದಲ್ಲಿ ಜಾಗೃತಿ ಕಾರ್ಯಕ್ರಮ ಹಾಗೂ ಶಾಲಾ ಮಕ್ಕಳ ಜಾಥಾ ನಡೆಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ವಸಂತಿ ಅಮರ್ ಅವರು ರಾಜ್ಯದ 5ನೇ ಹಣಕಾಸು ಆಯೋಗದ ಅಧ್ಯಕ್ಷ ಹಾಗೂ ಮಾಜಿ ಸಂಸದ ಸಿ. ನಾರಾಯಣಸ್ವಾಮಿ ಅವರಿಗೆ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಕುರಿತು ಮಾಹಿತಿ ನೀಡಿ, ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಡಾ. ವಸಂತಿ ಅಮರ್, ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ನಡೆಯುತ್ತಿದ್ದು, ಅರ್ಹ ಮತದಾರರು ಅಗತ್ಯ ದಾಖಲೆಗಳನ್ನು ಸಲ್ಲಿಸುವ ಮೂಲಕ ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಮುಂದುವರಿಯುವಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಜೂನ್ 30ರಿಂದ ಜುಲೈ 29ರವರೆಗೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ ಮನೆಗೆ ಭೇಟಿ ನೀಡಿ ಮತದಾರರಿಗೆ ಎನ್ಯೂಮರೇಷನ್ ನಮೂನೆಗಳನ್ನು ಎರಡು ಪ್ರತಿಗಳಲ್ಲಿ ವಿತರಿಸಲಿದ್ದು, ಅವುಗಳನ್ನು ಭರ್ತಿ ಮಾಡಲು ಸಹಾಯ ಮಾಡುವುದರ ಜೊತೆಗೆ ಭರ್ತಿ ಮಾಡಿದ ನಮೂನೆಗಳನ್ನು ಸ್ವೀಕರಿಸಿ ರಸೀದಿ ನೀಡಲಿದ್ದಾರೆ ಎಂದು ವಿವರಿಸಿದರು.

ಭರ್ತಿ ಮಾಡಿದ ಅರ್ಜಿಗಳನ್ನು ಬಿಎಲ್‌ಒಗಳಿಗೆ ಸಲ್ಲಿಸಿದರೆ ಮಾತ್ರ ಮತದಾರರ ಪಟ್ಟಿಯಲ್ಲಿ ಹೆಸರು ಮುಂದುವರಿಯಲಿದೆ. ಸಲ್ಲಿಸದಿದ್ದರೆ ಹೆಸರು ಅನರ್ಹವಾಗುವ ಸಾಧ್ಯತೆ ಇರುವುದರಿಂದ ಪ್ರತಿಯೊಬ್ಬ ಮತದಾರರೂ ಈ ಪ್ರಕ್ರಿಯೆಗೆ ಸ್ಪಂದಿಸಬೇಕು ಎಂದು ಮನವಿ ಮಾಡಿದರು.

ಬಳಿಕ ಶಾಲಾ ಮಕ್ಕಳ ಜಾಗೃತಿ ಜಾಥಾಗೆ ಚಾಲನೆ ನೀಡಿ, ಎಸ್‌ಐಆರ್ ಕುರಿತು ಕರಪತ್ರಗಳನ್ನು ವಿತರಿಸಲಾಯಿತು. ನಂತರ ಬಿಎಲ್‌ಒ ಹಾಗೂ ಮತದಾರರ ಸೌಲಭ್ಯ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ರಾಮಕೃಷ್ಣಯ್ಯ, ಕಾರ್ಯನಿರ್ವಾಹಕ ಅಧಿಕಾರಿ ಮುನಿರಾಜು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ನಾಗರಾಜಯ್ಯ, ಗ್ರಾಮ ಪಂಚಾಯಿತಿ ಸಿಬ್ಬಂದಿ, ಬಿಎಲ್‌ಒಗಳು, ಪ್ರೌಢಶಾಲೆಯ ಮುಖ್ಯ ಶಿಕ್ಷಕರು, ಶಾಲಾ ಮಕ್ಕಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನಕ್ಕೆ ಜಿಲ್ಲಾಧಿಕಾರಿ ಚಾಲನೆ

ದೇವನಹಳ್ಳಿ

ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನದ ಅಂಗವಾಗಿ ದೇವನಹಳ್ಳಿ ಪಟ್ಟಣದ ತಾಲೂಕು ಆರೋಗ್ಯಾಧಿಕಾರಿ ಕಚೇರಿಯಲ್ಲಿ ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ ಅವರು ಪುಟ್ಟ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ, ಮಕ್ಕಳ ಆರೋಗ್ಯಕರ ಹಾಗೂ ಸುರಕ್ಷಿತ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಪೋಲಿಯೋ ಲಸಿಕೆ ನೀಡಲಾಗುತ್ತಿದೆ. ಭಾರತವನ್ನು ಪೋಲಿಯೋ ಮುಕ್ತ ರಾಷ್ಟ್ರವೆಂದು ಘೋಷಿಸಲಾಗಿದ್ದರೂ, ಕೆಲವು ದೇಶಗಳಲ್ಲಿ ಇನ್ನೂ ಪೋಲಿಯೋ ಸೋಂಕಿನ ಪ್ರಕರಣಗಳು ಕಂಡುಬರುತ್ತಿವೆ. ಹೀಗಾಗಿ ದೇಶದಲ್ಲಿ ಮತ್ತೆ ಪೋಲಿಯೋ ಕಾಣಿಸಿಕೊಳ್ಳದಂತೆ ಮುನ್ನೆಚ್ಚರಿಕಾ ಕ್ರಮವಾಗಿ ಐದು ವರ್ಷದೊಳಗಿನ ಎಲ್ಲ ಮಕ್ಕಳಿಗೂ ಪೋಲಿಯೋ ಲಸಿಕೆ ನೀಡಲಾಗುತ್ತಿದೆ ಎಂದು ಹೇಳಿದರು.

ಪೋಷಕರು ತಮ್ಮ ಐದು ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಿಗೆ ಕಡ್ಡಾಯವಾಗಿ ಪೋಲಿಯೋ ಲಸಿಕೆ ಹಾಕಿಸುವ ಮೂಲಕ ಅಭಿಯಾನವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ವಾಸಂತಿ ಅಮರ್ ಮಾತನಾಡಿ, ಜೂನ್ 28ರಿಂದ ಜುಲೈ 1ರವರೆಗೆ ಐದು ದಿನಗಳ ಕಾಲ ನಡೆಯುವ ಈ ಅಭಿಯಾನದಲ್ಲಿ ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶಗಳ ಒಟ್ಟು 1,00,434 ಮಕ್ಕಳಿಗೆ ಪೋಲಿಯೋ ಲಸಿಕೆ ನೀಡುವ ಗುರಿ ಹೊಂದಲಾಗಿದೆ. ಇದಕ್ಕಾಗಿ ಜಿಲ್ಲೆಯಾದ್ಯಂತ 479 ಲಸಿಕಾ ಕೇಂದ್ರಗಳನ್ನು ತೆರೆಯಲಾಗಿದ್ದು, 2,046 ಆರೋಗ್ಯ ಸಿಬ್ಬಂದಿ ಮತ್ತು ಸ್ವಯಂಸೇವಕರು ಕರ್ತವ್ಯ ನಿರ್ವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಲಕ್ಕಾ ಕೃಷ್ಣ ರೆಡ್ಡಿ, ಆರ್‌ಸಿಎಚ್ ಅಧಿಕಾರಿ ಡಾ. ಸೀಮಾ ಮಾಬಳೆ, ದೇವನಹಳ್ಳಿ ತಹಶೀಲ್ದಾರ್ ಅನಿಲ್ ಹಾಗೂ ಆರೋಗ್ಯ ಇಲಾಖೆಯ

# ‘ಅರ್ಧಾವಧಿ ಅಭಿವೃದ್ಧಿ ವರದಿ ಬಿಡುಗಡೆ ಮಾಡಲಿ’

ದೊಡ್ಡಬಳ್ಳಾಪುರ

“ಐದು ವರ್ಷದ ಪ್ರೋಗ್ರೆಸ್ ಕಾರ್ಡ್‌ನೊಂದಿಗೆ ಬರುತ್ತೇನೆ” ಎಂದು ಭರವಸೆ ನೀಡಿದ್ದ ಶಾಸಕ ಧೀರಜ್ ಮುನಿರಾಜು ಅವರು ಮೂರು ವರ್ಷಗಳ ಆಡಳಿತ ಪೂರ್ಣಗೊಂಡಿದ್ದರೂ ಇದುವರೆಗೆ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳ ಮಧ್ಯಂತರ ವರದಿಯನ್ನು ಸಾರ್ವಜನಿಕರ ಮುಂದಿಡಬೇಕು ಎಂದು ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಶರತ್ ಪಟೇಲ್ ಒತ್ತಾಯಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಯುವ ಕಾಂಗ್ರೆಸ್ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲೂಕಿನ ಜನತೆ ಶಾಸಕರ ಅಭಿವೃದ್ಧಿ ಕಾರ್ಯಗಳ ಬಗ್ಗೆ ಉತ್ತರ ಕೇಳುತ್ತಿದ್ದಾರೆ. ಶೀಘ್ರದಲ್ಲೇ ಯುವ ಕಾಂಗ್ರೆಸ್ ಕಾರ್ಯಕರ್ತರು ಶಾಸಕರ ಕಚೇರಿಗೆ ತೆರಳಿ ಅರ್ಧಾವಧಿಯ ಅಭಿವೃದ್ಧಿ ವರದಿ (ರಿಪೋರ್ಟ್ ಕಾರ್ಡ್) ನೀಡುವಂತೆ ಮನವಿ ಸಲ್ಲಿಸಲಿದ್ದಾರೆ ಎಂದು ತಿಳಿಸಿದರು.

ತಾಲೂಕು ಯುವ ಕಾಂಗ್ರೆಸ್ ಅಧ್ಯಕ್ಷ ಪುನೀತ್ ಗೌಡ ಮಾತನಾಡಿ, ದೊಡ್ಡಬಳ್ಳಾಪುರದಲ್ಲಿ ಜಿಲ್ಲಾಸ್ಪತ್ರೆ ಹಾಗೂ ಜಿಲ್ಲಾ ಕ್ರೀಡಾಂಗಣ ಉಳಿಯಲು ಮಾಜಿ ಶಾಸಕ ಟಿ. ವೆಂಕಟರಮಣಯ್ಯ ಅವರು ಪ್ರಮುಖ ಪಾತ್ರ ವಹಿಸಿದ್ದರು ಎಂದು ಹೇಳಿದರು. ಬಿಜೆಪಿ ಸರ್ಕಾರದ ಅವಧಿಯಲ್ಲೂ ಸಚಿವರನ್ನು ನಿರಂತರವಾಗಿ ಭೇಟಿ ಮಾಡಿ ಜಿಲ್ಲಾಸ್ಪತ್ರೆ ಮಂಜೂರಿಗೆ ಶ್ರಮಿಸಿದ್ದರು. ಆದರೆ ಈಗಿನ ಶಾಸಕ ಧೀರಜ್ ಮುನಿರಾಜು ಅವರು ಜಿಲ್ಲಾಸ್ಪತ್ರೆ ನಿರ್ಮಾಣದ ಕುರಿತು ಅಗತ್ಯ ಮಟ್ಟದಲ್ಲಿ ಸರ್ಕಾರದ ಮೇಲೆ ಒತ್ತಡ ತರಲು ವಿಫಲರಾಗಿದ್ದಾರೆ ಎಂದು ಆರೋಪಿಸಿದರು.



“ಪತ್ರ ಬರೆದಿದ್ದೇನೆ ಎನ್ನುವುದಷ್ಟೇ ಸಾಕಾಗುವುದಿಲ್ಲ. ಅಭಿವೃದ್ಧಿ ಕಾರ್ಯಗಳನ್ನು ಕಾರ್ಯರೂಪಕ್ಕೆ ತರುವ ಬದ್ಧತೆ ಇರಬೇಕು. ‘ನವ ದೊಡ್ಡಬಳ್ಳಾಪುರ’ ಹೆಸರಿನಲ್ಲಿ ಮತ ಕೇಳಿದ ಶಾಸಕರು ಆ ಕನಸನ್ನು ನನಸು ಮಾಡುವಲ್ಲಿ ಹಿಂದೆ ಬಿದ್ದಿದ್ದಾರೆ. ತಾಲೂಕಿನ ರಸ್ತೆಗಳ ದುಸ್ಥಿತಿ ಹಾಗೂ ನಗರಸಭೆಯಲ್ಲಿ ತಮ್ಮದೇ ಪಕ್ಷದ ಆಡಳಿತ ಇದ್ದರೂ ಮೂಲಸೌಕರ್ಯ ಅಭಿವೃದ್ಧಿಯಲ್ಲಿ ಯಾವುದೇ ಗಮನ ಹರಿಸಿಲ್ಲ” ಎಂದು ಟೀಕಿಸಿದರು.

ನೇಕಾರರ ಸೀರೆಗಳ ಮಾರಾಟ ಮಳಿಗೆ ನಿರ್ಮಾಣಕ್ಕಾಗಿ ಮಾಜಿ ಶಾಸಕ ವೆಂಕಟರಮಣಯ್ಯ ಅವರು 10 ಗುಂಟೆ ಜಾಗ ಮಂಜೂರು ಮಾಡಿಸಿದ್ದರು. ಎರಡು ಬಾರಿ ಭೂಮಿಪೂಜೆ ನಡೆದಿದ್ದರೂ ಕಾಮಗಾರಿ ಇನ್ನೂ ಆರಂಭವಾಗಿಲ್ಲ. ಕೇವಲ ಶಂಕುಸ್ಥಾಪನೆ ಮತ್ತು ಭೂಮಿಪೂಜೆಗಳನ್ನು ಅಭಿವೃದ್ಧಿಯೆಂದು ಬಿಂಬಿಸುವುದು ಸರಿಯಲ್ಲ ಎಂದು ಮುಖಂಡರು ಅಭಿಪ್ರಾಯಪಟ್ಟರು.

ಬಾಶೆಟ್ಟಿಹಳ್ಳಿಯಲ್ಲಿ ಕೆಂಪೇಗೌಡರ ಪ್ರತಿಮೆ ಶಂಕುಸ್ಥಾಪನೆ ವೇಳೆ ಪಟ್ಟಣ ಪಂಚಾಯಿತಿ ಅಧ್ಯಕ್ಷ ಪ್ರೇಮ್ ಕುಮಾರ್ ಅವರು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಮಾಜಿ ಶಾಸಕ ವೆಂಕಟರಮಣಯ್ಯ ಅವರನ್ನು ಟೀಕಿಸಿರುವುದನ್ನು ಖಂಡಿಸಿದ ಯುವ ಕಾಂಗ್ರೆಸ್ ಮುಖಂಡರು, ತಾಂತ್ರಿಕ ಇಲಾಖೆಯ ಅನುಮತಿ ಪಡೆಯುವ ಮೊದಲು ಭೂಮಿಪೂಜೆ ನಡೆಸಿರುವ ಕ್ರಮವನ್ನೂ ಪ್ರಶ್ನಿಸಿದರು. ಸಾರ್ವಜನಿಕರ ಪ್ರಶ್ನೆಗಳಿಗೆ ಉತ್ತರಿಸುವ ಬದಲು ಪ್ರಶ್ನಿಸಿದವರನ್ನೇ ಅವಹೇಳನ ಮಾಡಿರುವುದು ಅಧ್ಯಕ್ಷರ ಸರ್ವಾಧಿಕಾರಿ ಧೋರಣೆಯನ್ನು ತೋರಿಸುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಯುವ ಕಾಂಗ್ರೆಸ್ ಕಾರ್ಯದರ್ಶಿ ಶಿವರಾಜ್, ಕಸಬಾ ಯುವ ಕಾಂಗ್ರೆಸ್ ಅಧ್ಯಕ್ಷ ಜಯಸಿಂಹ, ಎನ್‌ಎಸ್‌ಯುಐ ತಾಲೂಕು ಅಧ್ಯಕ್ಷ ಅಶ್ವತ್ ರೆಡ್ಡಿ, ಮುಖಂಡ ಶಿವಕುಮಾರ್ ಸೇರಿದಂತೆ ಹಲವು ಯುವ ಕಾಂಗ್ರೆಸ್ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಎಚ್.ಡಿ.ಕುಮಾರಸ್ವಾಮಿ ವಿರುದ್ಧ ಅವಹೇಳನ ಆರೋಪ

ದೇವನಹಳ್ಳಿ

ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಮತ್ತು ಅವರ ಕುಟುಂಬದ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿರುವುದಾಗಿ ಆರೋಪಿಸಿ, ಚಿಕ್ಕಬಳ್ಳಾಪುರ ಕ್ಷೇತ್ರದ ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಜೆಡಿಎಸ್ ವತಿಯಿಂದ ದೇವನಹಳ್ಳಿಯಲ್ಲಿ ಬೃಹತ್ ಪ್ರತಿಭಟನೆ ನಡೆಯಿತು.

ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ನಿಸರ್ಗ ನಾರಾಯಣಸ್ವಾಮಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಕೆ.ವಿ. ಮಂಜುನಾಥ್ ಹಾಗೂ ತಾಲೂಕು ಅಧ್ಯಕ್ಷ ಎಸ್. ಮಹೇಶ್ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ನೂರಾರು ಮುಖಂಡರು ಮತ್ತು ಕಾರ್ಯಕರ್ತರು ಭಾಗವಹಿಸಿ ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಮಾಜಿ ಶಾಸಕ ನಿಸರ್ಗ ನಾರಾಯಣಸ್ವಾಮಿ, ಜವಾಬ್ದಾರಿಯುತ ಸ್ಥಾನದಲ್ಲಿರುವ ಶಾಸಕರು ಸಾರ್ವಜನಿಕವಾಗಿ ಮಾತನಾಡುವಾಗ ಸಂಯಮ ಪಾಲಿಸಬೇಕು. ಎಚ್.ಡಿ. ಕುಮಾರಸ್ವಾಮಿ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿರುವುದು ಹಾಗೂ ಚಿಕ್ಕಬಳ್ಳಾಪುರದಲ್ಲಿ ನಡೆದ ನಾಡಪ್ರಭು ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ ಜನರನ್ನು ಪ್ರಚೋದಿಸಿರುವುದು ಗಂಭೀರ ವಿಷಯವಾಗಿದೆ ಎಂದು ಆರೋಪಿಸಿದರು.

ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಕಾನೂನು ಕ್ರಮ ಕೈಗೊಂಡು, ಅವರು ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ಕುಮಾರಸ್ವಾಮಿ ಅವರಲ್ಲಿ ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಿದರು.




ಬೆಂಗಳೂರು ಗ್ರಾಮಾಂತರ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಕೆ.ವಿ. ಮಂಜುನಾಥ್ ಮಾತನಾಡಿ, ಶಿಕ್ಷಣ ಸಂಸ್ಥೆ ನಡೆಸುವ ವ್ಯಕ್ತಿಯೊಬ್ಬರು ಈ ರೀತಿಯ ವರ್ತನೆ ತೋರಿರುವುದು ಖಂಡನೀಯ. ಕಾರ್ಯಕ್ರಮದ ವೇಳೆ ಸನ್ನೆಗಳ ಮೂಲಕ ಜನರನ್ನು ಪ್ರಚೋದಿಸುವ ಪ್ರಯತ್ನ ನಡೆಸಲಾಗಿದೆ ಎಂದು ಆರೋಪಿಸಿದರು. ನಾಡಪ್ರಭು ಕೆಂಪೇಗೌಡರ ಜಯಂತಿಯಂತಹ ಕಾರ್ಯಕ್ರಮದಲ್ಲಿ ನಡೆದ ಘಟನೆಗೆ ಸಂಬಂಧಿಸಿದಂತೆ ಶಾಸಕ ಪ್ರದೀಪ್ ಈಶ್ವರ್ ಅವರನ್ನು ಮೊದಲ ಆರೋಪಿಯನ್ನಾಗಿ (ಎ–1) ಪರಿಗಣಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

"ಚಿಕ್ಕಬಳ್ಳಾಪುರ ಜಿಲ್ಲೆಗೆ ಸರ್ ಎಂ. ವಿಶ್ವೇಶ್ವರಯ್ಯ ಹಾಗೂ ಕೈವಾರ ತಾತಯ್ಯ ಅವರಂತಹ ಮಹನೀಯರ ಪರಂಪರೆ ಇದೆ. ಇಂತಹ ಜಿಲ್ಲೆಗೆ ಇಂತಹ ಘಟನೆಗಳಿಂದ ಕಳಂಕ ಬರುವುದು ದುಃಖಕರ" ಎಂದು ಅವರು ಹೇಳಿದರು.

ಪ್ರತಿಭಟನೆಯ ಬಳಿಕ, ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಜಿಲ್ಲಾಧಿಕಾರಿಗಳ ಪರವಾಗಿ ತಹಸೀಲ್ದಾರ್ ರಾಜೀವ್ ಲೋಚನ ಅವರಿಗೆ ಜೆಡಿಎಸ್ ಮುಖಂಡರು ಮನವಿ ಪತ್ರ ಸಲ್ಲಿಸಿದರು.

ಈ ವೇಳೆ ಜೆಡಿಎಸ್‌ನ ವಿವಿಧ ಘಟಕಗಳ ಪದಾಧಿಕಾರಿಗಳು, ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.



ಕೋಲಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಜುಲೈ 1 ರಂದು ಕೋಲಾರ ನಗರದ ಪತಕರ್ತರ ಭವನದಲ್ಲ ನಡೆದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲ ಮಾಲೂರು ತಾಲ್ಲೂಕು ಪತ್ರಕರ್ತರ ಕೋಲಾರವಾಣೆ ವರದಿಗಾರ ಟಿ.ಕೆ.ನಾಗರಾಜ್ ಪುತ್ರ ಎಂ.ಟೆಕ್ ಪದವಿ ಮುಗಿಸಿದ ಗಗನ್ ನಾಯಕ್ ಎಂ.ಎನ್. ಅವರನ್ನು ಪ್ರಶಸ್ತಿ ನೀಡಿ ಗೌರವಿಸಿ ಅಭಿನಂದಿಸಲಾಯಿತು.

## 3ರಂದು “ಯುವ ಸೌರಭ” ಕಾರ್ಯಕ್ರಮ

ತುಮಕೂರು

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹೆಬ್ಬೂರು ಸರ್ಕಾರಿ ಪದವಿ ಪೂರ್ವ ಕಾಲೇಜು ಸಂಯುಕ್ತ ಆಶ್ರಯದಲ್ಲಿ ಜುಲೈ 3ರಂದು ಬೆಳಿಗ್ಗೆ 10.30 ಗಂಟೆಗೆ ಹೆಬ್ಬೂರು ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ “ಯುವ ಸೌರಭ” ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಶಾಸಕ ಬಿ. ಸುರೇಶ್‌ಗೌಡ ಉದ್ಘಾಟಿಸಿ ಅಧ್ಯಕ್ಷತೆವಹಿಸಲಿದ್ದಾರೆ. ಜಿಲ್ಲಾ ಶಾಲಾ ಶಿಕ್ಷಣ(ಪದವಿ ಪೂರ್ವ) ಇಲಾಖೆಯ ಉಪನಿರ್ದೇಶಕ ರಾಧಾ ಎಂ.ಎಸ್. ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎಸ್. ಸಿದ್ದಲಿಂಗಪ್ಪ ಉಪಸ್ಥಿತರಿರಲಿದ್ದಾರೆ.

ಇನ್‌ಫಾರ್ಮಟಿಕ್ಸ್ ಇಂಡಿಯಾ ಲಿಮಿಟೆಡ್‌ನ ಛೇರ್ಮನ್ ಮತ್ತು ವ್ಯವಸ್ಥಾಪಕ ನಿರ್ದೇಶಕ ಎನ್.ವಿ. ಸತ್ಯನಾರಾಯಣ, ಗಾಯತ್ರಿ ಜ್ಯುವೆಲರ್ಸ್ ನಾಗರಾಜು, ಹೆಬ್ಬೂರು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಂಜಣ್ಣ ಎಸ್. ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಪ್ರದೀಪ್ ಹೆಚ್.ಆರ್. ಭಾಗವಹಿಸಲಿದ್ದಾರೆ.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಕೋಲಾರ

ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್ ಮೆಂಟ್, ಸಹಕಾರ ತರಬೇತಿ ಸಂಸ್ಥೆಯು ಜುಲೈ 01 ರಿಂದ 6 ತಿಂಗಳ ಅವಧಿಯ ಡಿಪ್ಲೊಮಾ ಇನ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಯ ಅರ್ಜಿ ಸಲ್ಲಿಕೆಯ ಅವಧಿಯನ್ನು 10 ಜುಲೈ 2026 ರವರೆಗೆ ವಿಸ್ತರಿಸಲಾಗಿದೆ.

ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ, ಮತ್ತು ಬೆಂಗಳೂರು ದಕ್ಷಿಣ ಜಿಲ್ಲೆಗಳ ಖಾಸಗಿ ಅಭ್ಯರ್ಥಿಗಳಿಂದ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಅಭ್ಯರ್ಥಿಗಳಿಂದ ಮತ್ತು ಎಲ್ಲಾ ವಿವಿಧ ಸಹಕಾರ ಸಂಘ/ಬ್ಯಾಂಕ್‌ಗಳ ಉದ್ಯೋಗಿಗಳು ಅರ್ಜಿ ಸಲ್ಲಿಸಬಹುದು.

ತರಬೇತಿ ಪಡೆಯಲು ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಖಾಸಗಿ ಅಭ್ಯರ್ಥಿಗಳಿಗೂ ಸಹ ಪ್ರವೇಶ ಪಡೆಯಲು ಅವಕಾಶವಿರುತ್ತದೆ. ವಯೋಮಿತಿ 16 ವರ್ಷ ದಾಟಿದವರಾಗಿರಬೇಕು. ಅರ್ಜಿಯನ್ನು ಜುಲೈ 10 ರ ಒಳಗಾಗಿ ಸಲ್ಲಿಸಬೇಕು. ತರಬೇತಿ ಪಡೆಯುವ ಎಲ್ಲಾ ಅಭ್ಯರ್ಥಿಗಳಿಗೆ ಮಾಸಿಕ ರೂ. 500/– ಶಿಷ್ಯ ವೇತನ ನೀಡಲಾಗುವುದು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಅಭ್ಯರ್ಥಿಗಳಿಗೆ ಮಾಸಿಕ ರೂ. 600/– ಶಿಷ್ಯ ವೇತನ ನೀಡಲಾಗುವುದು, ಹೆಚ್ಚಿನ ವಿವರಗಳಿಗೆ ದೂ.080–35541407 ಅಥವಾ ಮೊ.90362 59781 ಸಂಪರ್ಕಿಸಬಹುದು ಅಥವಾ ಸಂಸ್ಥೆಯ ಕಚೇರಿ ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್ ,ಸಹಕಾರ ಭವನ,#1/3 , 2 ನೇ ಮಹಡಿ,3 ನೇ ಮುಖ್ಯ ರಸ್ತೆ, ಕನ್ನಡ ಸಾಹಿತ್ಯ ಪರಿಷತ್ ಹಿಂಭಾಗ, ಚಾಮರಾಜಪೇಟೆ ,ಬೆಂಗಳೂರು–18 ಇಲ್ಲಿಗೆ ಖುದ್ದಾಗಿ ಭೇಟಿ ನೀಡಬಹುದು ಎಂದು ಪ್ರಾಚಾರ್ಯರಾದ ಶೈಲಾ ಬಿ.ವಿ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬ್ರಿಕ್ಸ್ ಫ್ಯಾಕ್ಟರಿಯಲ್ಲಿ ಕೆಲಸ ಮಾಡುತ್ತಿರುವ ಇಬ್ಬರು ಬಾಲಕರು ಬಿಡುಗಡೆ

ಕೋಲಾರ

ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿನಲ್ಲಿ ದಿನಾಂಕ:21.04.2026ರಂದು ಎನ್.ಕೆ.ಆರ್., ಬ್ರಿಕ್ಸ್ (ಎನ್.ಎ.ಐ) ಮೊಹಮ್ಮದ್ ಇಬ್ರಾಹಿಂ ಖಾನ್ ಬಿನ್ ಅನ್ವರ್ ಖಾನ್, ರಾಮೇನಹಳ್ಳಿ, ಶಿವಾರಪಟ್ಟಣ ರಸ್ತೆ, ಮಾಲೂರು ಸಂಸ್ಥೆಗೆ ಮಾನ್ಯ ಉಪ ವಿಭಾಗಾಧಿಕಾರಿಗಳ ನೇತೃತ್ವದಲ್ಲಿ ವಿವಿಧ ಇಲಾಖೆಗಳೊಂದಿಗೆ ಜಂಟಿಯಾಗಿ ಭೇಟಿ ನೀಡಿ ಸ್ಥಳ ಪರಿಶೀಲನೆ ಮಾಡಿ ಓರಿಸ್ಸಾ ರಾಜ್ಯದ ಒಟ್ಟು 02 ಮಕ್ಕಳನ್ನು ಕೆಲಸದಿಂದ ಬಿಡುಗಡೆಗೊಳಿಸಲಾಗಿರುತ್ತದೆ.

ಮಾಲೂರು ಕಾರ್ಮಿಕ ನಿರೀಕ್ಷಕರು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ ಶ್ರೀ ಅನ್ವರ್ ಖಾನ್ ಬಿನ್ ಅಬ್ದುಲ್ ಅಜೀಜ್ ಖಾನ್ ಮಾಲೀಕರು ಮತ್ತು ಶ್ರೀ ಮೊಹಮ್ಮದ್ ಇಬ್ರಾಹಿಂ ಖಾನ್ ಬಿನ್ ಅನ್ವರ್ ಖಾನ್, ಮಾಲೀಕರ ಮಗ ಮತ್ತು ಬ್ರಿಕ್ಸ್ ಪ್ಯಾಕ್ಟರಿಯ ಉಸ್ತುವಾರಿದಾರರು, ಎನ್.ಕೆ.ಆರ್., ಬ್ರಿಕ್ಸ್ (ಎನ್.ಎ.ಐ), ರಾಮೇನಹಳ್ಳಿ, ಶಿವಾರಪಟ್ಟಣ ರಸ್ತೆ, ಮಾಲೂರು ಇವರ ವಿರುದ್ದ ಮೊಕ್ಕದ್ದಮೆ ದಾಖಲಿಸಿದ್ದು, ಸದರಿ ಪ್ರಕರಣದಲ್ಲಿ ದಿನಾಂಕ:25–06–2026 ರಂದು ಜೆಎಂಎಫ್‌ಸಿ ನ್ಯಾಯಾಲಯವು ಮಾಲೀಕರಿಗೆ ರೂ.40000/–ಗಳ ದಂಡ ವಿದಿಸಿರುತ್ತಾರೆ ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಸದಸ್ಯ ಕಾರ್ಯದರ್ಶಿಗಳು ಹಾಗೂ ಕಾರ್ಮಿಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿರಿಯ ನಾಗರಿಕರ ಗುರುತಿನ ಚೀಟಿ ವಿಶೇಷ ಅಭಿಯಾನ

ಕೋಲಾರ

2026ನೇ ಸಾಲಿನ ವಿಶ್ವ ಹಿರಿಯ ನಾಗರಿಕರ ದಿನಾಚರಣೆಯ ಅಂಗವಾಗಿ, ದಿ:01.07.2026 ರಿಂದ ದಿ:31.07.2026 ರವರೆಗೆ ರಾಜ್ಯಾದ್ಯಂತ “ಹಿರಿಯ ನಾಗರಿಕರ ಗುರುತಿನ ಚೀಟಿ ವಿಶೇಷ ಅಭಿಯಾನ”ವನ್ನು ಹಮ್ಮಿಕೊಳ್ಳಲಾಗಿರುವುದರಿಂದ ಸೇವಾ ಸಿಂಧು ಪ್ರೋಟಲ್ ನಲ್ಲಿ https://sevasindhuservices.karnataka.gov.in/ ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಿ ಹಿರಿಯ ನಾಗರೀಕರ ಗುರುತಿನ ಚೀಟಿಯನ್ನು ಪಡೆಯಲು ಆಧಾರ್ ಕಾರ್ಡ್, ಭಾವಚಿತ್ರ, ರಕ್ತದ ಗುಂಪು ಆನ್‌ಲೈನ್ ಅರ್ಜಿ ಸಲ್ಲಿಸುವುದರ ಮೂಲಕ ಹಿರಿಯ ನಾಗರೀಕರ ಗುರುತಿನ ಚೀಟಿ ಪಡೆಯಬಹುದು.

ಹೆಚ್ಚಿನ ಮಾಹಿತಿಗಾಗಿ ತಮ್ಮ ತಾಲ್ಲೂಕಿನ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರಾದ ಕೋಲಾರ ತಾಲ್ಲೂಕಿನ ರಾಜೇಶ್ 9986579688, ಬಂಗಾರಪೇಟೆ ಮತ್ತು ಕೆಜಿಎಫ್ ತಾಲ್ಲೂಕಿನ ಸುನೀಲ್ ಕುಮಾರ್ 8711924638, ಮಾಲೂರು ತಾಲ್ಲೂಕಿನ ಚೌಡಪ್ಪ 8904317589, ಮುಳಬಾಗಿಲು ತಾಲ್ಲೂಕಿನ ಬಾಬು ಎಂ.ಎನ್ 9739424583, ಶ್ರೀನಿವಾಸಗೌಡ ಶ್ರೀನಿವಾಸಪುರ ತಾಲ್ಲೂಕಿನ 7829126938, ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳ ಕಛೇರಿ 08152–200010 ಯನ್ನು ಸಂಪರ್ಕಿಸಬಹುದೆಂದು ಜಿಲ್ಲಾ ಕಛೇರಿಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ‘ಗುಣಮಟ್ಟದ ಹಾಲು ಪೂರೈಕೆ ಮಾಡಿ’



ಬೂದಿಕೋಟೆ

ರೈತರು ಉತ್ತಮ ಗುಣಮಟ್ಟದ ಹಾಲನ್ನು ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಪೂರೈಸಬೇಕು. ನೀವು ಡೈರಿಗೆ ಪೂರೈಸುವ ಹಾಲು ದೇಶದ ಗಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಯೋಧರಿಗೆ ಹಾಗೂ ತಿರುಪತಿ ಶ್ರೀ ವೆಂಕಟೇಶ್ವರ ಸ್ವಾಮಿಯ ಅಭಿಷೇಕ ಮತ್ತು ಲಡ್ಡು ತಯಾರಿಕೆಗೆ ಬಳಸಲಾಗುತ್ತದೆ ಎಂದು ಕೋಲಾರ ಹಾಲು ಒಕ್ಕೂಟದ ಕೆಜಿಎಫ್ ಕ್ಷೇತ್ರದ ನಿರ್ದೇಶಕ ಜಯಸಿಂಹ ಕೃಷ್ಣಪ್ಪ ಹೇಳಿದರು. ಬಂಗಾರಪೇಟೆ ತಾಲೂಕಿನ ತಪ್ಪನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ನೂತನವಾಗಿ ನಿರ್ಮಿಸಿರುವ ಎಂ.ವಿ.ಕೆ. ಸಭಾಂಗಣ ಹಾಗೂ ಪಶು ಆಹಾರ ದಾಸ್ತಾನು ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕೆಜಿಎಫ್ ಕ್ಷೇತ್ರವು ಕೋಲಾರ ಹಾಲು ಒಕ್ಕೂಟದಲ್ಲಿ ಅತಿ ಹೆಚ್ಚು ಹಾಲು ಪೂರೈಕೆ ಮಾಡುವ ಕ್ಷೇತ್ರವಾಗಿದೆ. ಈ ಭಾಗದ ರೈತರು ಪ್ರತಿದಿನ ಸುಮಾರು 1.25 ಲಕ್ಷ ಲೀಟರ್ ಹಾಲನ್ನು ಒಕ್ಕೂಟಕ್ಕೆ ಪೂರೈಸುತ್ತಿದ್ದು, ಮುಂದಿನ ವರ್ಷದೊಳಗೆ ಈ ಪ್ರಮಾಣ 1.50 ಲಕ್ಷ ಲೀಟರ್‌ಗೆ ತಲುಪುವ ವಿಶ್ವಾಸವಿದೆ ಎಂದು ಹೇಳಿದರು.

ಕೃಷಿ ಉತ್ಪನ್ನಗಳಿಗೆ ಸ್ಥಿರ ಬೆಲೆ ಇಲ್ಲದಿರುವ ಸಂದರ್ಭದಲ್ಲಿ ಹಾಲಿಗೆ ನಿಗದಿತ ದರ ದೊರೆಯುತ್ತಿರುವುದರಿಂದ ಸಾವಿರಾರು ರೈತರು ಹೈನುಗಾರಿಕೆಯನ್ನು ಅವಲಂಬಿಸಿ ಆರ್ಥಿಕವಾಗಿ ಸ್ವಾವಲಂಬಿಗಳಾಗಿದ್ದಾರೆ ಎಂದು ತಿಳಿಸಿದರು.

ಒಕ್ಕೂಟವು ನಿಗದಿತ ದರದಲ್ಲಿ ಹಾಲು ಸಂಗ್ರಹಿಸುತ್ತಿದ್ದು, ಹೆಚ್ಚಿನ ಪ್ರಮಾಣದಲ್ಲಿ ಹಾಗೂ ಉತ್ತಮ ಗುಣಮಟ್ಟದ ಹಾಲು ಪೂರೈಸುವ ರೈತರಿಗೆ ಪ್ರೋತ್ಸಾಹ ನೀಡುತ್ತಿದೆ. ರೈತರ ಆರ್ಥಿಕ ಸಬಲೀಕರಣವೇ ಪ್ರಮುಖ ಗುರಿಯಾಗಿದ್ದು, ಹಾಲು ಉತ್ಪಾದಕರಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.

ಹಾಲು ಸಂಗ್ರಹಣೆಯಲ್ಲಿ ಸಂಪೂರ್ಣ ಪಾರದರ್ಶಕತೆ ಕಾಯ್ದುಕೊಳ್ಳಲಾಗುತ್ತಿದ್ದು, ರೈತರಿಗೆ ಸಕಾಲದಲ್ಲಿ ಹಣ ಪಾವತಿಯಾಗುವ ವ್ಯವಸ್ಥೆ ಜಾರಿಯಲ್ಲಿದೆ. ಉತ್ತಮ ಗುಣಮಟ್ಟದ ಹಾಲಿಗೆ ಆದ್ಯತೆ ನೀಡುವ ಮೂಲಕ ಕೋಲಾರ ಜಿಲ್ಲೆಯನ್ನು ರಾಜ್ಯದಲ್ಲೇ ಮಾದರಿ ಹಾಲು ಉತ್ಪಾದನಾ ಜಿಲ್ಲೆಯನ್ನಾಗಿ ರೂಪಿಸಲಾಗಿದೆ ಎಂದರು.

ಪಶುಸಂಗೋಪನೆಗೆ ಹೆಚ್ಚಿನ ಒತ್ತು ನೀಡಲಾಗುತ್ತಿದ್ದು, ಉತ್ತಮ ತಳಿಯ ಜಾನುವಾರುಗಳ ಸಾಕಣೆ, ಪಶುವೈದ್ಯಕೀಯ ಸೇವೆಗಳು, ತಾಂತ್ರಿಕ ಮಾರ್ಗದರ್ಶನ ಹಾಗೂ ಅಗತ್ಯ ಸಬ್ಸಿಡಿ ಸೌಲಭ್ಯಗಳನ್ನು ರೈತರಿಗೆ ಒದಗಿಸಲು ಒಕ್ಕೂಟ ಬದ್ಧವಾಗಿದೆ ಎಂದು ಹೇಳಿದರು.

ಹಾಲು ಒಕ್ಕೂಟವು ರೈತರ ಆಸ್ತಿಯಾಗಿದ್ದು, ಅವರ ಹಿತಾಸಕ್ತಿಯನ್ನು ಕಾಪಾಡುವುದು ನಿರ್ದೇಶಕ ಮಂಡಳಿಯ ಜವಾಬ್ದಾರಿಯಾಗಿದೆ. ಡೈರಿ ಕ್ಷೇತ್ರದ ಸವಾಲುಗಳನ್ನು ರೈತರು ಮತ್ತು ಒಕ್ಕೂಟ ಪರಸ್ಪರ ಸಹಕಾರದಿಂದ ಎದುರಿಸಿದಾಗ ಮಾತ್ರ ಮತ್ತಷ್ಟು ಅಭಿವೃದ್ಧಿ ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಒಕ್ಕೂಟದ ವ್ಯವಸ್ಥಾಪಕ ಡಾ. ಚೇತನ್, ಡಾ. ಮುರಳಿ, ಉಪ ವ್ಯವಸ್ಥಾಪಕ ಡಾ. ಗಿರೀಶ್ ಗೌಡ, ಸಂಘದ ಅಧ್ಯಕ್ಷ ಕೆಂಪೇಗೌಡ, ಉಪಾಧ್ಯಕ್ಷ ಗುರಪ್ಪ, ಮಾಜಿ ಅಧ್ಯಕ್ಷ ಹಾಗೂ ಹಾಲಿ ನಿರ್ದೇಶಕ ಶ್ರೀನಿವಾಸ್, ಚಂಗಳರಾಯರೆಡ್ಡಿ, ಸಿಇಒ ರಾಮಚಂದ್ರ, ವಿಸ್ತರಣಾಧಿಕಾರಿಗಳಾದ ಸದಾಶಿವಯ್ಯ, ಭಾನುಪ್ರಕಾಶ್, ನಟರಾಜ್, ಅಂಬರೀಶ್, ವಿನೋದ್ ರೆಡ್ಡಿ, ಸಂಘದ ನಿರ್ದೇಶಕರು, ಹಾಲು ಉತ್ಪಾದಕರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಶಿಕ್ಷಣ-ಉದ್ಯಮ ನಡುವಿನ ಅಂತರ ಕಡಿಮೆಗೊಳಿಸಲು ಎಸ್‌ಐಯು ಹೊಸ ಹೆಜ್ಜೆ



ತಿರುಪತಿ

ಶಿಕ್ಷಣ ಮತ್ತು ಉದ್ಯಮ ಕ್ಷೇತ್ರಗಳ ನಡುವಿನ ಅಂತರವನ್ನು ಕಡಿಮೆಗೊಳಿಸಿ ವಿದ್ಯಾರ್ಥಿಗಳನ್ನು ಉದ್ಯೋಗಕ್ಕೆ ಸಜ್ಜುಗೊಳಿಸುವ ಉದ್ದೇಶದಿಂದ ರೂಪಿಸಲಾದ ಕೆಲಸ–ಅಧ್ಯಯನ ದ್ವಂದ್ವ ಮಾದರಿ ಶಿಕ್ಷಣ ವ್ಯವಸ್ಥೆಗೆ ಶ್ರೀಸಿಟಿ ಅಂತರರಾಷ್ಟ್ರೀಯ ವಿಶ್ವವಿದ್ಯಾಲಯದಲ್ಲಿ ಅಧಿಕೃತ ಚಾಲನೆ ನೀಡಲಾಯಿತು.

ಆಂಧ್ರಪ್ರದೇಶ ಸರ್ಕಾರದ ಮಾನವ ಸಂಪನ್ಮೂಲ, ಮಾಹಿತಿ ತಂತ್ರಜ್ಞಾನ, ಎಲೆಕ್ಟ್ರಾನಿಕ್ಸ್ ಮತ್ತು ಸಂವಹನ ಸಚಿವ ನಾರಾ ಲೋಕೇಶ್ ಅವರು ವಿಶ್ವವಿದ್ಯಾಲಯದ ಮಧ್ಯಂತರ ಕ್ಯಾಂಪಸ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿಶ್ವವಿದ್ಯಾಲಯವನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಜಾಗತಿಕ ಸಲಹಾ ಮಂಡಳಿ, ಆಡಳಿತ ಮಂಡಳಿ ಸದಸ್ಯರು ಹಾಗೂ ವಿವಿಧ ಕೈಗಾರಿಕಾ ಸಂಸ್ಥೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

ದೇಶದಲ್ಲಿ ಪ್ರತಿ ವರ್ಷ ಲಕ್ಷಾಂತರ ವಿದ್ಯಾರ್ಥಿಗಳು ಪದವಿ ಪಡೆದರೂ, ಉದ್ಯೋಗಕ್ಕೆ ಅಗತ್ಯವಾದ ಕೌಶಲ್ಯದ ಕೊರತೆಯಿಂದ ಹೆಚ್ಚಿನವರಿಗೆ ಉದ್ಯೋಗ ದೊರೆಯುತ್ತಿಲ್ಲ. ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ವಿಶ್ವವಿದ್ಯಾಲಯವು ಹೊಸ ಶಿಕ್ಷಣ ಮಾದರಿಯನ್ನು ಪರಿಚಯಿಸಿದೆ.

ಈ ದ್ವಂದ್ವ ಮಾದರಿಯಲ್ಲಿ ವಿದ್ಯಾರ್ಥಿಗಳು ತಮ್ಮ ಸಮಯದ ಒಂದು ಭಾಗವನ್ನು ತರಗತಿ ಕಲಿಕೆಗೆ ಮೀಸಲಿಡಲಿದ್ದು, ಉಳಿದ ಸಮಯವನ್ನು ವಿವಿಧ ಕೈಗಾರಿಕಾ ಸಂಸ್ಥೆಗಳಲ್ಲಿ ತರಬೇತಿ ಪಡೆಯುತ್ತಾ ಕೆಲಸ ಮಾಡುವ ಮೂಲಕ ಪ್ರಾಯೋಗಿಕ ಅನುಭವ ಸಂಪಾದಿಸಲಿದ್ದಾರೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy